# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 522(828) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 26.12.2022 |

<table>
<tr><th>ಕ್ರಮ. ಸಂಖ್ಯೆ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಎಷ್ಟು ಸರ್ಕಾರಿ/ಖಾಸಗಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ; ಹಾಗೂ ವಿಶ್ವವಿದ್ಯಾಲಯ ಪ್ರಾರಂಭಿಸಲು ಇರುವ ಮಾನದಂಡಗಳೇನು; (ಪ್ರತ್ಯೇಕ ವಿವರ ನೀಡುವುದು)</td><td>ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ವಿವರ :-<br><br>
<table>
<tr><th>ಕ್ರ. ಸಂ.</th><th>ಸರ್ಕಾರಿ ವಿಶ್ವವಿದ್ಯಾಲಯಗಳ ಸಂಖ್ಯೆ</th><th>ಖಾಸಗಿ ವಿಶ್ವವಿದ್ಯಾಲಯಗಳ ಸಂಖ್ಯೆ.</th></tr>
<tr><td>1</td><td>25</td><td>25</td></tr>
</table>
<br>ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಸಂಬಂಧಿಸಿದ ಮಾನದಂಡಗಳನ್ನು <u>ಅನುಬಂಧ -1</u>ರಲ್ಲಿ ಒದಗಿಸಲಾಗಿದೆ.<br><br>ರಾಜ್ಯದಲ್ಲಿನ ಶೈಕ್ಷಣಿಕ ಸಂಸ್ಥೆಗಳ ಪ್ರದೇಶವಾರು ಹಂಚಿಕೆಯಲ್ಲಿ ಕಂಡುಬರಬಹುದಾದಂತಹ ಅಸಮತೋಲನ ಹಾಗೂ ವೈಪರಿತ್ಯಗಳನ್ನು ಸರಿಪಡಿಸಲು, ಎಲ್ಲಾ ವರ್ಗದವರಿಗೂ ಬಹುವಿಷಯಕ ಉನ್ನತ ಶಿಕ್ಷಣವನ್ನು ಒದಗಿಸಿ, ಸಂಶೋಧನೆಗೆ ತೊಡಗಿಸಿಕೊಳ್ಳುವಂತೆ ಮಾಡಲು ಸನ್ನಿವೇಶಗಳ ಹಾಗೂ ಬೇಡಿಕೆಗಳಿಗೆ ಅನುಗುಣವಾಗಿ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗುತ್ತದೆ.</td></tr>
<tr><td>(ಆ)</td><td>ಈ ಸರ್ಕಾರಿ ವಿಶ್ವವಿದ್ಯಾನಿಲಯಗಳಲ್ಲಿ ಉಪ-ಕುಲಪತಿ ಮತ್ತು ನೋಂದಣಾಧಿಕಾರಿಗಳೆಷ್ಟು; (Register Adm) VC & Register ಗಳಿಗೆ ಯಾವ ಹಂತದ ಸವಲತ್ತುಗಳನ್ನು ನೀಡಲಾಗುತ್ತದೆ; ಇದಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ; (ಪ್ರತಿ ವಿಶ್ವವಿದ್ಯಾಲಯದ ವಿವರ ನೀಡುವುದು)</td><td>ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿರುವ ಉಪ-ಕುಲಪತಿ ಮತ್ತು ಕುಲಸಚಿವರ ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ<br><br>ಸದರಿ ಹುದ್ದೆಗಳಿಗೆ ನೇಮಕಾತಿ ಆದೇಶಗಳಲ್ಲಿರುವಂತೆ ವೇತನ ಮತ್ತು ಇತರೆ ಭತ್ಯೆಗಳನ್ನು ಪಾವತಿಸಲಾಗುತ್ತದೆ.</td></tr>
</table>

| | | |
|---|---|---|
| | | ಆಯವ್ಯಯದಲ್ಲಿ ಆಯಾ ಆರ್ಥಿಕ ವರ್ಷಕ್ಕೆ ಪ್ರತಿ ವಿಶ್ವವಿದ್ಯಾಲಯಗಳಿಗೂ ಆರ್ಥಿಕ ಇಲಾಖೆಯಿಂದ ಅನುದಾನ ನಿಗಧಿಪಡಿಸಲಾಗುತ್ತದೆ ಅದರಂತೆ ಸದರಿ ಅನುದಾನವನ್ನು ನಾಲ್ಕು ಸಮಾನ ಕಂತುಗಳಲ್ಲಿ ವಿಶ್ವವಿದ್ಯಾಲಯಗಳಿಗೆ ಬಿಡುಗಡೆಮಾಡಲಾಗುತ್ತದೆ |
| **(ಇ)** | ಉಪ-ಕುಲಪತಿ ಹಾಗೂ ರಿಜಿಸ್ಟ್ರಾರ್‌ಗಳ ನೇಮಕಾತಿಗಾಗಿ ಅಳವಡಿಸಿದ ಮಾನದಂಡವೇನು; | ಉಪ-ಕುಲಪತಿ ಹಾಗೂ ರಿಜಿಸ್ಟ್ರಾರ್‌ಗಳ ನೇಮಕಾತಿಗಾಗಿ ಇರುವ ಮಾನದಂಡಗಳನ್ನು **ಅನುಬಂಧ-3ರಲ್ಲಿ** ಒದಗಿಸಲಾಗಿದೆ. |
| **(ಈ)** | ಎಷ್ಟು ವಿಶ್ವವಿದ್ಯಾಲಯಗಳು ಸ್ವಂತ ಕಟ್ಟಡ ಹಾಗೂ ಭೂಮಿ ಹೊಂದಿದೆ? (ವಿವರ ನೀಡುವುದು) | ವಿವರಗಳನ್ನು **ಅನುಬಂಧ-4ರಲ್ಲಿ** ಒದಗಿಸಲಾಗಿದೆ. |

**ಸಂಖ್ಯೆ: ಇಡಿ/ 453 /ಯುಆರ್‌ಸಿ /2022**

**ಡಾ. ಅಶ್ವತ್ಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ – ಬಿಟಿ ಮತ್ತು ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ
ಉದ್ಯಮಶೀಲತೆ ಸಚಿವರು

ಅನುಬಂಧ - 1

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪ್ರತ್ಯೇಕ ಅಧಿನಿಯಮದ ಮೂಲಕ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧದ ಮಾರ್ಗಸೂಚಿಗಳಿಗೆ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-

ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಉಶಿಪ/ಖಾ.ವಿ.ಕರಡು ನಿಯಮ/ಜಿ.ಎಫ್.255/2013-14/ 118, ದಿ: 4-6-2016.

---

ಪ್ರಸ್ತಾವನೆ:-

ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆ ಕುರಿತು ಕರಡು ನಿಯಮಗಳನ್ನು ರಚಿಸಲು ನೇಮಿಸಲಾಗಿದ್ದ ಸಮಿತಿಯು ತನ್ನ ಶಿಫಾರಸ್ಸುಗಳನ್ನು ಸಲ್ಲಿಸಿದ್ದು, ಸದರಿ ಶಿಫಾರಸ್ಸುಗಳಿಗೆ ದಿ: 5-5-2016 ರಂದು ಜರುಗಿದ ಪರಿಷತ್ತಿನ 16ನೇ ಸಾಮಾನ್ಯ ಸಭೆಯು ಅನುಮೋದನೆ ನೀಡಿರುತ್ತದೆ. ಸದರಿ ಕರಡು ನಿಯಮಗಳಿಗೆ ಮತ್ತು ಇದಕ್ಕೆ ಸಂಬಂಧಿಸಿದ ನಿಗದಿತ ನಮೂನೆಗಳಿಗೆ ಹಲವಾರು ಅಂಶಗಳನ್ನು ಮಾರ್ಪಾಡು/ಸೇರ್ಪಡೆ ಮಾಡಬೇಕಾಗುತ್ತದೆ. ಸದರಿ ಕರಡು ನಿಯಮಗಳನ್ನು/ಮಾರ್ಗಸೂಚಿಗಳನ್ನು ಅಧಿನಿಯಮಗಳಿಗೆ ಹಾಗೂ ನಿಗದಿತ ನಮೂನೆಗಳಿಗೆ ಸೇರಿಸದಿದ್ದಲ್ಲಿ ವ್ಯತಿರಿಕ್ತವಾಗುತ್ತದೆ. . ಸಂಬಂಧಪಟ್ಟ ಖಾಸಗಿ ವಿಶ್ವವಿದ್ಯಾಲಯದ ಅಧಿನಿಯಮಗಳಿಗೆ ತಿದ್ದುಪಡಿ ತಂದು ಸೇರಿಸಬೇಕಾಗುತ್ತದೆ. ಆದ್ದರಿಂದ ಅಧಿನಿಯಮಗಳಲ್ಲಿ ಕೆಲವು ನ್ಯೂನತೆಗಳಿರುವುದರಿಂದ ಅವುಗಳನ್ನು ಸಹ ಗಮನಿಸಿ ಈಗಾಗಲೇ ರಚಿಸಲಾದ ಸಮಿತಿಯ ಮುಂದೆ ಮಂಡಿಸಿ ಅಧಿನಿಯಮಗಳಿಗೆ ಉದ್ದೇಶಿತ ತಿದ್ದುಪಡಿಗಳನ್ನು ಸಮಗ್ರವಾಗಿ ಸೂಚಿಸಬಹುದಾಗಿದೆ. ಖಾಸಗಿ ವಿಶ್ವವಿದ್ಯಾಲಯದ ಸ್ಥಾಪನೆಯ ಕರಡು ನಿಯಮಗಳಲ್ಲಿರುವಂತೆ ಅಧಿನಿಯಮದಲ್ಲೂ ಸಹ ತಿದ್ದುಪಡಿ ತಂದು ವ್ಯತಿರಿಕ್ತವಾಗದಂತೆ ನೋಡಿಕೊಳ್ಳಲು ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 449 ಯುಆರ್‌ಸಿ 2016, ಬೆಂಗಳೂರು., ದಿನಾಂಕ: 24-1-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರತ್ಯೇಕ ಅಧಿನಿಯಮದ ಮೂಲಕ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧದ ಈ ಕೆಳಕಂಡ ಮಾರ್ಗಸೂಚಿಗಳಿಗೆ ಹಾಗೂ ನಮೂನೆಗೆ ಸರ್ಕಾರದ ಅನುಮೋದನೆ ನೀಡುತ್ತಾ, ಎಲ್ಲಾ ವಿದ್ಯಾಸಂಸ್ಥೆಗಳು ಇದರ ಲಾಭ ಮತ್ತು ಮಾರ್ಗದರ್ಶನ ಪಡೆಯುವ ಸಲುವಾಗಿ ಸದರಿ ಮಾರ್ಗಸೂಚಿಗಳಿಗೆ ವ್ಯಾಪಕ ಪ್ರಚಾರ ನೀಡುವಂತೆ ಆದೇಶಿಸಲಾಗಿದೆ.

## GUIDELINES FOR THE ESTABLISHMENT OF PRIVATE UNIVERSITIES BY SEPARATE ACT

PREAMBLE -

Ever since Indian Independence, providing education to the children has been the prime focus of the country. In order to enhance equitable access and to ensure the fulfilment of national social goals, obligations as well as purposes, the private sector has been encouraged to invest in the sphere of education, at different levels, viz., primary, secondary and higher. It is a matter of satisfaction that several private sector players have already started their educational institutions to cater to education requirements of the needy at all the three levels. The Karnataka State has been one of the early champions in engaging the private sector to complement and reinforce its efforts. To provide greater autonomy to private sector for achieving global standards of excellence in higher education, the concept of establishing State Private Universities has been introduced by Karnataka State Government. In order to establish transparent and accountable academic, organizational and financial management systems in State Private Universities, KSHEC has formulated the following guidelines:

1. Each Private University in Karnataka shall be established under a separate Act by a Sponsoring Body which may be in the form of:

   *(a) Society registered under the Societies Registration Act 1860 (or any other corresponding law in force in the State), OR*
   *(b) Public Trust registered under the Public Trust Act, 1866, OR*
   *(c) Company registered under Section 25 of the Companies Act, 1956.*

2. The Sponsoring Body can apply to Karnataka State Government through KSHEC for the establishment of a Private University, if it has
   - *25 Acres of land within the limits of Bruhat Bengaluru Mahanagara Palike (BBMP) and Bengaluru Metropolitan Regional Development Authority (BMRDA) OR 35 Acres of land within City Corporation Limits of Mysuru, Mangaluru, Hubballi, Bellari, Gulburga, and Belagavi OR 50 Acres of land at other places*
   - *adequate financial resources for creating the specified Statutory Funds and conducting the University affairs and*
   - *experience/ expertise in running higher Education Institutions,.*

3. The Sponsoring Body shall obtain the proposal format for the establishment of State Private University from KSHEC on payment of non-refundable fee of Rs. TEN THOUSAND ONLY in the form of Demand Draft drawn in favour of Executive Director, KSHEC, Bengaluru payable at Bengaluru.

4. The Sponsoring Body shall submit SEVEN HARD COPIES AND ONE SOFT COPY of the proposal along with requisite Annexures, Enclosures, Undertakings and Declarations to the Executive Director, KSHEC, Bengaluru along with a non-refundable PROCESSING FEE of Rs. TEN LAKHS ONLY in the form of Demand Draft drawn in favour of Executive Director, KSHEC, Bengaluru payable at Bengaluru with ONE HARD COPY AND ONE SOFT COPY to the Secretary/Principal Secretary/Additional Chief Secretary of Higher Education Department, Government of Karnataka.

5. The office of the Executive Director shall examine the proposal and may call for such other information from the Sponsoring Body as it may deem necessary to initiate further action.

6. The Executive Director, in consultation with the Vice Chairman and the Chairman of KSHEC, shall constitute a Screening Committee with a minimum of FIVE members consisting of Vice-Chancellors / former Vice-Chancellors / Education Experts including Executive Director of KSHEC as Member Secretary to carry out on-the-spot inspection and submit a report.

7. The Executive Director shall forward the Screening Committee Report to the Secretary/Principal Secretary/Additional Chief Secretary of Higher Education for further action.

8. The Secretary/Principal Secretary/Additional Chief Secretary shall communicate to the Sponsoring Body about the final decision of the State Government on the proposal.

# KARNATAKA STATE HIGHER EDUCATION COUNCIL (KSHEC), BENGALURU

## PROPOSAL FOR ESTABLISHING A PRIVATE UNIVERSITY IN KARNATAKA STATE

*(Please refer to the guidelines attached with the format before filing the proposal)*

| | | | |
|---|---|---|---|
| 1 PARTICULARS OF THE SPONSORING BODY | | | |
| a | Name of Sponsoring Body | | |
| b | Whether it is Registered Society/ Public Trust/ Company? | | |
| c | Contact Details | Postal Address | |
| | | Phone | |
| | | Fax | |
| | | Email ID | |
| | | Website | |
| e | Date of Registration of Sponsoring Body (A copy of the Registration Document to be enclosed with the Proposal as Annexure A) | | |
| f | List of Higher Educational Institutions established by Sponsoring Body, if any. (Copy of the latest Annual Report of Sponsoring Body to be enclosed with the Proposal as Annexure B) | Inside Karnataka | |
| | | Outside Karnataka, but inside India | |
| | | Outside India | |
| 2 | PARTICULARS OF THE AUTHORIZED SIGNATORY OF THE SPONSORING BODY TO TAKE DECISIONS ON ITS BEHALF | | |
| a | Name of the authorized Signatory | | |
| b | Designation | | |
| c | Contact Details | Postal Address | |
| | | Phone | |
| | | Mobile | |
| | | Fax | |
| | | Email address | |
| 3 PARTICULARS OF THE PROPOSED UNIVERSITY | | | |
| a | Name of the proposed University | | |
| | Place of Location of Main Campus with the nature of area (Indicate one) | Place of location<br>• *Within the limits of BBMP and BMRDA*<br>• *within the City Corporation Limits of Mysuru, Mangaluru, Hubballi, Bellari, Gulburga, and Belagavi*<br>• *other places* | |
| b | Full Postal Address with pin code | | |

| | | | | | | |
|---|---|---|---|---|---|---|
| c | Land area in possession of Sponsoring Body set apart and approved for the University (A copy of the Record of Rights or Khata Certificate issued by the Competent Authority to be enclosed with the proposal as Annexure C) | Area (in Acres) | Survey Nos. | Hobli | Taluk | District |
| | | | | | – | |

| | | | |
|---|---|---|---|
| d | Proposed University Type (Indicate one) | New University | Existing Campus / Institution(s) |
| | | | |

| | | | |
|---|---|---|---|
| E | If it is an existing Campus / Institution(s), indicate the present status | Name of Campus / Institution(s) | |
| | | Type of Campus / Institution(s)<br>• Affiliated<br>• Autonomous<br>• Others | |
| | | Type of Programmes<br>• General<br>• Professional<br>• Others | |
| | | List of Programmes<br>• At UG<br>• At PG<br>• Others | |
| | | Name of Affiliating University(s) | |
| | | Details of approval received from Statutory / Regulatory Body(s)? | |
| | | Accreditation Details such as list of accredited programmes, name(s) of Accrediting Body(s), Validity Date(s) | |
| | | Any other information supporting its Academic Stature | |

4 DETAILS OF THE PROPOSAL (Enclosures may be attached, if space is insufficient)

| | | |
|---|---|---|
| a | Aims and Objectives of the Proposed University | |
| b | Justification for the establishment of the University | |
| c | List of Faculties and Departments proposed for first FIVE years | |
| d | Nature and type of Programmes proposed for first FIVE years | |
| e | Physical Infrastructure/Other On-Campus Facilities proposed at the main campus | |

| | | | |
|---|---|---|---|
| f | Annual growth of the University in first Five Years | Student strength | Staff Strength |
| g | Procedure for Faculty/Staff recruitment | | |
| h | Procedure for admission of students to various programmes of study at the University | | |
| i | Phased outlays of capital expenditure planned for a period of FIVE academic years immediately following the commencement date | | |
| j | Item-wise estimated recurring expenditure and estimated average expenditure per student (UG/PG separately) | | |
| k | Scheme of generation of funds through the recovery of tuition and other fees from students, revenues anticipated from consultancy and other activities relating to the objects of the University and other anticipated incomes; | | |
| l | Scheme for mobilizing resources and the manner of repayments to each source, if any | | |
| m | Types of proposed student support offered like fee-waivers, free-ship and scholarship etc | | |
| n | Experience and expertise in the concerned discipline at the command of the Sponsoring Body as well as the financial resources | | |
| o | National/international collaborations of the University proposed, if any, along with the expected time frame | | |
| p | Long-term Strategic Plan of the University along with means of financing its planned development | | |
| q | Status of fulfillment of such other conditions as may be required by the State Government before the establishment of the proposed University | | |
| 5 | ANNEXURES TO BE ENCLOSED WITH THE PROPOSAL | | |
| a | Memorandum of Association / Bye Laws of the Sponsoring Body (to be enclosed as Annexure D) | | |
| b | Audited Statements of Accounts of the Sponsoring Body for the previous three years or from the date of registration in case of newly registered Sponsoring Body, (to be enclosed as Annexure E1, E2, E3) | | |
| c | Proposal of the University, if any, to start Special Programmes/Schemes of benefit to Farmers / Womeh / Industrial Workers etc (to be enclosed as Annexure F) | | |
| d | Master Plan for the proposed main campus & details of other campuses, if any (to be enclosed as Annexure G) | | |
| e | Any other Document relevant to the Proposal (Please Specify and to be enclosed as Annexure H) | | |

| 6 LIST OF UNDERTAKINGS TO BE GIVEN BY THE SPONSORING BODY | | |
|---|---|---|
| a | Create adequate facilities at the University for teaching, research, examinations and other requirements related to Programmes proposed and in accordance with the rules of UGC and other Statutory/Regulatory Bodies concerned (details to be enclosed as Annexure I) | |
| b | Produce evidence of having sufficient funds or of its capacity to invest required funds for establishment and maintenance of the proposed University (details to be enclosed as Annexure J) | |
| c | Create Permanent Statutory Endowment Fund, University Endowment Fund and such other Statutory Funds to be managed as per the rules in this regard (details to be enclosed as Annexure K) | |
| d | Declare that all movable and immovable properties of the campus already established, if any and those established after the declaration of the University, shall remain legally vested in the name of the University (Declaration to be enclosed as Annexure L) | |
| e | Confirm that the income from the property of the University howsoever derived shall be utilized only for the promotion of the Objects of the University including its growth and development (Declaration to be enclosed as Annexure M) | |
| f | Abide by the UGC (Establishment and Maintenance of Standards in Private Universities) Regulation, 2003 and its amendments, if any, on being conferred the University status and also the Rules/ Regulations of the relevant Statutory Bodies issued from time to time (Declaration to be enclosed as Annexure N) | |
| g | Agree to provide any other undertaking required by the State Government/KSHEC relevant to the Proposal (Declaration to be enclosed as Annexure O) | |

| 7 DETAILS OF THE PAYMENTS | | | | | |
|---|---|---|---|---|---|
| a | Proposal Application Format Fee | Amount | DD # | Bank | Issue Date |
| | | | | | |
| b | Proposal Processing Fee | Amount | DD # | Bank | Issue Date |
| | | | | | |

This is to certify that the information provided above is true and correct to the best of our knowledge and belief. We are also aware that our proposal is liable to be rejected if there

are any errors or incorrect Declarations in the above information.

Date:

Place:

Authorized Signatory of Sponsoring Body
with Seal of Sponsoring Body

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

ಇವರಿಗೆ:-

1. ಅಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಅರಮನೆ ರಸ್ತೆ, ಬೆಂಗಳೂರು.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಅರಮನೆ ರಸ್ತೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಅರಮನೆ ರಸ್ತೆ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ).
6. ಸರ್ಕಾರದ ಉಪಕಾರ್ಯದರ್ಶಿಗಳ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).
7. ರಕ್ಷಣಾ ಕಡತ/ಹೆಚ್ಚುವರಿ ಪ್ರತಿ.

---

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧವಾಗಿ ಕನಿಷ್ಠ ಪ್ರಮಾಣದ ಜಮೀನಿನ ಲಭ್ಯತೆಯ ಮಾನದಂಡವನ್ನು ಮರು-ನಿಗದಿಪಡಿಸುವ ಬಗ್ಗೆ- ಆದೇಶ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಇಡಿ/ 449 /ಯುಆರ್‌ಸಿ /2016, ದಿನಾಂಕ: 24.01.2017.
2. ಸರ್ಕಾರದ ತಿದ್ದುಪಡಿ ಸಂಖ್ಯೆ: ಇಡಿ/49/ಯುಆರ್‌ಸಿ/2020, ದಿನಾಂಕ: 18-03-2020.

*******

**ಪ್ರಸ್ತಾವನೆ:**

ಓದಲಾದ ಕ್ರಮಸಂಖ್ಯೆ: (1)ರ ಸರ್ಕಾರದ ಆದೇಶದಲ್ಲಿ, ಪ್ರತ್ಯೇಕ ಅಧಿನಿಯಮಗಳ ಮೂಲಕ ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧವಾಗಿ ಸಲ್ಲಿಸಬೇಕಾದ ಅರ್ಜಿ ನಮೂನೆ, ಹೊಂದಿರಬೇಕಾದ ಜಮೀನಿನ ಬಗ್ಗೆ ಹಾಗೂ ಇತರೇ ವಿಷಯಗಳ ಬಗ್ಗೆ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿರುತ್ತದೆ.

ಓದಲಾದ ಕ್ರಮಸಂಖ್ಯೆ: (2)ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ, ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧದಲ್ಲಿ ಮೇಲೆ ಓದಲಾದ ಕ್ರಮಸಂಖ್ಯೆ: (1)ರ ಸರ್ಕಾರದ ಆದೇಶದಂತೆ ಹೊಂದಿರಬೇಕಾದ ಜಮೀನಿನ ಮಾನದಂಡಗಳನ್ನು ಮಾರ್ಪಾಡು ಮಾಡಲಾಗಿರುತ್ತದೆ.

ರಾಜ್ಯದಲ್ಲಿ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಮತ್ತು ಸಂದರ್ಭಾನುಸಾರವಾಗಿ ಸುಲಲಿತ ಆಡಳಿತವನ್ನು ರೂಪಿಸುವ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧವಾಗಿ ಹೊಂದಿರಬೇಕಾದ ಕನಿಷ್ಠ ಭೂಮಿ / ಜಮೀನಿನ ಮಾನದಂಡಗಳನ್ನು ಪಸಕ್ತ ಸನ್ನಿವೇಶಗಳಿಗೆ ಅನುಗುಣವಾಗಿ ಪರಿಷ್ಕರಿಸುವುದು ಯುಕ್ತವೆಂದು ತೀರ್ಮಾನಿಸಿ, ರಾಜ್ಯದ ಎಲ್ಲಾ ಪ್ರದೇಶಗಳಲ್ಲೂ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಕನಿಷ್ಠ 20 ಎಕರೆ ಭೂಮಿಯನ್ನು ನಿಗದಿಪಡಿಸಿ, ಸದರಿ ವಿಸ್ತೀರ್ಣವು ಮಹಾನಗರ ಪಾಲಿಕೆ, ನಗರ ಪಾಲಿಕೆ, ಜೊತೆಗೆ ಅದಕ್ಕೆ ಸಂಬಂಧಿಸಿದಂತಿರುವ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಗಳಿಗೆ ಸೀಮಿತಗೊಂಡಂತೆ ಹಾಗೂ ಕಂದಾಯ ತಾಲ್ಲೂಕುವಾರು ಒಂದು ಘಟಕ (Single Block) ಅಥವಾ ಎರಡು ಘಟಕಗಳಲ್ಲಿ (Two Block) ಇರತಕ್ಕದೆಂದು ತೀರ್ಮಾನಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ/289/ಯುಆರ್‌ಸಿ/2022,**
**ಬೆಂಗಳೂರು, ದಿನಾಂಕ: 17/12/2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಡಿ /449 /ಯುಆರ್‌ಸಿ / 2016, ದಿನಾಂಕ: 24.01.2017 ಜೊತೆಯಲ್ಲಿ ಓದಲಾದ ತಿದ್ದುಪಡಿ ಸಂಖ್ಯೆ: ಇಡಿ/49/ಯುಆರ್‌ಸಿ/2020, ದಿನಾಂಕ: 18-03-2020ರ ಆದೇಶ ಭಾಗದ ಕ್ರಮ ಸಂಖ್ಯೆ: 2 ನ್ನು ಮಾರ್ಪಡಿಸಿ, ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಕನಿಷ್ಠ ಪ್ರಮಾಣದ ಜಮೀನು ಲಭ್ಯತೆಯ ಮಾನದಂಡವನ್ನು ಈ ಕೆಳಕಂಡಂತೆ ಪರಿಷ್ಕರಿಸಿ ನಿಗದಿಪಡಿಸಿ ಆದೇಶಿಸಲಾಗಿದೆ.

**2.** ರಾಜ್ಯದ ಎಲ್ಲಾ ಪ್ರದೇಶಗಳಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು **ಕನಿಷ್ಠ 20 ಎಕರೆ** ಭೂಮಿಯ ಒಡೆತನವನ್ನು ಈ ಕೆಳಕಂಡಂತೆ ಪ್ರದೇಶವಾರು ನಿಗದಿಪಡಿಸಲಾಗಿದೆ.

**ಎ)** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜೊತೆಗೆ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗಳನ್ನು ಒಳಗೊಂಡ ಪೂರ್ಣ ಪ್ರದೇಶದಲ್ಲಿ ಭೂಮಿಯು ಒಂದು ಘಟಕ (Single Block) ಅಥವಾ ಎರಡು ಘಟಕಗಳಲ್ಲಿ (Two Block) ಮಾತ್ರ ಇರತಕ್ಕದ್ದು.

**ಬಿ)** ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಕಲಬುರಗಿ, ತುಮಕೂರು, ಬಳ್ಳಾರಿ, ಶಿವಮೊಗ್ಗ, ದಾವಣಗೆರೆ ಮತ್ತು ವಿಜಯಪುರ ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಮತ್ತು ಅದಕ್ಕೆ ಸಂಬಂಧಿಸಿದ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಒಂದು ಘಟಕ (Single Block) ಅಥವಾ ಎರಡು ಘಟಕಗಳಲ್ಲಿ (Two Block) ಮಾತ್ರ ಇರತಕ್ಕದ್ದು.

**ಸಿ)** ಮೇಲಿನ (ಎ) ಮತ್ತು (ಬಿ) ಪ್ರದೇಶಗಳನ್ನು ಹೊರತುಪಡಿಸಿ, ಇತರೆ ಪ್ರದೇಶಗಳಲ್ಲಿ ಆಯಾ ಕಂದಾಯ ತಾಲ್ಲೂಕಿನ ಪೂರ್ಣ ಪ್ರದೇಶದ ವ್ಯಾಪ್ತಿಯಲ್ಲಿ ಒಂದು ಘಟಕ (Single Block) ಅಥವಾ ಎರಡು ಘಟಕಗಳಲ್ಲಿ (Two Block) ಮಾತ್ರ ಇರತಕ್ಕದ್ದು.

ಉಳಿದಂತೆ, ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಡಿ /449 /ಯುಆರ್‌ಸಿ/ 2016, ದಿನಾಂಕ: 24.01.2017ರಲ್ಲಿ ನಿಗದಿಪಡಿಸಿರುವ ಮಾರ್ಗಸೂಚಿಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಂದಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ.
(ವಿಶ್ವವಿದ್ಯಾಲಯಗಳು-2)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ)/(ಇ&ಆರ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5359 , ಬೆಂಗಳೂರು-560001 (3 ಪ್ರತಿಗಳು).
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ನಂ. 30, ಪ್ರಸನ್ನ ಕುಮಾರ್ ಬ್ಲಾಕ್, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಆವರಣ, ಮೈ. ರಾಮಚಂದ್ರ ರಸ್ತೆ, ಗಾಂಧಿನಗರ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ,
6. ನೋಡಲ್ ಅಧಿಕಾರಿ, ಮಾಹಿತಿ ಕೇಂದ್ರ ಶಾಖೆ (ರಾಜ್ಯಪತ್ರದಲ್ಲಿ ಪ್ರಕಟಿಸಲು) ಉನ್ನತ ಶಿಕ್ಷಣ ಇಲಾಖೆ,
7. ಹೆಚ್ಚಿನ ಪ್ರತಿ/ರಕ್ಷಾ ಕಡತ/ಕಛೇರಿ ಪ್ರತಿ.

ಅನುಬಂಧ-2

| ಕ್ರ.ಸಂ | ವಿಶ್ವವಿದ್ಯಾಲಯದ ಹೆಸರು | ಕುಲಪತಿ/ಉಪ ಕುಲಪತಿ ಸಂಖ್ಯೆ | ಕುಲಸಚಿವ (ಆಡಳಿತ) ಸಂಖ್ಯೆ | ಕುಲಸಚಿವ (ಮೌಲ್ಯಮಾಪನ) ಸಂಖ್ಯೆ |
|---|---|---|---|---|
| 1 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 01 | 01 | 01 |
| 2 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ, | 01 | 01 | 01 |
| 3 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 01 | 01 | 01 |
| 4 | ಗುಲ್ಬರ್ಗಾವಿಶ್ವವಿದ್ಯಾಲಯ, ಕಲಬುರಗಿ | 01 | 01 | 01 |
| 5 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 01 | 01 | 01 |
| 6 | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ | 01 | 01 | 01 |
| 7 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 01 | 01 | ಅಧಿನಿಯಮದಲ್ಲಿ ಅವಕಾಶವಿರುವುದಿಲ್ಲ |
| 8 | ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಮೈಸೂರು | 01 | 01 | 01 ಪರೀಕ್ಷಾ ಕುಲಸಚಿವರಿರುತ್ತಾರೆ |
| 9 | ವಿಶ್ವೇಶ್ವರಯ್ಯತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | 01 | 01 | 01 |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 01 | 01 | 01 |
| 11 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 01 | 01 | 01 |
| 12 | ಡಾ. ಗಂಗೂಬಾಯಿಹಾನಗಲ್ ಸಂಗೀತ ಮತ್ತು ಪ್ರದರ್ಶನಕಲೆಗಳ ವಿಶ್ವವಿದ್ಯಾಲಯ, ಮೈಸೂರು | 01 | 01 | 01 |
| 13 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 01 | 01 | 01 |
| 14 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ. | 01 | 01 | 01 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 01 | 01 | 01 |
| 16 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು | 01 | 01 | ಕುಲಸಚಿವ (ಮೌಲ್ಯಮಾಪನ) ಹುದ್ದೆ ಇರುವುದಿಲ್ಲ |
| 17 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಶಿಗ್ಗಾವಿ, ಹಾವೇರಿ ಜಿಲ್ಲೆ. | 01 | 01 | 01 |
| 18 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 01 | 01 | 01 |
| 19 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ | 01 | 01 | 01 |
| 20 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | 01 | 01 | 01 |
| 21 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 01 | 01 | 01 |
| 22 | ಬಿ ಆರ್ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು | 01 | 01 | 01 |
| 23 | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು. | | | |
| 24 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | 01 | 01 | 01 |
| 25 | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು, ವಿಶ್ವವಿದ್ಯಾಲಯ. | 01 | 01 | 01 |

ಅನುಬಂಧ- 3

# ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000

## ಪ್ರಕರಣಗಳ ಕ್ರಮಪಟ್ಟಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**ಪ್ರಕರಣಗಳು :**

ಅಧ್ಯಾಯ I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.
2. ಪರಿಭಾಷೆಗಳು.

ಅಧ್ಯಾಯ II

ವಿಶ್ವವಿದ್ಯಾನಿಲಯಗಳು

3. ವಿಶ್ವವಿದ್ಯಾನಿಲಯಗಳ ಸ್ಥಾಪನೆ ಮತ್ತು ನಿಗಮನ.
4. ವಿಶ್ವವಿದ್ಯಾನಿಲಯದ ಅಧಿಕಾರಗಳು.
5. ಅಧಿಕಾರ ವ್ಯಾಪ್ತಿ, ವಿಶೇಷಾಧಿಕಾರ ಇತ್ಯಾದಿಗಳಿಗೆ ಪ್ರವೇಶಾವಕಾಶ.
6. ವಿಶ್ವವಿದ್ಯಾನಿಲಯವು ಎಲ್ಲಾ ವರ್ಗಗಳ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು.
7. ವಿಶ್ವವಿದ್ಯಾನಿಲಯದಲ್ಲಿ ಬೋಧನೆ ಮತ್ತು ಸಂಶೋಧನೆ.
8. ಶಿಸ್ತು, ಪರಿವೀಕ್ಷಣೆ ಮತ್ತು ನಿಯಂತ್ರಣ.
9. ನಿರ್ದೇಶನಗಳನ್ನು ನೀಡಲು ಅಧಿಕಾರ.
10. ವಿಶ್ವವಿದ್ಯಾನಿಲಯದ ಆದೇಶಗಳನ್ನು ರದ್ದುಗೊಳಿಸಲು ಅಧಿಕಾರ.

ಅಧ್ಯಾಯ III

ವಿಶ್ವವಿದ್ಯಾನಿಲಯದ ಅಧಿಕಾರಿಗಳು

11. ವಿಶ್ವವಿದ್ಯಾನಿಲಯದ ಅಧಿಕಾರಿಗಳು.
12. ಕುಲಾಧಿಪತಿ.
13. ಸಹ-ಕುಲಾಧಿಪತಿ.
14. ಕುಲಪತಿ.
15. ಕುಲಪತಿಯ ಅಧಿಕಾರಗಳು.
16. ಕುಲಪತಿಯ ಹುದ್ದೆಯು ಖಾಲಿ ಇರುವ ಕಾಲದಲ್ಲಿ ಕಾರ್ಯ ವ್ಯವಸ್ಥೆ.
17. ರಿಜಿಸ್ಟ್ರಾರ್.
18. ರಿಜಿಸ್ಟ್ರಾರ್ (ಮೌಲ್ಯಮಾಪನ).
19. ಹಣಕಾಸು ಅಧಿಕಾರಿ.
20. ರಿಜಿಸ್ಟ್ರಾರ್, ರಿಜಿಸ್ಟ್ರಾರ್ (ಮೌಲ್ಯಮಾಪನ), ಹಣಕಾಸು ಅಧಿಕಾರಿಯ ಹುದ್ದೆಯು ತಾತ್ಕಾಲಿಕವಾಗಿ ಖಾಲಿ ಇರುವುದು.
21. ಡೀನ್.
22. ವಿದ್ಯಾರ್ಥಿಗಳ ಕಲ್ಯಾಣ ನಿರ್ದೇಶಕರು.
23. ಗ್ರಂಥಪಾಲ.
24. ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಯ ನಿರ್ದೇಶಕ.
25. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್ತು.
26. ಶಾರೀರಿಕ ಶಿಕ್ಷಣ ನಿರ್ದೇಶಕರು.

## ಅಧ್ಯಾಯ III

## ವಿಶ್ವವಿದ್ಯಾನಿಲಯದ ಅಧಿಕಾರಿಗಳು

**11. ವಿಶ್ವವಿದ್ಯಾನಿಲಯದ ಅಧಿಕಾರಿಗಳು.-** ಈ ಮುಂದಿನವರು ವಿಶ್ವವಿದ್ಯಾನಿಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

(ಎ) ಕುಲಾಧಿಪತಿ;

(ಬಿ) ಸಹ-ಕುಲಾಧಿಪತಿ;

(ಸಿ) ಕುಲಪತಿ;

(ಡಿ) ರಿಜಿಸ್ಟ್ರಾರ್;

(ಇ) ರಿಜಿಸ್ಟ್ರಾರ್; (ಮೌಲ್ಯ ಮಾಪನ)

(ಎಫ್)ಡೀನರುಗಳು;

(ಜಿ) ಗ್ರಂಥಪಾಲ;

(ಹೆಚ್)ಹಣಕಾಸು ಅಧಿಕಾರಿ;

(ಐ) ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯ ಮಾಪನ ಮಂಡಲಿಯ ನಿರ್ದೇಶಕರು;

(ಜೆ) ವಿದ್ಯಾರ್ಥಿ ಕಲ್ಯಾಣದ ನಿರ್ದೇಶಕರು;

(ಕೆ) ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್ತು;

(ಎಲ್)ನಿರ್ದೇಶಕರು, ಶಾರೀರಿಕ ಶಿಕ್ಷಣ;

(ಎಮ್) ರಾಜ್ಯ ಸರ್ಕಾರದ ಶಿಫಾರಸಿನ ಮೇಲೆ ಕುಲಪತಿಯು ಕಾಲಕಾಲಕ್ಕೆ ಹೆಸರಿಸಬಹುದಾದ ವಿಶ್ವವಿದ್ಯಾನಿಲಯದ ಅಂಥ ಇತರ ಅಧಿಕಾರಿಗಳು.

**12. ಕುಲಾಧಿಪತಿ.-** (1) ಕರ್ನಾಟಕ ರಾಜ್ಯಪಾಲರು ತಮ್ಮ ಪದದ ಕಾರಣದಿಂದಾಗಿ ವಿಶ್ವವಿದ್ಯಾನಿಲಯದ ಕುಲಾಧಿಪತಿಯಾಗಿರತಕ್ಕದ್ದು.

(2) ಅವರು ವಿಶ್ವವಿದ್ಯಾನಿಲಯದ ಮುಖ್ಯಸ್ಥರಾಗಿರತಕ್ಕದ್ದು ಮತ್ತು ಉಪಸ್ಥಿತರಿದ್ದಾಗ ವಿಶ್ವವಿದ್ಯಾನಿಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಅವರು ಈ ಅಧಿನಿಯಮದ ಮೂಲಕ ಅಥವಾ ಅದರ ಮೇರೆಗೆ ತಮಗೆ ಪ್ರದತ್ತವಾದ ಇತರ ಅಧಿಕಾರಗಳನ್ನು ಹೊಂದಿರತಕ್ಕದ್ದು.

**13. ಸಹ-ಕುಲಾಧಿಪತಿ.-** (1) ಕರ್ನಾಟಕದಲ್ಲಿ ಉನ್ನತ ಶಿಕ್ಷಣ ಅಥವಾ ವಿಶ್ವವಿದ್ಯಾನಿಲಯ ಶಿಕ್ಷಣದ ಪ್ರಭಾರಹೊಂದಿರುವ ಸಚಿವನು ಅವನ ಪದದ ಕಾರಣದಿಂದಾಗಿ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿಯಾಗಿರತಕ್ಕದ್ದು.

(2) ಆತನು, ಕುಲಾಧಿಪತಿಯವರ ಗೈರುಹಾಜರಿಯಲ್ಲಿ, ವಿಶ್ವವಿದ್ಯಾನಿಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**14. ಕುಲಪತಿ.-** (1) ಕುಲಪತಿಯು ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು.

(2) ರಾಜ್ಯಸರ್ಕಾರವು, ಕುಲಾಧಿಪತಿಯಿಂದ, ರಾಜ್ಯಸರ್ಕಾರದಿಂದ, ವಿಶ್ವವಿದ್ಯಾನಿಲಯ ಅನುದಾನ ಆಯೋಗದಿಂದ ಮತ್ತು ಸಿಂಡಿಕೇಟ್‌ನಿಂದ ನಾಮನಿರ್ದೇಶಿತರಾದ ಒಬ್ಬೊಬ್ಬ ವ್ಯಕ್ತಿಯಿಂದ ಕೂಡಿದ ನಾಲ್ಕು ಮಂದಿ ಸದಸ್ಯರನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು. ರಾಜ್ಯ ಸರ್ಕಾರವು, ನಾಲ್ಕು ಸದಸ್ಯರ ಪೈಕಿ ಒಬ್ಬನನ್ನು ಸಮಿತಿಯ ಅಧ್ಯಕ್ಷನನ್ನಾಗಿ ನೇಮಕ ಮಾಡತಕ್ಕದ್ದು. ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ ಅಥವಾ ಸರ್ಕಾರದ ಉಪ ಕಾರ್ಯದರ್ಶಿಯ ದರ್ಜೆಗೆ ಕಡಿಮೆಯಲ್ಲದ ಅವರ ನಾಮನಿರ್ದೇಶಿತನು ಸಮಿತಿಯ ಸಂಚಾಲಕನಾಗಿರತಕ್ಕದ್ದು.

(3) ರಾಜ್ಯಸರ್ಕಾರದ, ವಿಶ್ವವಿದ್ಯಾನಿಲಯದ ಅಥವಾ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತವಾದ ಯಾವುದೇ ಕಾಲೇಜಿನ ಅಥವಾ ಸಂಸ್ಥೆಯ ವ್ಯವಹಾರಗಳೊಂದಿಗೆ ಸಂಬಂಧವಿರುವ ಯಾವ ವ್ಯಕ್ತಿಯನ್ನೂ ಶೋಧನಾ ಸಮಿತಿಯ ಸದಸ್ಯನನ್ನಾಗಿ ನಾಮನಿರ್ದೇಶನ ಮಾಡತಕ್ಕದ್ದಲ್ಲ.

(4) ಶೋಧನಾ ಸಮಿತಿಯು, ಖ್ಯಾತ ಶಿಕ್ಷಣ ತಜ್ಞರಾದ ಮೂರು ವ್ಯಕ್ತಿಗಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಆ ಪಟ್ಟಿಯನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು. ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಡನೆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು:

ಪರಂತು, ಕುಲಾಧಿಪತಿಯವರು ಅವಶ್ಯವೆಂದು ಪರಿಗಣಿಸಿದರೆ ರಾಜ್ಯ ಸರ್ಕಾರದ ಸಹಮತಿಯೊಡನೆ ಎರಡನೆಯ ಪಟ್ಟಿಯನ್ನು ತರಿಸಿಕೊಳ್ಳಬಹುದು ಮತ್ತು ಶೋಧನಾ ಸಮಿತಿಯು ಎರಡನೆಯ ಪಟ್ಟಿಯನ್ನು ಸಲ್ಲಿಸತಕ್ಕದ್ದು ಹಾಗೂ ಅದು ಅಂತಿಮವಾಗಿರತಕ್ಕದ್ದು.

[1][“ಮತ್ತು ಪರಂತು, ಸಾಧ್ಯವಾದಷ್ಟು ಮಟ್ಟಿಗೆ ಒಬ್ಬ ಮಹಿಳೆಯೇ ಬಿಜಾಪುರದಲ್ಲಿರುವ [2][ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ][2]ದ ಕುಲಪತಿಯಾಗತಕ್ಕದ್ದು:

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದೇನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು [2][ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ][2]ದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.”][1]

1. 2003ರ ಅಧಿನಿಯಮ ಸಂಖ್ಯೆ: 33ರ ಮೂಲಕ ದಿ: 21.6.2003 ರಿಂದ ಸೇರಿಸತಕ್ಕದ್ದು.
2. 2017ರ ಅಧಿನಿಯಮ ಸಂಖ್ಯೆ: 10ರ ಮೂಲಕ ಪ್ರತಿಯೋಜಿಸಲಾಗಿದೆ.

[1][ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ತುಮಕೂರು ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.][1]

1. 2004ರ ಅಧಿನಿಯಮ ಸಂಖ್ಯೆ: 10ರ ಮೂಲಕ ದಿ: 1.10.2004 ರಿಂದ ಸೇರಿಸತಕ್ಕದ್ದು.

[1][ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.][1]

1. 2009ರ ಅಧಿನಿಯಮ ಸಂಖ್ಯೆ: 15ರ ಮೂಲಕ ದಿ: 18.08.2009 ರಿಂದ ಸೇರಿಸತಕ್ಕದ್ದು.

[1][ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ ಮತ್ತು ರಾಣಿಚನ್ನಮ್ಮ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.] [1]

1. 2010ರ ಅಧಿನಿಯಮ ಸಂಖ್ಯೆ: 30ರ ಮೂಲಕ ದಿ: 24.07.2010 ರಿಂದ ಸೇರಿಸಲಾಗಿದೆ.

[1][ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.] [1]

1. 2015ರ ಅಧಿನಿಯಮ ಸಂಖ್ಯೆ: 34ರ ಮೂಲಕ ದಿ: 13.08.2015 ರಿಂದ ಸೇರಿಸಲಾಗಿದೆ.

[1][(5) ಯಾವೊಬ್ಬ ವ್ಯಕ್ತಿಯು ಅರವತ್ತೇಳು ವರ್ಷಗಳ ವಯಸ್ಸಿನವನಾಗಿದ್ದರೆ, ಆತನನ್ನು ಕುಲಪತಿಯನ್ನಾಗಿ ನೇಮಕ ಮಾಡತಕ್ಕದ್ದಲ್ಲ ಅಥವಾ ಆತನು ಆ ಹುದ್ದೆಯನ್ನು ಧಾರಣ ಮಾಡತಕ್ಕದ್ದಲ್ಲ.'][1]

1. 2011ರ ಅಧಿನಿಯಮ ಸಂಖ್ಯೆ: 8ರ ಮೂಲಕ ದಿ: 08.02.2011 ರಿಂದ ಪ್ರತಿಯೋಜಿಸಲಾಗಿದೆ.

(6) ಕುಲಪತಿಯವರು, ಕುಲಾಧಿಪತಿಯವರ ಇಷ್ಟಪರ್ಯಂತ ಮತ್ತು (5)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು ನಾಲ್ಕು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು. ಅವರು ಎರಡನೇ ಅವಧಿಗೆ ಪುನರ್‌ನೇಮಕಕ್ಕೆ ಅರ್ಹರಾಗಿರತಕ್ಕದ್ದಲ್ಲ.

(7) ಕುಲಪತಿಯನ್ನು, ಈ ಅಧಿನಿಯಮದ ಉಪಬಂಧಗಳನ್ನು ಉದ್ದೇಶಪೂರ್ವಕವಾಗಿ ಬಿಟ್ಟುಬಿಡುವ ಅಥವಾ ನೆರವೇರಿಸಲು ನಿರಾಕರಿಸುವ ಅಥವಾ ಅವನಲ್ಲಿ ನಿಹಿತವಾದ ಅಧಿಕಾರಗಳನ್ನು ದುರುಪಯೋಗ ಪಡಿಸಿಕೊಂಡ ಕಾರಣದ ಮೇಲೆ ಮತ್ತು ರಾಜ್ಯ ಸರ್ಕಾರವು, (8)ನೇ ಉಪ ಪ್ರಕರಣದ ಮೇರೆಗೆ ಅದರಿಂದ ಆದೇಶಿಸಲಾದ ವಿಚಾರಣೆಯ ವರದಿಯನ್ನು ಪರಿಗಣಿಸಿದ ನಂತರ ಮತ್ತು ರಾಜ್ಯಸರ್ಕಾರವು ಸೂಚಿಸಿದ ಸಲಹೆಯ ಮೇಲೆ ಕುಲಾಧಿಪತಿಯು ಹೊರಡಿಸಿದ ಆದೇಶದ ಹೊರತು, ಪದದಿಂದ ತೆಗೆದುಹಾಕತಕ್ಕದ್ದಲ್ಲ.

(8) ಈ ಪ್ರಕರಣದ ಮೇರೆಗೆ ಒಂದು ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ, ರಾಜ್ಯಸರ್ಕಾರವು, ಉಚ್ಚ ನ್ಯಾಯಾಲಯದ ಅಥವಾ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿರುವ ಅಥವಾ ಆಗಿದ್ದ ವ್ಯಕ್ತಿಯನ್ನು ನೇಮಕ ಮಾಡತಕ್ಕದ್ದು. ವಿಚಾರಣಾ ಪ್ರಾಧಿಕಾರವು, ಕುಲಪತಿಯು ಮನವಿಯನ್ನು ಸಲ್ಲಿಸಲು ಅವಕಾಶ ನೀಡಿದ ನಂತರ ವಿಚಾರಣೆ ನಡೆಸತಕ್ಕದ್ದು ಮತ್ತು ವಿಧಿಸಬೇಕಾದ ಯಾವುದೇ ದಂಡನೆ ಇದ್ದರೆ, ಅದೂ ಒಳಗೊಂಡಂತೆ ಒಂದು ವರದಿಯನ್ನು ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು. ರಾಜ್ಯಸರ್ಕಾರವು, ವರದಿಯನ್ನು ಪರಿಶೀಲಿಸಿದ ನಂತರ, ಕುಲಾಧಿಪತಿಗೆ ಸಲಹೆ

ನೀಡತಕ್ಕದ್ದು. ಕುಲಾಧಿಪತಿಯು ಸಾಧ್ಯವಾದಷ್ಟುಮಟ್ಟಿಗೆ ಆರು ತಿಂಗಳೊಳಗಾಗಿ ಅಂಥ ಸಲಹೆಗೆ ಅನುಸಾರವಾಗಿ ಕ್ರಮ ಕೈಗೊಳ್ಳತಕ್ಕದ್ದು.

(9) ಕುಲಪತಿಯ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳು ಕುಲಾಧಿಪತಿಯು ನಿರ್ಧರಿಸಬಹುದಾದಂತೆ ಇರತಕ್ಕದ್ದು ಮತ್ತು ಅವುಗಳನ್ನು ಅವನು ಕುಲಪತಿಯಾಗಿ ನೇಮಕವಾದ ತರುವಾಯ ಅವನಿಗೆ ಅನನುಕೂಲವಾಗುವಂತೆ ವ್ಯತ್ಯಸ್ತಗೊಳಿಸತಕ್ಕದ್ದಲ್ಲ. ಕುಲಪತಿಯಾಗಿ ತನ್ನ ಅಧಿಕಾರಾವಧಿಯಲ್ಲಿ ವಯೋನಿವೃತ್ತಿಯ ಮೇಲೆ ನಿವೃತ್ತನಾಗುವ ಕುಲಪತಿಯ ಸಂದರ್ಭದಲ್ಲಿ, ಈಗಾಗಲೇ ನಿರ್ಧರಿಸಲಾದ ಅವನ ಸೇವಾ ಷರತ್ತುಗಳು ಮುಂದುವರಿಯತಕ್ಕದ್ದು. ಅವನ ಎಲ್ಲ ನಿವೃತ್ತಿ ಸೌಲಭ್ಯಗಳನ್ನು ತಡೆಹಿಡಿಯತಕ್ಕದ್ದು, ಅವುಗಳನ್ನು ಅವನು ಕುಲಪತಿಯಾಗಿ ಪದವನ್ನು ತ್ಯಜಿಸಿದ ನಂತರ ಬಿಡುಗಡೆ ಮಾಡತಕ್ಕದ್ದು.

(10) ನಿವೃತ್ತಿಹೊಂದಿದ ಒಬ್ಬ ವ್ಯಕ್ತಿಯು ಕುಲಪತಿಯಾಗಿ ನೇಮಕಗೊಂಡರೆ, ಆತನು ಕುಲಪತಿಯಾಗಿ ನೇಮಕಗೊಂಡ ಮೇಲೆ ಉಪಲಬ್ಧಿಗಳು ಸೇರಿದಂತೆ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಕುಲಾಧಿಪತಿಯು ನಿರ್ಣಯಿಸತಕ್ಕದ್ದು. ಅವನು ಪಡೆಯುವ ನಿವೃತ್ತಿ ವೇತನದ ಮೊತ್ತವನ್ನು ಮತ್ತು ಭತ್ಯಗಳನ್ನು ಉಪಲಬ್ಧಿಗಳಿಂದ ಕಳೆಯತಕ್ಕದ್ದು.

(11) ರಾಜ್ಯದಲ್ಲಿ ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವ ಒಬ್ಬ ಪ್ರಾಧ್ಯಾಪಕನು ಕುಲಪತಿಯಾಗಿ ನೇಮಕಗೊಂಡರೆ, ಅವನು ಕುಲಪತಿಯಾಗಿರುವ ಅಧಿಕಾರಾವಧಿಯಲ್ಲಿ ಪ್ರಾಧ್ಯಾಪಕನಾಗಿ ಅವನ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಅವನಿಗೆ ಅನನುಕೂಲವಾಗುವಂತೆ ಪರಿಷ್ಕರಿಸತಕ್ಕದಲ್ಲ ಮತ್ತು ಅವನು ತನ್ನ ಹುದ್ದೆಯ ಧಾರಣಾಧಿಕಾರವನ್ನು ಉಳಿಸಿಕೊಳ್ಳತಕ್ಕದ್ದು.

**15. ಕುಲಪತಿಯ ಅಧಿಕಾರಗಳು.-** (1) ಕುಲಪತಿಯು ವಿಶ್ವವಿದ್ಯಾನಿಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ವಿದ್ಯಾವಿಷಯಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದ ವ್ಯವಹಾರಗಳ ಮೇಲೆ ಸಾಮಾನ್ಯ ನಿಯಂತ್ರಣವನ್ನು ಚಲಾಯಿಸತಕ್ಕದ್ದು. ಅವನು ವಿಶ್ವವಿದ್ಯಾನಿಲಯದಲ್ಲಿ ಶಿಸ್ತುಪಾಲನೆಗೆ ಅವಶ್ಯವಾದ ಎಲ್ಲ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(2) ಅವನು ವಿದ್ಯಾವಿಷಯಕ ಪರಿಷತ್ತು, ಸಿಂಡಿಕೇಟ್ ಮತ್ತು ಹಣಕಾಸು ಸಮಿತಿಯ ಪದನಿಮಿತ್ತ ಅಧ್ಯಕ್ಷನಾಗಿರತಕ್ಕದ್ದು. ಅವನು ಕುಲಾಧಿಪತಿಯ ಮತ್ತು ಸಹ-ಕುಲಾಧಿಪತಿಯ ಗೈರುಹಾಜರಿಯಲ್ಲಿ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅವನು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ಅಥವಾ ನಿಕಾಯಗಳ ಸಭೆಗಳ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವನು ಮತ ಚಲಾಯಿಸಲು ಹಕ್ಕುಳ್ಳವನಾಗಿರತಕ್ಕದ್ದು.

(3) ಅವನು ಈ ಅಧಿನಿಯಮದ, ಪರಿನಿಯಮಗಳ, ಆರ್ಡಿನೆನ್ಸ್‌ಗಳ ಮತ್ತು ವಿನಿಯಮಗಳ ಎಲ್ಲಾ ಉಪಬಂಧಗಳ ಪಾಲನೆಯನ್ನು ಖಚಿತಪಡಿಸಿಕೊಳ್ಳತಕ್ಕದ್ದು ಮತ್ತು ಆ ಉದ್ದೇಶಕ್ಕಾಗಿ ಅವಶ್ಯವಾದ ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು.

(4) ಅವನು ತಾನಾಗಿಯೇ ಆಗಲಿ ಅಥವಾ ತನ್ನಿಂದ ಲಿಖಿತದಲ್ಲಿ ಅಧಿಕೃತನಾದ ವಿಶ್ವವಿದ್ಯಾನಿಲಯದ ಯಾವೊಬ್ಬ ಅಧಿಕಾರಿಯ ಮೂಲಕವೇ ಆಗಲಿ, ವಿದ್ಯಾವಿಷಯಕ ಪರಿಷತ್ತು, ಸಿಂಡಿಕೇಟ್ ಮತ್ತು ಹಣಕಾಸು ಸಮಿತಿಯ ಸಭೆಗಳನ್ನು ಕರೆಯಬಹುದು ಮತ್ತು ಈ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೆ ತರಲು ಮತ್ತು ಕಾರ್ಯಗತಗೊಳಿಸಲು ಅವಶ್ಯವಾಗಬಹುದಾದಂಥ ಎಲ್ಲ ಕಾರ್ಯಗಳನ್ನು ನೆರವೇರಿಸತಕ್ಕದ್ದು.

(5) ಕುಲಪತಿಯು, ತ್ವರಿತ ಕ್ರಮವು ಅಗತ್ಯವೆಂದು ಅವನು ಅಭಿಪ್ರಾಯಪಡುವ ಯಾವುದೇ ತುರ್ತು ಸಂದರ್ಭದಲ್ಲಿ ಅವನು ಅವಶ್ಯವೆಂದು ಭಾವಿಸುವಂಥ ಕ್ರಮವನ್ನು ತೆಗೆದುಕೊಳ್ಳತಕ್ಕದ್ದು ಮತ್ತು ಆ ತರುವಾಯ ಅತಿ ಶೀಘ್ರ ಸಮಯದಲ್ಲಿ ಸಾಮಾನ್ಯವಾಗಿ ವ್ಯವಹರಿಸುತ್ತಿದ್ದಂಥ ಪ್ರಾಧಿಕಾರಕ್ಕೆ ಅಥವಾ ನಿಕಾಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ವರದಿ ಮಾಡತಕ್ಕದ್ದು:

ಪರಂತು, ಕುಲಪತಿಯು ತೆಗೆದುಕೊಂಡ ಕ್ರಮವನ್ನು ಸಂಬಂಧಪಟ್ಟ ಪ್ರಾಧಿಕಾರ ಅಥವಾ ನಿಕಾಯವು ಅನುಮೋದಿಸದಿದ್ದರೆ, ಅವರು ಆ ವಿಷಯವನ್ನು ಕುಲಾಧಿಪತಿಗೆ ಒಪ್ಪಿಸಬಹುದು, ಆ ಬಗ್ಗೆ ಅವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು:

ಮತ್ತು ಪರಂತು, ಈ ಉಪಪ್ರಕರಣದ ಮೇರೆಗೆ ಕುಲಪತಿಯ ವರದಿಯ ಆಧಾರದ ಮೇಲೆ ಪ್ರಾಧಿಕಾರ ಅಥವಾ ನಿಕಾಯವು ತೆಗೆದುಕೊಂಡ ತೀರ್ಮಾನದಿಂದ ವಿಶ್ವವಿದ್ಯಾನಿಲಯದ ಸೇವೆಯಲ್ಲಿಗುವ ಯಾವೊಬ್ಬ ವ್ಯಕ್ತಿಯು ಬಾಧಿತನಾದರೆ, ಆ ವ್ಯಕ್ತಿಯು ಅವನಿಗೆ ತೀರ್ಮಾನವನ್ನು ತಿಳಿಸಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಕುಲಾಧಿಪತಿಯ ಮುಂದೆ ಅಪೀಲು ಹೂಡಬಹುದು ಮತ್ತು ಅಂಥ ಅಪೀಲಿನ ಮೇಲೆ ಕುಲಾಧಿಪತಿಯ ತೀರ್ಮಾನವೇ ಅಂತಿಮವಾಗಿರತಕ್ಕದ್ದು:

ಅಲ್ಲದೆ ಪರಂತು, ಈ ಉಪಪ್ರಕರಣದ ಮೇರೆಗೆ ಪ್ರದತ್ತವಾದ ಅಧಿಕಾರಗಳನ್ನು ವಿಶ್ವವಿದ್ಯಾನಿಲಯದ ನೌಕರರ ವೇತನ ಶ್ರೇಣಿಯನ್ನು ಪರಿಷ್ಕರಿಸಲು ಅಥವಾ ಕಾಲೇಜಿಗೆ ಅಥವಾ ಶಿಕ್ಷಣ ವ್ಯಾಸಂಗ ಕ್ರಮಕ್ಕೆ ಸಂಯೋಜನೆ ಮಂಜೂರು ಮಾಡಲು ಚಲಾಯಿಸತಕ್ಕದ್ದಲ್ಲ ಮತ್ತು ಈ ಉಪ ಪ್ರಕರಣದ ಮೇರೆಗೆ ಅಧಿಕಾರಗಳನ್ನು ಚಲಾಯಿಸಿ ಪರಿನಿಯಮಗಳು

ಅಥವಾ ವಿನಿಯಮಗಳನ್ನು ರಚಿಸಿದರೆ ಅವು ಈ ಅಧಿನಿಯಮದ ಸೂಕ್ತ ಉಪಬಂಧಗಳ ಮೇರೆಗೆ ಕುಲಾಧಿಪತಿಯ ಅನುಮೋದನೆಗೆ ಒಳಪಟ್ಟಿರತಕ್ಕದ್ದು ಮತ್ತು ಆರ್ಡಿನೆನ್ಸ್‌ಗಳನ್ನು ರಚಿಸಿದ್ದರೆ, ಅವುಗಳನ್ನು ಈ ಅಧಿನಿಯಮದ ಅನುಸಾರ ಕುಲಾಧಿಪತಿಗೆ ಸಲ್ಲಿಸತಕ್ಕದ್ದು.

(6) ಕುಲಪತಿಯು ಪರಿನಿಯಮಗಳು, ಆರ್ಡಿನೆನ್ಸ್‌ಗಳು ಮತ್ತು ವಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

**16. ಕುಲಪತಿಯ ಹುದ್ದೆಯು ಖಾಲಿ ಇರುವ ಕಾಲದಲ್ಲಿ ಕಾರ್ಯ ವ್ಯವಸ್ಥೆ.-** (1) ರಜೆ, ಅನಾರೋಗ್ಯ ಅಥವಾ ಇತರ ಯಾವುದೇ ಕಾರಣದಿಂದಾಗಿ ಕುಲಪತಿಯ ತಾತ್ಕಾಲಿಕ ಗೈರುಹಾಜರಿಯ ಅವಧಿಯಲ್ಲಿ, ಕುಲಾಧಿಪತಿಯು, ಕುಲಪತಿಯ ಕರ್ತವ್ಯಗಳನ್ನು ನಿರ್ವಹಿಸುವುದಕ್ಕಾಗಿ ತಾನು ಸೂಕ್ತವೆಂದು ಭಾವಿಸುವಂಥ ವ್ಯವಸ್ಥೆಗಳನ್ನು ಮಾಡಬಹುದು:

ಪರಂತು, ಕುಲಾಧಿಪತಿಯವರು ವ್ಯವಸ್ಥೆಗಳನ್ನು ಮಾಡುವವರೆಗೆ, ಕುಲಪತಿಯು, ವಿಶ್ವವಿದ್ಯಾನಿಲಯದಲ್ಲಿ ಲಭ್ಯವಿರುವ ಜ್ಯೇಷ್ಠತಮ ಡೀನನನ್ನು ಒಂದು ತಿಂಗಳಿಗಿಂತ ಹೆಚ್ಚಿಲ್ಲದ ಅವಧಿಗೆ ಅಥವಾ ಕುಲಾಧಿಪತಿಯವರು ಅಂಥ ವ್ಯವಸ್ಥೆಗಳನ್ನು ಮಾಡುವವರೆಗೆ ಇವುಗಳಲ್ಲಿ ಯಾವುದು ಮುಂಚಿತವೋ ಆವರೆಗೆ, ಕುಲಪತಿಯ ಪ್ರಸಕ್ತ ಕರ್ತವ್ಯಗಳ ಪ್ರಭಾರದಲ್ಲಿರಿಸಲು ನಿಯೋಜಿಸಬಹುದು.

(2) ಕುಲಪತಿಯ ಹುದ್ದೆಯು ಭರ್ತಿಯಾಗದೆ ಖಾಲಿ ಉಳಿದಿರುವ ಅವಧಿಯಲ್ಲಿ, ಕುಲಾಧಿಪತಿಯು ನೇಮಕ ಮಾಡಬಹುದಾದ ವಿಶ್ವವಿದ್ಯಾನಿಲಯದಲ್ಲಿ ಲಭ್ಯವಿರುವ ಅಂಥ ಜ್ಯೇಷ್ಠತಮ ಡೀನನು ಕುಲಪತಿಯಾಗಿ ಕಾರ್ಯನಿರ್ವಹಿಸತಕ್ಕದ್ದು ಮತ್ತು ಹಾಗೆ ನೇಮಕಗೊಂಡ ವ್ಯಕ್ತಿಯು ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಕುಲಪತಿಯ ಎಲ್ಲ ವಿಶೇಷಾಧಿಕಾರಗಳಿಗೆ ಮತ್ತು ಇದರ ಸಂಬಂಧದಲ್ಲಿ ಪರಿನಿಯಮಗಳೇನಾದರೂ ಇದ್ದರೆ ಅವುಗಳಿಗೆ ಅನುಸಾರವಾಗಿ ಕುಲಾಧಿಪತಿಯು ನಿರ್ಣಯಿಸಬಹುದಾದಂತೆ ಅಂಥ ಉಪಲಬ್ಧಿಗಳಿಗೆ ಮತ್ತು ಭತ್ಯಗಳಿಗೆ ಹಕ್ಕುಳ್ಳವನಾಗಿರತಕ್ಕದ್ದು.

**17. ರಿಜಿಸ್ಟ್ರಾರ್.-** [1][(1) ರಿಜಿಸ್ಟ್ರಾರ್‌ರವರು ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ರಾಜ್ಯ ಸರ್ಕಾರವು, ಉನ್ನತ ಕಾಲಶ್ರೇಣಿಯ ಗ್ರೂಪ್ ಎ ಅಧಿಕಾರಿಯ ದರ್ಜೆಗಿಂತ ಕಡಿಮೆಯಲ್ಲದ ಒಬ್ಬ ಅಧಿಕಾರಿಯನ್ನು ಅಥವಾ ಕನಿಷ್ಠ ಐದು ವರ್ಷಗಳು ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸಿರುವ ಯಾವುದೇ ವಿಶ್ವವಿದ್ಯಾಲಯದ ವ್ಯಾಸಂಗ ವಿಭಾಗದ ಸದಸ್ಯನನ್ನು ವಿಶ್ವವಿದ್ಯಾನಿಲಯದ ರಿಜಿಸ್ಟ್ರಾರ್‌ರನ್ನಾಗಿ ನೇಮಕ ಮಾಡಬಹುದು.][1]

1. 2011ರ ಅಧಿನಿಯಮ ಸಂಖ್ಯೆ: 8ರ ಮೂಲಕ ದಿ: 13.09.2001 ರಿಂದ ಪ್ರತಿಯೋಜಿಸಲಾಗಿದೆ ಎಂದು ಭಾವಿಸತಕ್ಕದ್ದು.

(2) ರಿಜಿಸ್ಟ್ರಾರನು, ವಿದ್ಯಾವಿಷಯಕ ಪರಿಷತ್ತಿನ ಮತ್ತು ಸಿಂಡಿಕೇಟಿನ ಪದನಿಮಿತ್ತ ಸದಸ್ಯಕಾರ್ಯದರ್ಶಿಯು ಮತ್ತು ಹಣಕಾಸು ಸಮಿತಿಯ ಸದಸ್ಯನು ಆಗಿರತಕ್ಕದ್ದು.

(3)(i) ವಿಶ್ವವಿದ್ಯಾನಿಲಯದ ದಾಖಲೆಗಳ, ಸಾಮಾನ್ಯ ಮೊಹರಿನ ಮತ್ತು ಕುಲಪತಿ ಅಥವಾ ಸಿಂಡಿಕೇಟ್ ಅವನ ವಶಕ್ಕೆ ಒಪ್ಪಿಸುವಂಥ ಇತರ ಸ್ವತ್ತಿನ ಅಭಿರಕ್ಷಕನಾಗಿರುವುದು;

(ii) ಸಿಂಡಿಕೇಟಿನ, ವಿದ್ಯಾವಿಷಯಕ ಪರಿಷತ್ತಿನ ಅಥವಾ ವ್ಯಾಸಂಗ ವಿಭಾಗಗಳ, ಅಧ್ಯಯನ ಮಂಡಲಿಯ ಮತ್ತು ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರದ ಸಭೆಗಳನ್ನು ಕರೆಯುವ ನೋಟೀಸುಗಳನ್ನು ಹೊರಡಿಸುವುದು ಮತ್ತು ಅಂಥ ಎಲ್ಲ ಸಭೆಗಳ ನಡವಳಿಗಳನ್ನು ಇಡುವುದು;

(iii) ಅವನು ಸದಸ್ಯ ಕಾಯದರ್ಶಿಯಾಗಿರುವ ಪ್ರಾಧಿಕಾರಗಳ ಅಧಿಕೃತ ಪತ್ರವ್ಯವಹಾರವನ್ನು ನಡೆಸುವುದು;

(iv) ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ಸಭೆಗಳ ಕಾರ್ಯಸೂಚಿಯ ಪ್ರತಿಗಳನ್ನು, ಅವುಗಳನ್ನು ಹೊರಡಿಸಿದ ಕೂಡಲೇ, ಮತ್ತು ಸಭೆಗಳನ್ನು ನಡೆಸಿದ ಒಂದು ತಿಂಗಳೊಳಗಾಗಿ ಅವುಗಳ ನಡವಳಿಗಳನ್ನು ಕುಲಾಧಿಪತಿಗೆ ಮತ್ತು ರಾಜ್ಯಸರ್ಕಾರಕ್ಕೆ ಒದಗಿಸುವುದು;

-ರಿಜಿಸ್ಟ್ರಾರನ ಕರ್ತವ್ಯವಾಗಿರತಕ್ಕದ್ದು.

(4) ರಿಜಿಸ್ಟ್ರಾರನು ಪರಿನಿಯಮಗಳು, ಆರ್ಡಿನೆನ್ಸ್‌ಗಳು ಅಥವಾ ವಿನಿಯಮಗಳು ನಿಯಮಿಸಬಹುದಾದಂಥ ಮತ್ತು ಕುಲಪತಿಯು ಕಾಲಕಾಲಕ್ಕೆ ಹಂಚಿಕೆ ಮಾಡಬಹುದಾದ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(5) ರಿಜಿಸ್ಟ್ರಾರನಿಗೆ ಒಬ್ಬ ಅಥವಾ ಅದಕ್ಕೂ ಹೆಚ್ಚಿನ ಉಪ ರಿಜಿಸ್ಟ್ರಾರರು ಮತ್ತು ಸಹಾಯಕ ರಿಜಿಸ್ಟ್ರಾರರು ನೆರವು ನೀಡತಕ್ಕದ್ದು.

**18. ರಿಜಿಸ್ಟ್ರಾರ್ (ಮೌಲ್ಯಮಾಪನ).-** (1) ರಿಜಿಸ್ಟ್ರಾರನು (ಮೌಲ್ಯಮಾಪನ) ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಸಮೂಹ-ಎ ಹಿರಿಯ ಶ್ರೇಣಿಯ ದರ್ಜೆಗೆ ಕಡಿಮೆಯಲ್ಲದ ಕರ್ನಾಟಕ ಆಡಳಿತ ಸೇವೆಗೆ

ಸೇರಿದ ಒಬ್ಬ ಅಧಿಕಾರಿಯನ್ನು ಅಥವಾ ಯಾವುದೇ ವಿಶ್ವವಿದ್ಯಾನಿಲಯದ ವ್ಯಾಸಂಗ ವಿಭಾಗದ ಒಬ್ಬ ಹಿರಿಯ ಸದಸ್ಯನನ್ನು ರಾಜ್ಯಸರ್ಕಾರವು, ವಿಶ್ವವಿದ್ಯಾನಿಲಯದ ರಿಜಿಸ್ಟ್ರಾರ್ (ಮೌಲ್ಯಮಾಪನ) ಆಗಿ ನೇಮಕ ಮಾಡಬಹುದು:

ಪರಂತು, ಅಂಥ ವ್ಯಕ್ತಿಯು ಲಭ್ಯವಿರದಿದ್ದಲ್ಲಿ, ಕುಲಪತಿಯವರು ಶಿಫಾರಸುಮಾಡಿದ ಮೂವರಿಗಿಂತ ಕಡಿಮೆಯಾಗಿರದ ವ್ಯಕ್ತಿಗಳ ಪಟ್ಟಿಯಿಂದ, ಸಿಂಡಿಕೇಟಿನ ಅನುಮೋದನೆಯೊಡನೆ, ಕುಲಪತಿಯವರು ರಿಜಿಸ್ಟ್ರಾರನನ್ನು (ಮೌಲ್ಯಮಾಪನ) ನೇಮಕಮಾಡತಕ್ಕದ್ದು. ಪರಿನಿಯಮಗಳ ಮೂಲಕ ನಿಯಮಿಸಲಾದ ಅವಧಿಯೊಳಗೆ, ಸಿಂಡಿಕೇಟು ಪಟ್ಟಿಯಲ್ಲಿರುವ ಯಾವೊಬ್ಬ ವ್ಯಕ್ತಿಯನ್ನು ಅನುಮೋದಿಸದಿದ್ದರೆ, ಕುಲಾಧಿಪತಿಯವರು, ಕುಲಪತಿಯವರೊಡನೆ ಸಮಾಲೋಚಿಸಿ, ಅವರ ಪೈಕಿ ರಿಜಿಸ್ಟ್ರಾರ್ (ಮೌಲ್ಯಮಾಪನ) ಆಗಲು ತಾನು ಸೂಕ್ತವೆಂದು ಭಾವಿಸುವ ಅಂಥ ಇತರ ವ್ಯಕ್ತಿಯನ್ನು ನೇಮಕ ಮಾಡಬಹುದು. ಹಾಗೆ ನೇಮಕಗೊಂಡ ರಿಜಿಸ್ಟ್ರಾರ್ (ಮೌಲ್ಯಮಾಪನ) ಇವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಮತ್ತು ಉಪಲಬ್ಧಿಗಳು ಕುಲಾಧಿಪತಿಯವರು ನಿರ್ಧರಿಸ ಬಹುದಾದಂಥವುಗಳಾಗಿರತಕ್ಕದ್ದು.

(2) ರಿಜಿಸ್ಟ್ರಾರನು (ಮೌಲ್ಯಮಾಪನ) ಸಿಂಡಿಕೇಟ್, ವಿದ್ಯಾವಿಷಯಕ ಪರಿಷತ್ತು, ಹಣಕಾಸು ಸಮಿತಿ ಮತ್ತು ಎಲ್ಲ ವ್ಯಾಸಂಗ ವಿಭಾಗಗಳ ಸದಸ್ಯನಾಗಿರತಕ್ಕದ್ದು.

(3) ರಿಜಿಸ್ಟ್ರಾರನು (ಮೌಲ್ಯಮಾಪನ) ಪರೀಕ್ಷೆಗಳನ್ನು ನಡೆಸುವ ಮತ್ತು ಅದಕ್ಕೆ ಪ್ರಾಸಂಗಿಕವಾದ ಮತ್ತು ಅದಕ್ಕೆ ಸಹಾಯಕವಾದ ಎಲ್ಲ ಇತರ ವಿಷಯಗಳ ಪ್ರಭಾರದಲ್ಲಿರತಕ್ಕದ್ದು ಮತ್ತು ಪರಿನಿಯಮಗಳು ಅಥವಾ ಆರ್ಡಿನೆನ್ಸ್‌ಗಳ ಮೂಲಕ ನಿಯಮಿಸಬಹುದಾದಂಥ ಅಥವಾ ಕುಲಪತಿಯಿಂದ ಹಂಚಿಕೆಯಾಗಬಹುದಾದಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(4) ರಿಜಿಸ್ಟ್ರಾರನಿಗೆ (ಮೌಲ್ಯಮಾಪನ) ಒಬ್ಬ ಅಥವಾ ಹೆಚ್ಚು ಉಪ ರಿಜಿಸ್ಟ್ರಾರರು (ಮೌಲ್ಯಮಾಪನ) ಮತ್ತು ಸಹಾಯಕ ರಿಜಿಸ್ಟ್ರಾರರು (ಮೌಲ್ಯಮಾಪನ) ನೆರವು ನೀಡಬಹುದು.

**19. ಹಣಕಾಸು ಅಧಿಕಾರಿ.**- (1) ಹಣಕಾಸು ಅಧಿಕಾರಿಯು, ಕುಲಪತಿಯು ಸಿಂಡಿಕೇಟಿಗೆ ಶಿಫಾರಸ್ಸು ಮಾಡಿದ, ಲೆಕ್ಕಪರಿಶೋಧನೆ, ಲೆಕ್ಕಪತ್ರ ಮತ್ತು ಹಣಕಾಸು ಆಡಳಿತದಲ್ಲಿ ಅನುಭವವಿರುವ ರಾಜ್ಯ ಲೆಕ್ಕಪತ್ರಗಳ ಇಲಾಖೆಯ ಜಂಟಿ ನಿಯಂತ್ರಕ ಕೇಡರ್‌ನಲ್ಲಿನ ಅಧಿಕಾರಿಗಳು ಅಥವಾ ಉಪ-ಮಹಾಲೇಖಾಪಾಲ ದರ್ಜೆಯ ಒಬ್ಬ ಅಧಿಕಾರಿಯು ಇರುವ ಮೂರು ವ್ಯಕ್ತಿಗಳಿಗಿಂತ ಕಡಿಮೆಯಾಗಿರದ ಹೆಸರುಗಳ ಪಟ್ಟಿಯಿಂದ ಸಿಂಡಿಕೇಟಿನ ಅನುಮೋದನೆಯೊಂದಿಗೆ ಕುಲಪತಿಯಿಂದ ನೇಮಕ ಮಾಡಲಾಗುವ ವಿಶ್ವವಿದ್ಯಾನಿಲಯದ ಒಬ್ಬ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಪರಿನಿಯಮಗಳ ಮೂಲಕ ನಿಯಮಿಸಲಾದ ಸಮಯದೊಳಗೆ ಪಟ್ಟಿಯಲ್ಲಿನ ಯಾರ ಹೆಸರೂ ಸಿಂಡಿಕೇಟಿನಿಂದ ಅನುಮೋದಿತವಾಗಿರದಿದ್ದರೆ, ಕುಲಾಧಿಪತಿಯು, ಕುಲಪತಿಯೊಂದಿಗೆ ಸಮಾಲೋಚಿಸಿ, ಹಣಕಾಸು ಅಧಿಕಾರಿ ಆಗಿರಲು ಸೂಕ್ತವೆಂದು ಅವನು ಭಾವಿಸುವಂಥ ಇತರ ವ್ಯಕ್ತಿಯನ್ನು ನೇಮಕ ಮಾಡಬಹುದು.

(2) ಹಣಕಾಸು ಅಧಿಕಾರಿಯ ನೇಮಕದ ಅವಧಿ ಮತ್ತು ಅವನ ಉಪಲಬ್ಧಿಗಳು ಮತ್ತು ಇತರ ನಿಬಂಧನೆಗಳು ಮತ್ತು ಷರತ್ತುಗಳು ಕುಲಾಧಿಪತಿಯು ನಿರ್ಧರಿಸುವಂಥವುಗಳಾಗಿರತಕ್ಕದ್ದು.

(3) ಹಣಕಾಸು ಅಧಿಕಾರಿಯು, ಹಣಕಾಸು ಸಮಿತಿಯ ನಿಯಂತ್ರಣಕ್ಕೊಳಪಟ್ಟು, ಪರಿನಿಯಮಗಳ, ಆರ್ಡಿನೆನ್ಸ್‌ಗಳ ಮತ್ತು ವಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಅಥವಾ ಕುಲಪತಿ ಅಥವಾ ರಿಜಿಸ್ಟ್ರಾರನು ಕಾಲ ಕಾಲಕ್ಕೆ ಅಗತ್ಯಪಡಿಸಬಹುದಾದಂತೆ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂತಹ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು. ಅವನು ವಿದ್ಯಾವಿಷಯಕ ಪರಿಷತ್ತಿನ ಪದನಿಮಿತ್ತ ಸದಸ್ಯನಾಗಿರತಕ್ಕದ್ದು ಮತ್ತು ಹಣಕಾಸು ಸಮಿತಿಯ ಪದನಿಮಿತ್ತ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

**20. ರಿಜಿಸ್ಟ್ರಾರ್, ರಿಜಿಸ್ಟ್ರಾರ್ (ಮೌಲ್ಯಮಾಪನ), ಹಣಕಾಸು ಅಧಿಕಾರಿಯ ಹುದ್ದೆಯು ತಾತ್ಕಾಲಿಕವಾಗಿ ಖಾಲಿ ಇರುವುದು.**- (1) ರಿಜಿಸ್ಟ್ರಾರ್, ರಿಜಿಸ್ಟ್ರಾರ್ (ಮೌಲ್ಯಮಾಪನ) ಅಥವಾ ಹಣಕಾಸು ಅಧಿಕಾರಿಯ ಮರಣ, ಅಮಾನತ್ತು ಅಥವಾ ತಾತ್ಕಾಲಿಕ ಗೈರು ಹಾಜರಿಯ ಸಂದರ್ಭದಲ್ಲಿ, ಕುಲಾಧಿಪತಿಯು, ಸಂದರ್ಭಾನುಸಾರ ರಿಜಿಸ್ಟ್ರಾರ್, ರಿಜಿಸ್ಟ್ರಾರ್ (ಮೌಲ್ಯಮಾಪನ) ಅಥವಾ ಹಣಕಾಸು ಅಧಿಕಾರಿಯ ಕರ್ತವ್ಯಗಳನ್ನು ನಿರ್ವಹಿಸಲು ವಿಶ್ವವಿದ್ಯಾನಿಲಯದ ಯಾವೊಬ್ಬ ಇತರ ಸೂಕ್ತ ಅಧಿಕಾರಿಗೆ ಪ್ರಾಧಿಕಾರ ನೀಡಬಹುದು.

(2) ರಿಜಿಸ್ಟ್ರಾರ್, ರಿಜಿಸ್ಟ್ರಾರ್ (ಮೌಲ್ಯಮಾಪನ) ಅಥವಾ ಹಣಕಾಸು ಅಧಿಕಾರಿಯ ಪದದಲ್ಲಿ ಖಾಲಿ ಸ್ಥಾನವನ್ನು ಭರ್ತಿ ಮಾಡಲು ಸೂಕ್ತ ಅಧಿಕಾರಿಯನ್ನು ನೇಮಕಾತಿ ಮಾಡುವವರೆಗೆ ಕುಲಪತಿಯು ತನ್ನ ವಿವೇಚನಾನುಸಾರ, ಅಂತಹ ಖಾಲಿ ಹುದ್ದೆಗಳ ಕರ್ತವ್ಯವನ್ನು ನಿರ್ವಹಿಸಲು ಯಾವೊಬ್ಬ ಅಧಿಕಾರಿಯನ್ನು ಪ್ರಾಧಿಕರಿಸಬಹುದು. ಕುಲಪತಿಯು, ಈ ಉಪಪ್ರಕರಣದ ಅಡಿಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಕೂಡಲೇ ಕುಲಾಧಿಪತಿಗೆ ವರದಿಮಾಡತಕ್ಕದ್ದು.

**21. ಡೀನ್.**- (1) ಜ್ಯೇಷ್ಠತೆಯ ಅನುಸಾರ ಪ್ರತಿಯೊಂದು ವ್ಯಾಸಂಗ ವಿಭಾಗದಲ್ಲಿ ಒಬ್ಬ ಪ್ರಾಧ್ಯಾಪಕನು ಸರದಿಯ ಪ್ರಕಾರ ಎರಡು ವರ್ಷಗಳ ಅವಧಿಗೆ ವ್ಯಾಸಂಗ ವಿಭಾಗದ ಡೀನ್ ಆಗಿ ಕಾರ್ಯನಿರ್ವಹಿಸತಕ್ಕದ್ದು:

ಪರಂತು, ಪ್ರಾಧ್ಯಾಪಕರಿಲ್ಲದಿದ್ದರೆ, ಜ್ಯೇಷ್ಠತಮ ರೀಡರನು, ಡೀನ್ ಆಗಿ ಕಾರ್ಯ ನಿರ್ವಹಿಸತಕ್ಕದ್ದು:

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೪ಎ<br>Part –IVA | ಬೆಂಗಳೂರು, ಬುಧವಾರ, ೩೦, ಡಿಸೆಂಬರ್, ೨೦೨೦ ( ಮಾರ್ಗಶಿರ, ೦೯, ಶಕವರ್ಷ, ೧೯೪೨)<br>BENGALURU, WEDNESDAY, 30, DECEMBER, 2020 ( MARGASHIRA, 09, SHAKAVARSHA, 1942) | ನಂ. ೭೧೮<br>No. 718 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

## ಸಂಖ್ಯೆ: ಸಂವ್ಯಶಾಇ 43 ಶಾಸನ 2020, ಬೆಂಗಳೂರು, ದಿನಾಂಕ: 30.12.2020

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2020 ಇದಕ್ಕೆ 2020 ರ ಡಿಸೆಂಬರ್ ತಿಂಗಳ 30ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020 ರ ಕರ್ನಾಟಕ ಅಧಿನಿಯಮ ಸಂಖ್ಯೆ:54 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 54

(2020 ರ ಡಿಸೆಂಬರ್ ತಿಂಗಳ ಮೂವತ್ತನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ಅಧಿನಿಯಮ. 2020

(2020ರ ಡಿಸೆಂಬರ್ ತಿಂಗಳ ಮೂವತ್ತನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29) ಮತ್ತು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಅಧಿನಿಯಮ, 2011ನ್ನು (2012ರ ಕರ್ನಾಟಕ ಅಧಿನಿಯಮ 11) ಮತ್ತಷ್ಟು ತಿದ್ದುಪಡಿ ಮಾಡಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಒಂದು ಅಧಿನಿಯಮ;

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29) ಮತ್ತು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಅಧಿನಿಯಮ, 2011ನ್ನು (2012ರ ಕರ್ನಾಟಕ ಅಧಿನಿಯಮ 11) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

**14ಬಿ. ಹೊಸ ವಿಶ್ವವಿದ್ಯಾನಿಯಲದ ಸ್ಥಾಪನೆಯ ಮೇರೆಗೆ ತಾತ್ಕಾಲಿಕ ಉಪಬಂಧಗಳು.-** (1) ಮೂಲ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಪ್ರಥಮ ಕುಲಪತಿಯವರು ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ಸಂದರ್ಭಾನುಸಾರವಾಗಿ, ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ಹೊಸ ವಿಶ್ವವಿದ್ಯಾನಿಲಯದ ಎಲ್ಲಾ ಅಥವಾ ಯಾವುದೇ ಪ್ರಕಾರ್ಯಗಳನ್ನು ನಿರ್ವಹಿಸಬಹುದು ಮತ್ತು ಆ ಉದ್ದೇಶಕ್ಕಾಗಿ, ಮೂಲ ಅಧಿನಿಯಮದ ಮೂಲಕ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರವು ಚಲಾಯಿಸಬೇಕಾದ ಅಥವಾ ನಿರ್ವಹಿಸಬೇಕಾದ ಯಾವುದೇ ಅಧಿಕಾರವನ್ನು ಅಥವಾ ಯಾವುದೇ ಕರ್ತವ್ಯವನ್ನು ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಉಪಬಂಧಿಸಿದಂತೆ ಅಂಥ ಪ್ರಾಧಿಕಾರವು ಅಸ್ತಿತ್ವಕ್ಕೆ ಬರುವವರೆಗೆ ಚಲಾಯಿಸಬಹುದು ಅಥವಾ ನೆರವೇರಿಸಬಹುದು.

(2) ಮೂಲ ಅಧಿನಿಯಮದ 5ನೇ ಪ್ರಕರಣದ ಅಡಿಯಲ್ಲಿ ಹೊಸ ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಿಗೆ ಅಥವಾ ಇತರ ಶಿಕ್ಷಣ ಸಂಸ್ಥೆಗಳಿಗೆ ಅನ್ವಯವಾಗತಕ್ಕ, ಹಿಂದಿನ ವಿಶ್ವವಿದ್ಯಾನಿಲಯವು ರಚಿಸಿದ ಎಲ್ಲ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳನ್ನು ಹೊಸ ವಿಶ್ವವಿದ್ಯಾಲಯವು ಸಂದರ್ಭಾನುಸಾರವಾಗಿ ರಚಿಸಿದ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳೆಂದು ಭಾವಿಸತಕ್ಕದ್ದು ಮತ್ತು ಅವು ಹೊಸ ವಿಶ್ವವಿದ್ಯಾನಿಲಯವು ತನ್ನದೇ ಆದ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳನ್ನು ರಚಿಸುವವರೆಗೆ ಹಾಗೆಯೇ ಮುಂದುವರಿಯತಕ್ಕದ್ದು:

ಪರಂತು,ಕುಲಪತಿಯವರು, ಕುಲಾಧಿಪತಿಯವರ ಅನುಮೋದನೆಯೊಂದಿಗೆ, ತಾವು ಅವಶ್ಯಕವೆಂದು ಪರಿಗಣಿಸಬಹುದಾದಂಥ ಮಾರ್ಪಾಡುಗಳನ್ನು ಅಥವಾ ಅಳವಡಿಕೆಗಳನ್ನು ಅದರಲ್ಲಿ ಮಾಡಬಹುದು."

(10) 17ನೇ ಪ್ರಕರಣದ (1)ನೇ ಉಪಪ್ರಕರಣಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(1) ರಿಜಿಸ್ಟ್ರಾರ್‌ರವರು ವಿಶ್ವವಿದ್ಯಾನಿಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ರಾಜ್ಯ ಸರ್ಕಾರವು, ಅಖಿಲ ಭಾರತ ಸೇವೆಗೆ ಸೇರಿದ ಒಬ್ಬ ಅಧಿಕಾರಿಯನ್ನು ಅಥವಾ ಕರ್ನಾಟಕ ಆಡಳಿತ ಸೇವೆಗೆ ಸೇರಿದ ಹಿರಿಯ ಶ್ರೇಣಿಯ ಗ್ರೂಪ್ 'ಎ' ಅಧಿಕಾರಿಯ ದರ್ಜೆಗಿಂತ ಕಡಿಮೆಯಲ್ಲದ ಮತ್ತು ಮೇಲಿನ ಒಬ್ಬ ಅಧಿಕಾರಿಯನ್ನು ವಿಶ್ವವಿದ್ಯಾನಿಲಯದ ರಿಜಿಸ್ಟ್ರಾರ್‌ರನ್ನಾಗಿ ನೇಮಕ ಮಾಡಬಹುದು."

(11) 19ನೇ ಪ್ರಕರಣದಲ್ಲಿ,-

(i) (1)ನೇ ಉಪಪ್ರಕರಣಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(1) ಲೆಕ್ಕಪರಿಶೋಧನೆ, ಲೆಕ್ಕಪತ್ರನಿರ್ವಹಣೆ ಮತ್ತು ಹಣಕಾಸು ಆಡಳಿತದಲ್ಲಿ ಅನುಭವವನ್ನು ಹೊಂದಿರುವ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಜಂಟಿ ನಿಯಂತ್ರಕರ ವೃಂದದ ಅಧಿಕಾರಿಗಳಾಗಿರುವ ಅಥವಾ ಉಪ ಮಹಾಲೇಖಪಾಲರ ದರ್ಜೆಯ ಅಧಿಕಾರಿಗಳಾಗಿರುವ ವ್ಯಕ್ತಿಗಳಿಂದ ಪೈಕಿ ರಾಜ್ಯ ಸರ್ಕಾರದ ಮೂಲಕ ನೇಮಕವಾಗುವ ಹಣಕಾಸು ಅಧಿಕಾರಿಯು ವಿಶ್ವವಿದ್ಯಾನಿಯಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ಕಾಲಾವಧಿಯೊಳಗಾಗಿ ಯಾವೊಬ್ಬ ವ್ಯಕ್ತಿಯನ್ನು ನೇಮಕ ಮಾಡಲಾಗದಿದ್ದಲ್ಲಿ, ಕುಲಾಧಿಪತಿಯವರು ರಾಜ್ಯ ಸರ್ಕಾರದ ಸಮಾಲೋಚನೆಯೊಂದಿಗೆ, ಅವರು

## ಕನ್ನಡ ವಿಶ್ವವಿದ್ಯಾನಿಲಯ ಅಧಿನಿಯಮ, 1991

### ಪ್ರಕರಣಗಳ ಕ್ರಮಪಟ್ಟಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:


ಅಧ್ಯಾಯ I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.
2. ಪರಿಭಾಷೆಗಳು.

ಅಧ್ಯಾಯ II

ವಿಶ್ವವಿದ್ಯಾನಿಲಯ

3. ವಿಶ್ವವಿದ್ಯಾನಿಲಯದ ಸ್ಥಾಪನೆ.
4. ವಿಶ್ವವಿದ್ಯಾನಿಲಯದ ಉದ್ದೇಶಗಳು.
5. ವಿಶ್ವವಿದ್ಯಾನಿಲಯದ ಅಧಿಕಾರಗಳು.
6. ವಿಶ್ವವಿದ್ಯಾನಿಲಯಕ್ಕೆ ಪ್ರವೇಶ.
7. ಸದಸ್ಯತ್ವಕ್ಕೆ ಅನರ್ಹತೆ.
8. ಕೆಲವು ಸಂದರ್ಭಗಳಲ್ಲಿ ಆಡಳಿತ ಮಂಡಲಿ ಮತ್ತು ಕಾರ್ಯಕಾರಿ ಸಮಿತಿಗೆ ನಾಮನಿರ್ದೇಶಿತರಾಗಲು ಅನರ್ಹತೆ.
9. ಪರಿಶೀಲನೆ.
10. ವಿಶ್ವವಿದ್ಯಾನಿಲಯದ ಅಧಿಕಾರಿಗಳು.
11. ಕುಲಾಧಿಪತಿಯವರು.
12. ಪ್ರೊ-ಚಾನ್ಸಲರ್.
13. ಕುಲಪತಿಯವರು.
14. ಕುಲಪತಿಯವರ ಅಧಿಕಾರಗಳು ಮತ್ತು ಕರ್ತವ್ಯಗಳು.
15. ಕುಲಸಚಿವರು.
16. ಹಣಕಾಸು ಅಧಿಕಾರಿ.
17. ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು.
18. ಕುಲಪತಿ ಮತ್ತು ಇತರ ಅಧಿಕಾರಿಗಳು ಮುಂತಾದವರು ಲೋಕ ನೌಕರರಾಗಿರಬೇಕು.

ಅಧ್ಯಾಯ III

ಆಡಳಿತ ಮಂಡಲಿ

19. ಆಡಳಿತ ಮಂಡಲಿ.
20. ಆಡಳಿತ ಮಂಡಲಿಯಿಂದ ಸ್ಥೂಲ ಶಿಕ್ಷಣ ನೀತಿಗಳು ಮತ್ತು ಕಾರ್ಯಕ್ರಮಗಳು ಮತ್ತು ವಿಶ್ವವಿದ್ಯಾನಿಲಯದ ಪ್ರಕಾರ್ಯಗಳ ಪುನರವಲೋಕನ.
21. ಆಡಳಿತ ಮಂಡಲಿಯ ಸಭೆಗಳು.

(2) ಪ್ರಾಧಿಕಾರಗಳಿಗೆ ವ್ಯಕ್ತಿಗಳನ್ನು ನಾಮನಿರ್ದೇಶನ ಮಾಡಲು ಕುಲಾಧಿಪತಿಯವರಿಗೆ ಅಧಿಕಾರವನ್ನು ಪ್ರದತ್ತಗೊಳಿಸಿರುವಲ್ಲಿ ಕುಲಾಧಿಪತಿಯವರು ಅವಶ್ಯಕವಿರುವಷ್ಟರಮಟ್ಟಿಗೆ ಸಾಕಷ್ಟು ಪ್ರಾತಿನಿಧ್ಯ ಪಡೆಯದ ಹಿತಾಸಕ್ತಿಗಳನ್ನು ಪ್ರತಿನಿಧಿಸಲು ವ್ಯಕ್ತಿಗಳನ್ನು ನಾಮನಿರ್ದೇಶಿಸತಕ್ಕದ್ದು.

(3) ಕುಲಾಧಿಪತಿಯವರು ಸ್ವತಃ ತಾವೇ ಆಗಲಿ ಅಥವಾ ಅರ್ಜಿಯ ಮೇಲೆ ಆಗಲಿ ಯಾವುವೇ ವ್ಯವಹರಣೆಗಳ ಸಂಬಂಧದಲ್ಲಿ ಅಂಥ ವ್ಯವಹರಣೆಗಳ ಸಕ್ರಮತೆ ಅಥವಾ ಯಥಾರ್ಥತೆ, ಕೈಗೊಳ್ಳಲಾದ ಯಾವುದೇ ತೀರ್ಮಾನ ಅಥವಾ ಅದರಲ್ಲಿ ಜಾರಿ ಮಾಡಲಾದ ಆದೇಶದ ಕಾನೂನು ಸಮ್ಮತತೆ ಅಥವಾ ಔಚಿತ್ಯದ ಬಗ್ಗೆ ತಾವೇ ಮನದಟ್ಟು ಮಾಡಿಕೊಳ್ಳಲು ವಿಶ್ವವಿದ್ಯಾನಿಲಯದ ಯಾವೊಬ್ಬ ಅಧಿಕಾರಿ ಅಥವಾ ಯಾವುದೇ ಪ್ರಾಧಿಕಾರದ ದಾಖಲೆಗಳನ್ನು ತರಿಸಿಕೊಂಡು ಪರೀಕ್ಷಿಸಬಹುದು ಮತ್ತು ಯಾವುದೇ ಸಂದರ್ಭದಲ್ಲಿ, ಕುಲಾಧಿಪತಿಯವರಿಗೆ, ಅಂಥ ಯಾವುದೇ ತೀರ್ಮಾನ ಅಥವಾ ಆದೇಶವನ್ನು ಮಾರ್ಪಾಟುಗೊಳಿಸಬೇಕು, ರದ್ದುಗೊಳಿಸಬೇಕು, ವಿಪರ್ಯಯಗೊಳಿಸಬೇಕು ಅಥವಾ ಪುರನ್ ಪರಿಶೀಲನೆಗಾಗಿ ಹಿಂದಕ್ಕೆ ಕಳುಹಿಸಬೇಕೆಂದು ತೋರಿದರೆ, ಅವರು ತದನುಸಾರವಾಗಿ ಆದೇಶಗಳನ್ನು ಜಾರಿ ಮಾಡಬಹುದು:

ಪರಂತು, ಈ ಪ್ರಕರಣದ ಅಡಿಯಲ್ಲಿ ಅಧಿಕಾರಗಳನ್ನು ಚಲಾಯಿಸುವುದಕ್ಕಾಗಿ, ಪ್ರತಿಯೊಂದು ಅರ್ಜಿಯನ್ನು, ಅರ್ಜಿಯ ಸಂಬಂಧದಲ್ಲಿನ ವ್ಯವಹರಣೆ, ತೀರ್ಮಾನ ಅಥವಾ ಆದೇಶವನ್ನು ಅರ್ಜಿದಾರನಿಗೆ ತಿಳಿಸಿದ ದಿನಾಂಕದಿಂದ ಮೂರು ತಿಂಗಳೊಳಗೆ ಕುಲಾಧಿಪತಿಯವರಿಗೆ ಸಲ್ಲಿಸತಕ್ಕದ್ದು:

ಮತ್ತು ಪರಂತು, ಯಾವೊಬ್ಬ ವ್ಯಕ್ತಿಗೆ ಪ್ರತಿಕೂಲವಾದ ಯಾವುದೇ ಆದೇಶವನ್ನು ಅಂಥ ವ್ಯಕ್ತಿಗೆ ತನ್ನ ಮನವಿಯನ್ನು ಸಲ್ಲಿಸಲು ಅವಕಾಶವನ್ನು ನೀಡಿದ್ದ ಹೊರತು, ಜಾರಿ ಮಾಡತಕ್ಕದ್ದಲ್ಲ.

(4) ಕುಲಾಧಿಪತಿಯವರು, ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತಗೊಳಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಪ್ರೊ-ಚಾನ್ಸಲರ್.**- (1) ಕರ್ನಾಟಕ ರಾಜ್ಯದಲ್ಲಿ, ಉನ್ನತ ಶಿಕ್ಷಣ ಖಾತೆಯ ಪ್ರಭಾರ ಹೊಂದಿರುವ ಸಚಿವರು, ವಿಶ್ವವಿದ್ಯಾನಿಲಯದ ಪ್ರೊ-ಚಾನ್ಸಲರಾಗಿರತಕ್ಕದ್ದು.

(2) ಪ್ರೊ-ಚಾನ್ಸಲರ್ ರವರು, ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತವಾಗಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**13. ಕುಲಪತಿಯವರು.**- [1][(1) ಕುಲಪತಿಯವರ ನೇಮಕಾತಿಯನ್ನು, (2)ನೇ ಉಪ ಪ್ರಕರಣದ ಅಡಿಯಲ್ಲಿ ಸರ್ಕಾರದ ಶಿಫಾರಸ್ಸಿನ ಮೇಲೆ ಕುಲಾಧಿಪತಿ ಅವರು ಮಾಡತಕ್ಕದ್ದು.][1]

1. 1999ರ ಅಧಿನಿಯಮ ಸಂಖ್ಯೆ 19ರಲ್ಲಿ ದಿ: 29.4.1999ರಿಂದ ಪ್ರತಿಯೋಜಿಸಲಾಗಿದೆ.

[1][(2) (1)ನೇ ಉಪ ಪ್ರಕರಣದ ಉದ್ದೇಶಕ್ಕಾಗಿ, ಸರ್ಕಾರವು ಮೂವರು ವ್ಯಕ್ತಿಗಳನ್ನೊಳಗೊಂಡ ಒಂದು ಶೋಧನಾ ಸಮಿತಿಯನ್ನು ಸ್ಥಾಪಿಸತಕ್ಕದ್ದು; ಅವರುಗಳ ಪೈಕಿ ಒಬ್ಬರು ಕಾರ್ಯಕಾರಿ ಸಮಿತಿಯಿಂದ ನಾಮ ನಿರ್ದೇಶಿತರಾಗಿರತಕ್ಕದ್ದು. ಒಬ್ಬರು ವಿಶ್ವವಿದ್ಯಾನಿಲಯ ಧನ ಸಹಾಯ ಆಯೋಗದಿಂದ ನಾಮನಿರ್ದೇಶಿತರಾಗಿರತಕ್ಕದ್ದು. ಹಾಗೂ ಒಬ್ಬರು ಸರ್ಕಾರದಿಂದ ನಾಮನಿರ್ದೇಶಿತರಾಗಿರತಕ್ಕದ್ದು. ಶೋಧನಾ ಸಮಿತಿಯು ಅಕಾರಾದಿ ಕ್ರಮದಲ್ಲಿ ಮೂವರು ವ್ಯಕ್ತಿಗಳ ಹೆಸರುಗಳನ್ನೊಳಗೊಂಡ ಪಟ್ಟಿಯೊಂದನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಅಂಥ ಪಟ್ಟಿಯು, ಸದರಿ ಸಮಿತಿಯ ಯಾವೊಬ್ಬ ಸದಸ್ಯನ ಹೆಸರನ್ನು ಒಳಗೊಂಡಿರತಕ್ಕದ್ದಲ್ಲ. ಸದರಿ ಪಟ್ಟಿಯಲ್ಲಿರುವ ಮೂವರು ವ್ಯಕ್ತಿಗಳ ಪೈಕಿ ಒಬ್ಬರ ಹೆಸರನ್ನು ಕುಲಪತಿಯಾಗಿ ನೇಮಕ ಮಾಡಲು ಸರ್ಕಾರವು ಕುಲಾಧಿಪತಿಯವರಿಗೆ ಶಿಫಾರಸ್ಸು ಮಾಡತಕ್ಕದ್ದು, ಅವಶ್ಯಕವಾದರೆ ಒಂದು ಹೊಸ ಪಟ್ಟಿಯನ್ನು ಶೋಧನಾ ಸಮಿತಿಯಿಂದ ಸರ್ಕಾರವು ಪಡೆಯಬಹುದು. ಆದರಂತೆ ಸರ್ಕಾರವು ಅಂಥ ಬೇಡಿಕೆಯನ್ನು ಸಲ್ಲಿಸಿದಾಗ ಶೋಧನಾ ಸಮಿತಿಯು ಹೊಸದಾಗಿ ಮೂವರು ವ್ಯಕ್ತಿಗಳ ಹೆಸರುಗಳನ್ನೊಳಗೊಂಡ ಒಂದು ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು:][1]

1. 1999ರ ಅಧಿನಿಯಮ ಸಂಖ್ಯೆ 19ರಲ್ಲಿ ದಿ: 29.4.1999ರಿಂದ ಪ್ರತಿಯೋಜಿಸಲಾಗಿದೆ.

ಪರಂತು,-

(ಎ) ಹಾಗೆ ನಾಮನಿರ್ದೇಶಿತನಾದ ವ್ಯಕ್ತಿಯು ವಿಶ್ವವಿದ್ಯಾನಿಲಯದ ಯಾವುವೇ ಪ್ರಾಧಿಕಾರಗಳ ಸದಸ್ಯನಾಗಿರತಕ್ಕದ್ದಲ್ಲ;

(ಬಿ) ಕುಲಾಧಿಪತಿಯವರಿಂದ ಹಾಗೆ ನಾಮನಿರ್ದೇಶಿತನಾದ ವ್ಯಕ್ತಿಯು, ಸಮಿತಿಯ ಸಭೆಗಳನ್ನು ಸಮಾವೇಶಗೊಳಿಸತಕ್ಕದ್ದು;

(3) ಕುಲಪತಿಯವರು ಮೂರು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದು ಮತ್ತು ಮೂರು ವರ್ಷಗಳ ಹೆಚ್ಚಿನ ಅವಧಿಯವರೆಗೆ ಪುನಃ ನೇಮಕಗೊಳ್ಳಲು ಅರ್ಹರಾಗಿರತಕ್ಕದ್ದು:

ಪರಂತು, ಯಾವೊಬ್ಬ ವ್ಯಕ್ತಿಯು ಒಟ್ಟು ಆರು ವರ್ಷಗಳಿಗಿಂತ ಹೆಚ್ಚಾಗಿ ಕುಲಪತಿಯವರ ಹುದ್ದೆಯನ್ನು ಧಾರಣ ಮಾಡತಕ್ಕದ್ದಲ್ಲ:

ಮತ್ತು ಪರಂತು,-

(ಎ) ಕುಲಾಧಿಪತಿಯವರು, ನಿರ್ದೇಶನದಲ್ಲಿ ನಿರ್ದಿಷ್ಟಪಡಿಸಬಹುದಾದ ಒಂದು ವರ್ಷದ ಒಟ್ಟು ಅವಧಿಗೆ ಮೀರದ ಅಂಥ ಅವಧಿಯವರೆಗೆ ಪದಾವಧಿಯು ಮುಕ್ತಾಯಗೊಂಡಿರುವ ಕುಲಪತಿಯವರು ತಮ್ಮ ಪದದಲ್ಲಿ ಮುಂದುವರಿಯತಕ್ಕದ್ದೆಂದು ನಿರ್ದೇಶಿಸಬಹುದು;

(ಬಿ) ಕುಲಪತಿಯವರು, ತಮ್ಮ ಸಹಿಯೊಂದಿಗೆ ಕುಲಾಧಿಪತಿಯವರಿಗೆ ಪತ್ರ ಬರೆದು ಮತ್ತು ಎರಡು ತಿಂಗಳುಗಳ ನೋಟೀಸನ್ನು ನೀಡಿದ ತರುವಾಯ ತಮ್ಮ ಪದಕ್ಕೆ ರಾಜೀನಾಮೆಯನ್ನು ನೀಡಬಹುದು:

ಅಲ್ಲದೆ ಪರಂತು, ಕುಲಪತಿಯವರಾಗಿ ನೇಮಕಗೊಂಡ ಒಬ್ಬ ವ್ಯಕ್ತಿಯು, ತಮ್ಮ ಪದಾವಧಿಯಲ್ಲಿ ಅಥವಾ ಅದರ ಯಾವುದೇ ಮುಂದುವರಿಕೆಯಲ್ಲಿ, ಅರವತ್ತೈದು ವರ್ಷಗಳ ವಯಸ್ಸು ಪೂರ್ಣಗೊಂಡರೆ, ತಮ್ಮ ಪದದಿಂದ ನಿವೃತ್ತರಾಗತಕ್ಕದ್ದು.

(4) ಕುಲಪತಿಯವರ ಪದದಲ್ಲಿ ಯಾವುದೇ ತಾತ್ಕಾಲಿಕ ರಿಕ್ತತೆಯುಂಟಾದಾಗ ಅಥವಾ ಕುಲಪತಿಯವರು, ಗೈರು ಹಾಜರಿನ ಕಾರಣದಿಂದಾಗಿ ಅಥವಾ ಇತರ ಯಾವುದೇ ಕಾರಣಕ್ಕಾಗಿ ತಮ್ಮ ಪದದ ಅಧಿಕಾರಗಳನ್ನು ಚಲಾಯಿಸಲು ಮತ್ತು ಕರ್ತವ್ಯಗಳನ್ನು ನೆರವೇರಿಸಲು ಅಸಮರ್ಥರಾದಾಗ, ಕಾರ್ಯಕಾರಿ ಸಮಿತಿಯು, ಕುಲಾಧಿಪತಿಯವರ ಅನುಮೋದನೆಯೊಂದಿಗೆ ಕುಲಪತಿಯವರ ಅಧಿಕಾರಗಳನ್ನು ಚಲಾಯಿಸಲು ಮತ್ತು ಕರ್ತವ್ಯಗಳನ್ನು ನಿರ್ವಹಿಸಲು ಅಗತ್ಯವಾದ ವ್ಯವಸ್ಥೆಗಳನ್ನು ಮಾಡುವವರೆಗೆ, ವಿಶ್ವವಿದ್ಯಾನಿಲಯದ ಜ್ಯೇಷ್ಠತಮ ಪ್ರಾಧ್ಯಾಪಕರು, ಕುಲಪತಿಯವರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(5) ಕುಲಪತಿಯವರ ಉಪಲಬ್ಧಿಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಕುಲಾಧಿಪತಿಯವರು ನಿರ್ಧರಿಸಬಹುದಾದಂಥವುಗಳಾಗಿರತಕ್ಕದ್ದು.

14. **ಕುಲಪತಿಯವರ ಅಧಿಕಾರಗಳು ಮತ್ತು ಕರ್ತವ್ಯಗಳು.**- (1) ಕುಲಪತಿಯವರು ಶೈಕ್ಷಣಿಕ ಮುಖ್ಯಸ್ಥರು ಮತ್ತು ವಿಶ್ವವಿದ್ಯಾನಿಲಯದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿರತಕ್ಕದ್ದು ಮತ್ತು ಕುಲಾಧಿಪತಿಯವರು ಮತ್ತು ಪ್ರೋಚಾನ್ಸಲರ ಗೈರುಹಾಜರಿಯಲ್ಲಿ, ವಿಶ್ವವಿದ್ಯಾನಿಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪದವಿಗಳು, ಡಿಪ್ಲೊಮಾ ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು, ಅವುಗಳನ್ನು ಸ್ವೀಕರಿಸಲು ಹಕ್ಕುಳ್ಳವರಾಗಿರುವ ವ್ಯಕ್ತಿಗಳಿಗೆ ಪ್ರದಾನ ಮಾಡತಕ್ಕದ್ದು. ಅವರು ಆಡಳಿತ ಮಂಡಲಿ, ಕಾರ್ಯಕಾರಿ ಸಮಿತಿ ಹಾಗೂ ಹಣಕಾಸು ಸಮಿತಿಯ ಪದನಿಮಿತ್ತ ಸದಸ್ಯರಾಗಿದ್ದು ಅವುಗಳ ಅಧ್ಯಕ್ಷರಾಗಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರದ ಯಾವುದೇ ಸಭೆಯಲ್ಲಿ ಹಾಜರಿದ್ದು ಅಲ್ಲಿ ಭಾಷಣ ಮಾಡಲು ಹಕ್ಕುಳ್ಳವರಾಗಿರತಕ್ಕದ್ದು. ಆದರೆ ಅವರು, ಸಂಬಂಧಪಟ್ಟ ಪ್ರಾಧಿಕಾರದ ಒಬ್ಬ ಸದಸ್ಯರಾಗಿದ್ದ ಹೊರತು ಅಲ್ಲಿ ಮತ ನೀಡಲು ಹಕ್ಕುಳ್ಳವರಾಗಿರತಕ್ಕದ್ದಲ್ಲ.

(2) ಈ ಅಧಿನಿಯಮದ ಉಪಬಂಧಗಳು ಮತ್ತು ಪರಿನಿಯಮಗಳನ್ನು ಪಾಲಿಸಲಾಗಿದೆ ಮತ್ತು ಅವುಗಳನ್ನು ನೆರವೇರಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಕುಲಪತಿಯವರ ಕರ್ತವ್ಯವಾಗಿರತಕ್ಕದ್ದು ಮತ್ತು ಈ ಉದ್ದೇಶಕ್ಕಾಗಿ ಅವರು ಅವಶ್ಯಕವಾದ ಎಲ್ಲ ಅಧಿಕಾರಗಳನ್ನು ಚಲಾಯಿಸಬಹುದು.

(3) ಕುಲಪತಿಯವರು ಆಡಳಿತ ಮಂಡಲಿ, ಕಾರ್ಯಕಾರಿ ಸಮಿತಿ ಮತ್ತು ಹಣಕಾಸು ಸಮಿತಿಯ ಸಭೆಗಳನ್ನು ಸಮಾವೇಶಗೊಳಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

(4) (ಎ) ಕುಲಪತಿಯವರು ಯಾವುದೇ ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಅಧಿಕಾರ ಹೊಂದಿರತಕ್ಕದ್ದು ಮತ್ತು ತಾವು ಅವಶ್ಯವೆಂದು ಭಾವಿಸುವ ಅಂಥ ಕ್ರಮವನ್ನು ಆದೇಶದ ಮೂಲಕ ಕೈಗೊಳ್ಳತಕ್ಕದ್ದು. ಆದರೆ, ತದನಂತರ,

ಸಾಧ್ಯವಾದಷ್ಟು ಬೇಗನೆ, ಕೈಗೊಳ್ಳಲಾದ ಕ್ರಮವನ್ನು, ವಿಷಯವನ್ನು ಸಾಮಾನ್ಯವಾಗಿ ವ್ಯವಹರಿಸುತ್ತಿದ್ದ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ನಿಕಾಯಕ್ಕೆ ವರದಿ ಮಾಡತಕ್ಕದ್ದು:

ಪರಂತು, ಬಾಧಿತನಾಗುವ ಸಂಭವವಿರುವ ವ್ಯಕ್ತಿಗೆ ಅಹವಾಲನ್ನು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡಿದ ಹೊರತು ಅಂಥ ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(ಬಿ) ಈ ಉಪ-ಪ್ರಕರಣದ ಅಡಿಯಲ್ಲಿ ಕುಲಪತಿಯವರು ಕೈಗೊಂಡ ಕ್ರಮವು ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವ ಯಾವೊಬ್ಬ ವ್ಯಕ್ತಿಯನ್ನು ಬಾಧಿಸಿದಾಗ, ಅಂಥ ವ್ಯಕ್ತಿಯು, ಅಂಥ ಕ್ರಮದ ಬಗ್ಗೆ ನೋಟೀಸನ್ನು ತಾನು ಪಡೆದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಕಾರ್ಯಕಾರಿ ಸಮಿತಿಗೆ ಒಂದು ಅಪೀಲನ್ನು ಸಲ್ಲಿಸಲು ಹಕ್ಕುಳ್ಳವನಾಗಿರತಕ್ಕದ್ದು. ಕುಲಪತಿಯವರು ಅಂಥ ಅಪೀಲಿನ ಮೇಲೆ ಕಾರ್ಯಕಾರಿ ಸಮಿತಿಯು ಹೊರಡಿಸಿದ ಆದೇಶವನ್ನು ಪರಿಣಾಮಕಾರಿಯಾಗಿಸತಕ್ಕದ್ದು.

(5) ಕುಲಪತಿಯವರು, ವಿಶ್ವವಿದ್ಯಾನಿಲಯದ ಬೋಧಕರು ಮತ್ತು ಇತರ ಉದ್ಯೋಗಿಗಳ ನೇಮಕಾತಿ, ಅಮಾನತ್ತುಗೊಳಿಸುವಿಕೆ ಮತ್ತು ವಜಾ-ಇವುಗಳಿಗೆ ಸಂಬಂಧಿಸಿದಂತೆ ಕಾರ್ಯಕಾರಿ ಸಮಿತಿಯ ಆದೇಶಗಳನ್ನು ಪರಿಣಾಮಕಾರಿಯಾಗಿಸತಕ್ಕದ್ದು.

(6) ಕುಲಪತಿಯವರು, ವಿಶ್ವವಿದ್ಯಾನಿಲಯದ ವ್ಯವಹಾರಗಳ ಮೇಲೆ ನಿಯಂತ್ರಣವನ್ನು ಹೊಂದಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದಲ್ಲಿ ಶಿಸ್ತನ್ನು ಯಥೋಚಿತವಾಗಿ ಪಾಲಿಸಲು ಜವಾಬ್ದಾರರಾಗಿರತಕ್ಕದ್ದು.

(7) ಕುಲಪತಿಯವರು, ನಿಯಮಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

15. **ಕುಲಸಚಿವರು**.- (1) ಕುಲಸಚಿವರು ಕಾರ್ಯಕಾರಿ ಸಮಿತಿಯು ನಿರ್ದಿಷ್ಟಪಡಿಸಬಹುದಾದ ಅಂಥ ಅವಧಿಗೆ, ಕಾರ್ಯಕಾರಿ ಸಮಿತಿಯಿಂದ ನೇಮಕಗೊಂಡ ವಿಶ್ವವಿದ್ಯಾನಿಲಯದ ಒಬ್ಬ ಪೂರ್ಣಕಾಲಿಕ ವೇತನ ಪಡೆಯುವ ಅಧಿಕಾರಿಯಾಗಿರತಕ್ಕದ್ದು ಮತ್ತು ಕುಲಸಚಿವರ ಸೇವಾ ನಿಬಂದನೆಗಳು ಮತ್ತು ಷರತ್ತುಗಳು ಮೊದಲನೇ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದಂಥವುಗಳಾಗಿರತಕ್ಕದ್ದು.

(2) ಕುಲಸಚಿವರು, ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(3) ವಿಶ್ವವಿದ್ಯಾನಿಲಯದಿಂದ ಅಥವಾ ಅದರ ವಿರುದ್ಧವಾಗಿ ಹೂಡಲಾದ ಎಲ್ಲ ದಾವೆಗಳು ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದಪತ್ರಗಳು ಕುಲಸಚಿವರಿಂದ ಸಹಿಯಾಗಿ ಸತ್ಯಾಪಿತಗೊಂಡಿರತಕ್ಕದ್ದು ಮತ್ತು ಅಂಥ ದಾವೆಗಳು ಮತ್ತು ವ್ಯವಹರಣೆಗಳಲ್ಲಿನ ಎಲ್ಲ ಆದೇಶಿಕೆಗಳು (ಪ್ರೊಸಸ್ಸುಗಳು) ಕುಲಸಚಿವರಿಗೆ ಜಾರಿಯಾಗತಕ್ಕದ್ದು ಮತ್ತು ಕುಲಸಚಿವರಿಗೆ ಹೊರಡಿಸತಕ್ಕದ್ದು.

16. **ಹಣಕಾಸು ಅಧಿಕಾರಿ**.- ಹಣಕಾಸು ಅಧಿಕಾರಿಯು, ಈ ಬಗ್ಗೆ ಸರ್ಕಾರದಿಂದ ನಿರ್ದಿಷ್ಟಪಡಿಸಬಹುದಾದ ಅಂಥ ಅವಧಿಗೆ ಸರ್ಕಾರದಿಂದ ನೇಮಕಗೊಂಡ ವಿಶ್ವವಿದ್ಯಾನಿಲಯದ ಒಬ್ಬ ಪೂರ್ಣಕಾಲಿಕ ವೇತನ ಪಡೆಯುವ ಅಧಿಕಾರಿಯಾಗಿರತಕ್ಕದ್ದು ಮತ್ತು ಹಣಕಾಸು ಅಧಿಕಾರಿಯ ಸೇವಾ ಷರತ್ತುಗಳು ಮತ್ತು ನಿಬಂಧನೆಗಳು ಮೊದಲನೇ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದಂಥವುಗಳಾಗಿರತಕ್ಕದ್ದು.

17. **ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು**.- ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು, ಆಡಳಿತ ಮಂಡಲಿ, ಕಾರ್ಯಕಾರಿ ಸಮಿತಿ, ಫ್ಯಾಕಲ್ಟಿಗಳು, ಹಣಕಾಸು ಸಮಿತಿ, ಅಧ್ಯಯನ ಮಂಡಲಿಗಳು ಮತ್ತು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾಗಿರಬೇಕೆಂದು ಪರಿನಿಯಮಗಳಿಂದ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳಾಗಿರತಕ್ಕದ್ದು.

18. **ಕುಲಪತಿ ಮತ್ತು ಇತರ ಅಧಿಕಾರಿಗಳು ಮುಂತಾದವರು ಲೋಕ ನೌಕರರಾಗಿರಬೇಕು**.- ಕುಲಪತಿ, ಕುಲಸಚಿವ, ಹಣಕಾಸು ಅಧಿಕಾರಿ ಮತ್ತು ವಿಶ್ವವಿದ್ಯಾನಿಲಯದ ಇತರ ಉದ್ಯೋಗಿಗಳು, ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವಾಗ ಅಥವಾ ಕಾರ್ಯ ಮಾಡಲು ಉದ್ದೇಶಿಸಿದಾಗ ಭಾರತ ದಂಡ ಸಂಹಿತೆಯ (1860ರ ಕೇಂದ್ರ ಅಧಿನಿಯಮ 45) 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕ ನೌಕರರಾಗಿರುವರೆಂದು ಭಾವಿಸತಕ್ಕದ್ದು.

# 2009ರ ಕರ್ನಾಟಕ ಅಧಿನಿಯಮ ಸಂಖ್ಯೆ: 25

# ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಅಧಿನಿಯಮ, 2009

## ಪ್ರಕರಣಗಳ ಪಟ್ಟಿ


ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ:

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು

ಅಧ್ಯಾಯ – II

ವಿಶ್ವವಿದ್ಯಾಲಯ

3. ವಿಶ್ವವಿದ್ಯಾಲಯದ ಸ್ಥಾಪನೆ
4. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು
5. ವಿಶ್ವವಿದ್ಯಾಲಯದ ಅಧಿಕಾರಗಳು
6. ವಿಶ್ವವಿದ್ಯಾಲಯಕ್ಕೆ ಪ್ರವೇಶ
7. ವಿಶ್ವವಿದ್ಯಾಲಯದ ಅಧಿಕಾರ ವ್ಯಾಪ್ತಿ
8. ಪರಿಶೀಲನೆ

ಅಧ್ಯಾಯ – III

ವಿಶ್ವವಿದ್ಯಾಲಯದ ಅಧಿಕಾರಿಗಳು

9. ವಿಶ್ವವಿದ್ಯಾಲಯದ ಅಧಿಕಾರಿಗಳು
10. ಕುಲಾಧಿಪತಿಯವರು
11. ಸಹಕುಲಾಧಿಪತಿಯವರು
12. ಕುಲಪತಿ
13. ಕುಲಪತಿಯವರ ಅಧಿಕಾರಗಳು ಮತ್ತು ಕರ್ತವ್ಯಗಳು
14. ಫ್ಯಾಕಲ್ಟಿಗಳ ಡೀನರು
15. ಕುಲಸಚಿವ
16. ಕುಲಸಚಿವರ ಅಧಿಕಾರಗಳು ಮತ್ತು ಕರ್ತವ್ಯಗಳು
17. ಹಣಕಾಸು ಅಧಿಕಾರಿ
18. ಹಣಕಾಸು ಅಧಿಕಾರಿಯ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು

ಅಧ್ಯಾಯ – IV

ವಿಶ್ವವಿದ್ಯಾಲಯದ ಪ್ರಾಧಿಕಾರಗಳು

19. ವಿಶ್ವವಿದ್ಯಾಲಯದ ಪ್ರಾಧಿಕಾರಗಳು
20. ಪ್ರಶಾಸನ ಸಭೆ
21. ಪದಾವಧಿ
22. ಪ್ರಶಾಸನ ಸಭೆಯ ಅಧಿಕಾರಗಳು
23. ಪ್ರಶಾಸನ ಸಭೆಯ ಸಭೆಗಳು
24. ಪ್ರಶಿಕ್ಷಣ ಪರಿಷತ್ತು
25. ಪ್ರಶಿಕ್ಷಣ ಪರಿಷತ್ತಿನ ಅಧಿಕಾರಗಳು
26. ಪ್ರಶಿಕ್ಷಣ ಪರಿಷತ್ತಿನ ಸಭೆಗಳು
27. ಫ್ಯಾಕಲ್ಟಿಗಳ ರಚನೆ ಮತ್ತು ಪ್ರಕಾರ್ಯಗಳು
28. ಹಣಕಾಸು ಸಮಿತಿ
29. ಅಧ್ಯಯನ ಮಂಡಲಿಗಳು
30. ಇತರ ಪ್ರಾಧಿಕಾರಗಳ ರಚನೆ

ಮತ್ತು ಪರಂತು, ಯಾವೊಬ್ಬ ವ್ಯಕ್ತಿಗೆ ಪ್ರತಿಕೂಲವಾದ ಯಾವುದೇ ಆದೇಶವನ್ನು ಅಂಥ ವ್ಯಕ್ತಿಗೆ ತನ್ನ ಮನವಿಯನ್ನು ಸಲ್ಲಿಸಲು ಅವಕಾಶವನ್ನು ನೀಡಿದ್ದ ಹೊರತು, ಜಾರಿ ಮಾಡತಕ್ಕದ್ದಲ್ಲ.

(4) ಕುಲಾಧಿಪತಿಯವರು, ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತಗೊಳಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**11. ಸಹಕುಲಾಧಿಪತಿಯವರು.**- (1) ಕರ್ನಾಟಕ ರಾಜ್ಯದಲ್ಲಿ, ಉನ್ನತ ಶಿಕ್ಷಣ ಖಾತೆಯ ಪ್ರಭಾರ ಹೊಂದಿರುವ ಸಚಿವರು, ವಿಶ್ವವಿದ್ಯಾಲಯದ ಸಹಕುಲಾಧಿಪತಿಗಳಾಗಿರತಕ್ಕದ್ದು.

(2) ಸಹಕುಲಾಧಿಪತಿಯವರು, ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತವಾಗಬಹುದಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಕುಲಪತಿ.**- (1) ಕುಲಪತಿಯು ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು.

(2) ಸರ್ಕಾರವು ಮೂವರು ವ್ಯಕ್ತಿಗಳನ್ನೊಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು; ಅವರುಗಳ ಪೈಕಿ ಒಬ್ಬರು ಕುಲಾಧಿಪತಿಯವರಿಂದ ನಾಮ ನಿರ್ದೇಶಿತರಾಗಿರತಕ್ಕದ್ದು. ಒಬ್ಬರು ವಿಶ್ವವಿದ್ಯಾಲಯ ಧನ ಸಹಾಯ ಆಯೋಗದಿಂದ ನಾಮನಿರ್ದೇಶಿತರಾಗಿರತಕ್ಕದ್ದು ಹಾಗೂ ಒಬ್ಬರು ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾಗಿರತಕ್ಕದ್ದು. ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದವರು ಸಮಿತಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸತಕ್ಕದ್ದು. ಉನ್ನತ ಶಿಕ್ಷಣ ಇಲಾಖೆಯ ಪ್ರಭಾರವನ್ನು ಹೊಂದಿರುವ ಸರ್ಕಾರದ ಕಾರ್ಯದರ್ಶಿ ಅಥವಾ ಸರ್ಕಾರದ ಉಪ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆ ದರ್ಜೆಯವರಲ್ಲದ ಅವರ ನಾಮನಿರ್ದೇಶಿತರು ಶೋಧನಾ ಸಮಿತಿಯ ಸಂಚಾಲಕರಾಗಿರತಕ್ಕದ್ದು.

(3) ರಾಜ್ಯ ಸರ್ಕಾರದ, ವಿಶ್ವವಿದ್ಯಾಲಯದ ಅಥವಾ ವಿಶ್ವವಿದ್ಯಾಲಯಕ್ಕೆ ಸಂಯೋಜಿತವಾದ ಯಾವುದೇ ಕಾಲೇಜಿನ ಅಥವಾ ಸಂಸ್ಥೆಯ ವ್ಯವಹಾರಗಳೊಂದಿಗೆ ಸಂಬಂಧವಿರುವ ಯಾವ ವ್ಯಕ್ತಿಯನ್ನೂ ಶೋಧನಾ ಸಮಿತಿಯ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡತಕ್ಕದ್ದಲ್ಲ.

(4) ಶೋಧನಾ ಸಮಿತಿಯು, ಸಂಗೀತ ಅಥವಾ ಪ್ರದರ್ಶಕ ಕಲೆಗಳ ಕ್ಷೇತ್ರದಲ್ಲಿ ಖ್ಯಾತ ಶಿಕ್ಷಣ ತಜ್ಞರಾದ ಮೂರು ವ್ಯಕ್ತಿಗಳ ಹೆಸರನ್ನುಳ್ಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಆ ಪಟ್ಟಿಯನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು, ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಡನೆ ಆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು:

ಪರಂತು, ಕುಲಾಧಿಪತಿಯವರು ಅವಶ್ಯವೆಂದು ಪರಿಗಣಿಸಿದರೆ, ರಾಜ್ಯ ಸರ್ಕಾರದ ಸಹಮತಿಯೊಡನೆ ಎರಡನೆಯ ಪಟ್ಟಿಯನ್ನು ತರಿಸಿಕೊಳ್ಳಬಹುದು ಮತ್ತು ಶೋಧನಾ ಸಮಿತಿಯು ಎರಡನೆಯ ಪಟ್ಟಿಯನ್ನು ಸಲ್ಲಿಸತಕ್ಕದ್ದು ಹಾಗೂ ಅದು ಅಂತಿಮವಾಗಿರತಕ್ಕದ್ದು.

(5) [1][ಅರವತ್ತೇಳು ವರ್ಷ][1] ವಯಸ್ಸು ಆಗಿರುವ ಯಾವ ವ್ಯಕ್ತಿಯೂ ಕುಲಪತಿಯಾಗಿ ನೇಮಕವಾಗತಕ್ಕದ್ದಲ್ಲ ಅಥವಾ ಅವರು ಆ ಹುದ್ದೆಯಲ್ಲಿ ಇರತಕ್ಕದ್ದಲ್ಲ.

(6) ಕುಲಪತಿಯವರು, ಕುಲಾಧಿಪತಿಯವರ ಇಷ್ಟಪರ್ಯಂತ ಮತ್ತು (5)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು ನಾಲ್ಕು ವರ್ಷಗಳ ಅವಧಿಯವರೆಗೆ ಅಧಿಕಾರ ಸ್ಥಾನವನ್ನು ಹೊಂದಿರತಕ್ಕದ್ದು. ಅವರು ಎರಡನೇ ಅವಧಿಗೆ ಪುನರ್‌ನೇಮಕಕ್ಕೆ ಅರ್ಹರಾಗಿರತಕ್ಕದ್ದಲ್ಲ.

(7) ಕುಲಪತಿಯನ್ನು, ಈ ಅಧಿನಿಯಮದ ಉಪಬಂಧಗಳನ್ನು ಉದ್ದೇಶಪೂರ್ವಕವಾಗಿ ಕೈಬಿಟ್ಟಿದ್ದಾರೆ ಅಥವಾ ನೆರವೇರಿಸಲು ನಿರಾಕರಿಸಿದ್ದಾರೆ ಅಥವಾ ತನ್ನಲ್ಲಿ ನಿಹಿತವಾದ ಅಧಿಕಾರಗಳನ್ನು ದುರುಪಯೋಗ ಪಡಿಸಿಕೊಂಡಿದ್ದಾರೆ ಎಂಬ ಕಾರಣದ ಮೇಲೆ ಮತ್ತು ರಾಜ್ಯ ಸರ್ಕಾರವು, (8)ನೇ ಉಪ ಪ್ರಕರಣದ ಮೇರೆಗೆ ತಾನು ಆದೇಶಿಸಿದ್ದ ವಿಚಾರಣೆಯ ವರದಿಯನ್ನು ಪರಿಗಣಿಸಿದ ನಂತರ ನೀಡಿದ ಸಲಹೆಯ ಮೇಲೆ ಕುಲಾಧಿಪತಿಯವರು ಹೊರಡಿಸಿದ ಆದೇಶದ ಮೂಲಕವಾಗಿ ಹೊರತು, ಅವರ ಅಧಿಕಾರ ಸ್ಥಾನದಿಂದ ತೆಗೆದುಹಾಕತಕ್ಕದ್ದಲ್ಲ.

(8) ಈ ಪ್ರಕರಣದ ಅಡಿಯಲ್ಲಿ ಒಂದು ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ, ರಾಜ್ಯಸರ್ಕಾರವು, ಉಚ್ಚ ನ್ಯಾಯಾಲಯದ ಅಥವಾ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿರುವ ಅಥವಾ ಆಗಿದ್ದ ವ್ಯಕ್ತಿಯನ್ನು ನೇಮಕ ಮಾಡತಕ್ಕದ್ದು. ವಿಚಾರಣಾ ಪ್ರಾಧಿಕಾರವು, ಕುಲಪತಿಯವರಿಗೆ ತಮ್ಮ ಮನವಿಯನ್ನು ಸಲ್ಲಿಸಲು ಅವಕಾಶ ನೀಡಿದ ನಂತರ ವಿಚಾರಣೆ ನಡೆಸತಕ್ಕದ್ದು ಮತ್ತು ವಿಧಿಸಬೇಕಾದ ಯಾವುದೇ ದಂಡನೆ ಇದ್ದರೆ, ಅದೂ ಒಳಗೊಂಡಂತೆ ಒಂದು ವರದಿಯನ್ನು ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು. ರಾಜ್ಯಸರ್ಕಾರವು, ವರದಿಯನ್ನು ಪರಿಶೀಲಿಸಿದ

ನಂತರ, ಕುಲಾಧಿಪತಿಯವರಿಗೆ ಸಲಹೆ ನೀಡತಕ್ಕದ್ದು. ಕುಲಾಧಿಪತಿಯವರು ಸಾಧ್ಯವಾದಷ್ಟುಮಟ್ಟಿಗೆ ಆರು ತಿಂಗಳೊಳಗಾಗಿ ಅಂಥ ಸಲಹೆಗೆ ಅನುಸಾರವಾಗಿ ಕ್ರಮ ಕೈಗೊಳ್ಳತಕ್ಕದ್ದು.

(9) ಕುಲಪತಿಯವರ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳು ಕುಲಾಧಿಪತಿಯವರು ನಿರ್ಧರಿಸಬಹುದಾದಂತೆ ಇರತಕ್ಕದ್ದು ಮತ್ತು ಅವುಗಳನ್ನು ಅವರು ಕುಲಪತಿಯಾಗಿ ನೇಮಕವಾದ ತರುವಾಯ ಅವರಿಗೆ ಅನಾನುಕೂಲವಾಗುವಂತೆ ಬದಲಾಯಿಸತಕ್ಕದ್ದಲ್ಲ. ಕುಲಪತಿಯಾಗಿ ತಮ್ಮ ಅಧಿಕಾರಾವಧಿಯಲ್ಲಿರುವಾಗ ಕುಲಪತಿಯವರು ವಯೋನಿವೃತ್ತಿಯ ಮೇಲೆ ನಿವೃತ್ತರಾಗುವ ಸಂದರ್ಭದಲ್ಲಿ, ಈಗಾಗಲೇ ನಿರ್ಧರಿಸಲಾದ ಅವರ ಸೇವಾ ಷರತ್ತುಗಳು ಮುಂದುವರಿಯತಕ್ಕದ್ದು. ಅವರ ಎಲ್ಲ ನಿವೃತ್ತಿ ಸೌಲಭ್ಯಗಳನ್ನು ತಡೆಹಿಡಿಯತಕ್ಕದ್ದು, ಅವುಗಳನ್ನು ಅವರು ಕುಲಪತಿಯಾಗಿ ಪದವನ್ನು ತ್ಯಜಿಸಿದ ನಂತರ ಬಿಡುಗಡೆ ಮಾಡತಕ್ಕದ್ದು.

(10) ನಿವೃತ್ತಿಹೊಂದಿದ ಒಬ್ಬ ವ್ಯಕ್ತಿಯು ಕುಲಪತಿಯಾಗಿ ನೇಮಕಗೊಂಡರೆ, ಅವರು ಕುಲಪತಿಯಾಗಿ ನೇಮಕಗೊಂಡ ಮೇಲೆ ಅವರ ಉಪಲಬ್ಧಿಗಳೂ ಸೇರಿದಂತೆ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಕುಲಾಧಿಪತಿಯವರು ನಿರ್ಣಯಿಸತಕ್ಕದ್ದು. ಅವರು ಪಡೆಯುವ ನಿವೃತ್ತಿ ವೇತನದ ಮೊತ್ತವನ್ನು ಮತ್ತು ಭತ್ಯಗಳನ್ನು ಉಪಲಬ್ಧಿಗಳಿಂದ ಕಳೆಯತಕ್ಕದ್ದು.

(11) ರಾಜ್ಯದಲ್ಲಿನ ಒಂದು ವಿಶ್ವವಿದ್ಯಾಲಯದ ಸೇವೆಯಲ್ಲಿರುವ ಒಬ್ಬ ಪ್ರಾಧ್ಯಾಪಕರು ಕುಲಪತಿಯಾಗಿ ನೇಮಕಗೊಂಡರೆ, ಅವರು ಕುಲಪತಿಯಾಗಿರುವ ಅಧಿಕಾರಾವಧಿಯಲ್ಲಿ ಪ್ರಾಧ್ಯಾಪಕರಾಗಿ ಅವರ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಅವರಿಗೆ ಅನಾನುಕೂಲವಾಗುವಂತೆ ಪರಿಷ್ಕರಿಸತಕ್ಕದಲ್ಲ ಮತ್ತು ಅವರು ತನ್ನ ಹುದ್ದೆಯ ಧಾರಣಾಧಿಕಾರವನ್ನು ಉಳಿಸಿಕೊಳ್ಳತಕ್ಕದ್ದು."

1. 2017ರ ಅಧಿನಿಯಮ ಸಂಖ್ಯೆ 39ರ ಮೂಲಕ ದಿನಾಂಕ: 31.07.2017 ರಿಂದ ಪ್ರತಿಯೋಜಿಸಲಾಗಿದೆ.

**13. ಕುಲಪತಿಯವರ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಕುಲಪತಿಯವರು ಶೈಕ್ಷಣಿಕ ಮುಖ್ಯಸ್ಥರು ಮತ್ತು ವಿಶ್ವವಿದ್ಯಾಲಯದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿರತಕ್ಕದ್ದು ಮತ್ತು ಕುಲಾಧಿಪತಿಯವರು ಮತ್ತು ಸಹಕುಲಾಧಿಪತಿಯವರ ಗೈರುಹಾಜರಿಯಲ್ಲಿ, ವಿಶ್ವವಿದ್ಯಾಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪದವಿಗಳು, ಡಿಪ್ಲೊಮಾ ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು, ಅವುಗಳನ್ನು ಸ್ವೀಕರಿಸಲು ಹಕ್ಕುಳ್ಳವರಾಗಿರುವ ವ್ಯಕ್ತಿಗಳಿಗೆ ಪ್ರದಾನ ಮಾಡತಕ್ಕದ್ದು. ಅವರು ಪ್ರಶಾಸನ ಸಭೆಯ, ಪ್ರಶಿಕ್ಷಣ ಪರಿಷತ್ತಿನ ಹಾಗೂ ಹಣಕಾಸು ಸಮಿತಿಯ ಪದನಿಮಿತ್ತ ಸದಸ್ಯರಾಗಿದ್ದು ಅವುಗಳ ಅಧ್ಯಕ್ಷರಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ಸಭೆಯಲ್ಲಿ ಹಾಜರಿದ್ದು ಅಲ್ಲಿ ಭಾಷಣ ಮಾಡಲು ಹಕ್ಕುಳ್ಳವರಾಗಿರತಕ್ಕದ್ದು. ಆದರೆ ಅವರು, ಸಂಬಂಧಪಟ್ಟ ಪ್ರಾಧಿಕಾರದ ಒಬ್ಬ ಸದಸ್ಯರಾಗಿದ್ದ ಹೊರತು ಅಲ್ಲಿ ಮತ ನೀಡಲು ಹಕ್ಕುಳ್ಳವರಾಗಿರತಕ್ಕದ್ದಲ್ಲ.

(2) ಈ ಅಧಿನಿಯಮದ ಮತ್ತು ಶಾಸನಗಳ ಉಪಬಂಧಗಳನ್ನು ಪಾಲಿಸಲಾಗಿದೆ ಮತ್ತು ಅವುಗಳನ್ನು ನೆರವೇರಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಕುಲಪತಿಯವರ ಕರ್ತವ್ಯವಾಗಿರತಕ್ಕದ್ದು ಮತ್ತು ಈ ಉದ್ದೇಶಕ್ಕಾಗಿ ಅವರು ಅವಶ್ಯಕವಾದ ಎಲ್ಲ ಅಧಿಕಾರಗಳನ್ನು ಚಲಾಯಿಸಬಹುದು.

(3) ಕುಲಪತಿಯವರು ಪ್ರಶಾಸನ ಸಭೆ, ಪ್ರಶಿಕ್ಷಣ ಪರಿಷತ್ತು ಮತ್ತು ಹಣಕಾಸು ಸಮಿತಿಯ ಸಭೆಗಳನ್ನು ಸಮಾವೇಶಗೊಳಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

(4) (ಎ) ಕುಲಪತಿಯವರು ಯಾವುದೇ ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಅಧಿಕಾರ ಹೊಂದಿರತಕ್ಕದ್ದು ಮತ್ತು ತಾವು ಅವಶ್ಯವೆಂದು ಭಾವಿಸುವಂಥ ಕ್ರಮವನ್ನು ಆದೇಶದ ಮೂಲಕ ಕೈಗೊಳ್ಳತಕ್ಕದ್ದು. ಆದರೆ, ತದನಂತರ ಸಾಧ್ಯವಾದಷ್ಟು ಬೇಗನೆ, ಕೈಗೊಳ್ಳಲಾದ ಕ್ರಮವನ್ನು, ವಿಷಯವನ್ನು ಸಾಮಾನ್ಯವಾಗಿ ವ್ಯವಹರಿಸುತ್ತಿದ್ದ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ನಿಕಾಯಕ್ಕೆ ವರದಿ ಮಾಡತಕ್ಕದ್ದು:

ಪರಂತು, ಬಾಧಿತನಾಗುವ ಸಂಭವವಿರುವ ವ್ಯಕ್ತಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡಿದ ಹೊರತು ಅಂಥ ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(ಬಿ) ಈ ಉಪ-ಪ್ರಕರಣದ ಅಡಿಯಲ್ಲಿ ಕುಲಪತಿಯವರು ಕೈಗೊಂಡ ಕ್ರಮವು ವಿಶ್ವವಿದ್ಯಾಲಯದ ಸೇವೆಯಲ್ಲಿರುವ ಯಾವೊಬ್ಬ ವ್ಯಕ್ತಿಯನ್ನು ಬಾಧಿಸಿದಾಗ, ಅಂಥ ವ್ಯಕ್ತಿಯು, ಅಂಥ ಕ್ರಮದ ಬಗ್ಗೆ ನೋಟೀಸನ್ನು ತಾನು ಪಡೆದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಪ್ರಶಾಸನ ಸಭೆಗೆ ಒಂದು ಅಪೀಲನ್ನು ಸಲ್ಲಿಸಲು ಹಕ್ಕುಳ್ಳವನಾಗಿರತಕ್ಕದ್ದು. ಕುಲಪತಿಯವರು ಅಂಥ ಅಪೀಲಿನ ಮೇಲೆ ಪ್ರಶಾಸನ ಸಭೆಯು ಹೊರಡಿಸಿದ ಆದೇಶವನ್ನು ಜಾರಿತರತಕ್ಕದ್ದು.

(5) ಕುಲಪತಿಯವರು, ವಿಶ್ವವಿದ್ಯಾಲಯದ ಬೋಧಕರು ಮತ್ತು ಇತರ ಉದ್ಯೋಗಿಗಳ ನೇಮಕಾತಿ, ಅಮಾನತ್ತುಗೊಳಿಸುವಿಕೆ ಮತ್ತು ವಜಾ ಇವುಗಳಿಗೆ ಸಂಬಂಧಿಸಿದಂತೆ ಪ್ರಶಾಸನ ಸಭೆಯ ಆದೇಶಗಳನ್ನು ಜಾರಿಗೊಳಿಸತಕ್ಕದ್ದು.

(6) ಕುಲಪತಿಯವರು, ವಿಶ್ವವಿದ್ಯಾಲಯದ ವ್ಯವಹಾರಗಳ ಮೇಲೆ ನಿಯಂತ್ರಣವನ್ನು ಹೊಂದಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದಲ್ಲಿ ಶಿಸ್ತನ್ನು ಯಥೋಚಿತವಾಗಿ ಪಾಲಿಸುವಂತೆ ನೋಡಿಕೊಳ್ಳಲು ಜವಾಬ್ದಾರರಾಗಿರತಕ್ಕದ್ದು.

(7) ಕುಲಪತಿಯವರು, ನಿಯಮಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**14. ಫ್ಯಾಕಲ್ಟಿಗಳ ಡೀನರು.–** (1) ಕುಲಪತಿಯವರು, ಪ್ರತಿಯೊಬ್ಬ ಡೀನ್‌ರನ್ನು, ಫ್ಯಾಕಲ್ಟಿಯಲ್ಲಿರುವ ಪ್ರಾಧ್ಯಾಪಕರ ಪೈಕಿಯಿಂದ, ಮೂರು ವರ್ಷಗಳ ಅವಧಿಗಾಗಿ ನೇಮಕ ಮಾಡತಕ್ಕದ್ದು ಮತ್ತು ಅವರು ಪುನರ್ ನೇಮಕಕ್ಕೆ ಅರ್ಹರಾಗಿರತಕ್ಕದ್ದು:

ಪರಂತು, ಫ್ಯಾಕಲ್ಟಿಯಲ್ಲಿ ಯಾವುದೇ ಕಾಲದಲ್ಲಿ ಪ್ರಾಧ್ಯಾಪಕರು ಇರದಿದ್ದರೆ, ಕುಲಪತಿಯವರು ಫ್ಯಾಕಲ್ಟಿಯ ಡೀನರ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(2) ಡೀನರ ಪದವು, ಖಾಲಿಯಾಗಿದ್ದಾಗ, ಅಥವಾ ಅನಾರೋಗ್ಯದ, ಗೈರುಹಾಜರಿಯ ಅಥವಾ ಇತರ ಯಾವುದೇ ಕಾರಣದಿಂದ ತಮ್ಮ ಪದದ ಕರ್ತವ್ಯಗಳನ್ನು ನಿರ್ವಹಿಸಲು ಅಸಮರ್ಥರಾದಾಗ, ಅವರ ಪದದ ಕರ್ತವ್ಯಗಳನ್ನು ಈ ಉದ್ದೇಶಕ್ಕಾಗಿ ಕುಲಪತಿಯವರು ನೇಮಕ ಮಾಡಬಹುದಾದಂಥ ವ್ಯಕ್ತಿಯು ನೆರವೇರಿಸತಕ್ಕದ್ದು.

(3) ಡೀನರು ಫ್ಯಾಕಲ್ಟಿಯ ಮುಖ್ಯಸ್ಥರಾಗಿರತಕ್ಕದ್ದು ಮತ್ತು ಫ್ಯಾಕಲ್ಟಿಯಲ್ಲಿ ಸಂಶೋಧನೆಯನ್ನು ನಡೆಸುವುದಕ್ಕೆ ಮತ್ತು ಗುಣಮಟ್ಟಗಳನ್ನು ಕಾಪಾಡಿಕೊಂಡುಬರುವುದಕ್ಕೆ ಹೊಣೆಗಾರರಾಗಿರತಕ್ಕದ್ದು. ಡೀನ್‌ರು ನಿಯಮಿಸಬಹುದಾದಂಥ ಪ್ರಕಾರ್ಯಗಳನ್ನು ಹೊಂದಿರತಕ್ಕದ್ದು.

(4) ಡೀನರು ಸಂದರ್ಭಾನುಸಾರ ಅಧ್ಯಯನ ಮಂಡಳಿಗಳ ಅಥವಾ ಫ್ಯಾಕಲ್ಟಿಯ ಸಮಿತಿಯ ಯಾವುದೇ ಸಭೆಯಲ್ಲಿ ಹಾಜರಿರಲು ಮತ್ತು ಮಾತನಾಡಲು ಅಧಿಕಾರ ಹೊಂದಿರತಕ್ಕದ್ದು, ಆದರೆ ಅವರು ಅದರ ಸದಸ್ಯರಾಗಿದ್ದ ಹೊರತು ಮತ ನೀಡಲು ಅಧಿಕಾರ ಹೊಂದಿರತಕ್ಕದ್ದಲ್ಲ.

**15. ಕುಲಸಚಿವ.–** (1) ಕುಲಸಚಿವರು ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಸರ್ಕಾರವು, ಕರ್ನಾಟಕ ಆಡಳಿತ ಸೇವೆಗಳಿಗೆ ಸೇರಿದ, ಹಿರಿಯ ವೇತನ ಶ್ರೇಣಿಯ ಅಥವಾ ಅದಕ್ಕಿಂತ ಹೆಚ್ಚಿನ ಶ್ರೇಣಿಯ ಒಬ್ಬ ಅಧಿಕಾರಿಯನ್ನು ವಿಶ್ವವಿದ್ಯಾಲಯದ ಕುಲಸಚಿವರಾಗಿ ನೇಮಕ ಮಾಡಬಹುದು.

(2) ಕುಲಸಚಿವರು, ಪ್ರಶಾಸನ ಸಭೆ ಮತ್ತು ಪ್ರಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯ ಕಾರ್ಯದರ್ಶಿ ಮತ್ತು ಹಣಕಾಸು ಸಮಿತಿಯ ಸದಸ್ಯ ಆಗಿರತಕ್ಕದ್ದು.

(3) ಕುಲಸಚಿವರಿಗೆ ಒಬ್ಬರು ಅಥವಾ ಹೆಚ್ಚು ಉಪ-ಕುಲಸಚಿವರು ಹಾಗೂ ಸಹಾಯಕ ಕುಲಸಚಿವರುಗಳು ಸಹಾಯಕರಾಗಿರಬಹುದು.

**16. ಕುಲಸಚಿವರ ಅಧಿಕಾರಗಳು ಮತ್ತು ಕರ್ತವ್ಯಗಳು.–** (1) (ಎ) ಕುಲಸಚಿವರು, ಪ್ರಶಾಸನ ಸಭೆಯ ಆದೇಶಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಬೋಧಕರು ಮತ್ತು ಶೈಕ್ಷಣಿಕ ಸಿಬ್ಬಂದಿಯ ಹೊರತಾಗಿ ಅಂಥ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮತ್ತು ವಿಚಾರಣೆ ಇತ್ಯರ್ಥದಲ್ಲಿರುವಾಗ ಅಮಾನತುಗೊಳಿಸಲು, ಅವರಿಗೆ ಎಚ್ಚರಿಕೆ ನೀಡಲು ಅಥವಾ ಅವರಿಗೆ ವಾಗ್ದಂಡನೆ ಅಥವ ವೇತನ ಬಡ್ತಿಗಳನ್ನು ತಡೆಹಿಡಿಯಲು ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಸಂಬಂಧದಲ್ಲಿ ಕೈಗೊಳ್ಳಲು ಉದ್ದೇಶಿಸಿದ ಕ್ರಮದ ವಿರುದ್ಧ ಕಾರಣ ತೋರಿಸುವ ಸೂಕ್ತ ಅವಕಾಶವನ್ನು ಸಂಬಂಧಪಟ್ಟ ವ್ಯಕ್ತಿಗೆ ನೀಡಿದ ಹೊರತು, ಅಂಥ ಯಾವುದೇ ದಂಡವನ್ನು ವಿಧಿಸತಕ್ಕದ್ದಲ್ಲ.

(ಬಿ) (ಎ) ಖಂಡದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ದಂಡವನ್ನು ವಿಧಿಸುವ ಕುಲಸಚಿವರ ಆದೇಶದ ವಿರುದ್ಧ ಕುಲಪತಿಯವರಿಗೆ ಅಪೀಲನ್ನು ಸಲ್ಲಿಸಬಹುದು.

(ಸಿ) ಕುಲಸಚಿವರ ಅಧಿಕಾರಗಳಿಗೆ ಮೀರಿ ದಂಡ ವಿಧಿಸುವ ಅಗತ್ಯವಿದೆ ಎಂದು ವಿಚಾರಣೆಯಿಂದ ತಿಳಿದು ಬಂದ ಸಂದರ್ಭದಲ್ಲಿ, ಕುಲಸಚಿವರು, ವಿಚಾರಣೆಯಲ್ಲಿಯ ತೀರ್ಮಾನದ ಮೇಲೆ ತನ್ನ ಶಿಫಾರಸ್ಸುಗಳೊಡನೆ ಕುಲಪತಿಯವರಿಗೆ ಒಂದು ವರದಿಯನ್ನು ಸಲ್ಲಿಸತಕ್ಕದ್ದು;

ಪರಂತು, ದಂಡ ವಿಧಿಸುವಂತೆ ಕುಲಪತಿಯವರು ಮಾಡಿದ ಆದೇಶದ ವಿರುದ್ಧ ಪ್ರಶಾಸನ ಸಭೆಗೆ ಅಪೀಲನ್ನು ಸಲ್ಲಿಸತಕ್ಕದ್ದು.

(ಡಿ) (ಬಿ) ಖಂಡದ ಅಥವಾ (ಸಿ) ಖಂಡದ ಅಡಿಯಲ್ಲಿ ಯಾವುದೇ ಅಪೀಲನ್ನು, ಅಪೀಲುದಾರನು ಯಾವ ಆದೇಶದ ವಿರುದ್ಧ ಅಪೀಲು ಸಲ್ಲಿಸಿರುವನೋ ಆ ಆದೇಶದ ದಿನಾಂಕದಿಂದ ಅರವತ್ತು ದಿನಗಳು ಮುಕ್ತಾಯವಾದ ತರುವಾಯ ಸಲ್ಲಿಸತಕ್ಕದಲ್ಲ.

(2) ಕುಲಸಚಿವರು, ಪ್ರಶಾಸನ ಸಭೆಯ, ಪ್ರಶಿಕ್ಷಣ ಪರಿಷತ್ತಿನ, ಫ್ಯಾಕಲ್ಟಿಗಳ ಮತ್ತು ಅಧ್ಯಯನ ಮಂಡಲಿಗಳ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಈ ಮುಂದಿನವುಗಳು ಕುಲಸಚಿವರ ಕರ್ತವ್ಯಗಳಾಗಿರತಕ್ಕದ್ದು:–

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಪರೀಕ್ಷಾಂಗ ನಿರ್ವಹಣೆಗೋಸ್ಕರ ಪರೀಕ್ಷಾಂಗ ಕುಲಸಚಿವರ ಹುದ್ದೆಯ ಸೃಜನೆ ಬಗ್ಗೆ.

ಓದಲಾಗಿದೆ:-

1) ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 63 ಯುಆರ್‌ಸಿ 2009 ದಿನಾಂಕ:9-12-2009.

2) ಕುಲಪತಿಗಳು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: ಕೆಎಸ್‌ಜಿಎಚ್/ಸಂ.ಪ್ರ.ಕ.ವಿ/735/2010-11 ದಿನಾಂಕ: 18-3-2011.

---

ಪ್ರಸ್ತಾವನೆ:-

1) ಮೇಲೆ ಓದಲಾದ ಉಲ್ಲೇಖ (1)ರ ಸರ್ಕಾರದ ಅಧಿಸೂಚನೆಯಲ್ಲಿ ದಿನಾಂಕ: 9-12-2009ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿರುತ್ತದೆ. ಮೇಲೆ ಓದಲಾದ (2)ರ ಪತ್ರದಲ್ಲಿ ಕುಲಪತಿಗಳು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಇವರು ವಿಶ್ವವಿದ್ಯಾಲಯದ ಪರೀಕ್ಷಾಂಗ ನಿರ್ವಹಣೆಗಾಗಿ ಪರೀಕ್ಷಾಂಗ ಕುಲಸಚಿವರ ಹುದ್ದೆಯು ಅವಶ್ಯವಿದ್ದು ಕೂಡಲೇ ಒಂದು ಕುಲಸಚಿವ (ಪರೀಕ್ಷಾಂಗ) ಹುದ್ದೆಯನ್ನು ಸೃಜಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಇಡಿ 61 ಯುಆರ್‌ಸಿ 2011, ಬೆಂಗಳೂರು ದಿನಾಂಕ: 30-5-2011

2) ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು ಇಲ್ಲಿ 2011-12ನೇ ಸಾಲಿನಲ್ಲಿ ಹೊಸದಾಗಿ ಒಂದು ಕುಲಸಚಿವ (ಮೌಲ್ಯಮಾಪನ) ಹುದ್ದೆಯನ್ನು ಸೃಜಿಸಲು ಆದೇಶಿಸಲಾಗಿದೆ.

3) ಸದರಿ ಹುದ್ದೆಗೆ ನಿಗದಿಪಡಿಸುವ ವೇತನ ಶ್ರೇಣಿ ಹಾಗೂ ವಿದ್ಯಾರ್ಹತೆ ಇತ್ಯಾದಿ ಇತರ ವಿಶ್ವವಿದ್ಯಾಲಯಗಳ ಕುಲಸಚಿವರು (ಮೌಲ್ಯಮಾಪನ) ಹುದ್ದೆಗೆ ನಿಗದಿಪಡಿಸಿರುವಂತೆ ಇರತಕ್ಕದ್ದು.

ಸ/-

Scanned with CamScanner

4) ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 377 ವೆಚ್ಚ/8 2010ರ ದಿನಾಂಕ: 28-4-2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

[illegible] 30/5

(ಯು.ಬಿ.ಉಳವಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ(ವಿಶ್ವ ವಿದ್ಯಾನಿಲಯಗಳು)

ಗೆ

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ – ಈ ದಿನದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಈ ಶಾಖೆಗೆ ಕಳುಹಿಸುವಂತೆ ಕೋರಲಾಗಿದೆ.

ಇವರಿಗೆ:-

1) ಘನತೆವೆತ್ತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ಕುಲಪತಿಗಳು/ಕುಲಸಚಿವರು/ಹಣಕಾಸು ಅಧಿಕಾರಿಗಳು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
4) ಮಹಾಲೇಖಪಾಲರು,(ಎ ಮತ್ತು ಇ), ಕರ್ನಾಟಕ, ಬೆಂಗಳೂರು-560 001.
5) ಆಯುಕ್ತರು/ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
6) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ.
8) ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾನಿಲಯಗಳು)
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7&8), ವಿಧಾನಸೌಧ.
10) ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

Scanned with CamScanner

# 2010ರ ಕರ್ನಾಟಕ ಅಧಿನಿಯಮ ಸಂಖ್ಯೆ:13
# ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮ, 2009
## ಪ್ರಕರಣಗಳ ಪಟ್ಟಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ:

ಪ್ರಕರಣಗಳು:

### ಅಧ್ಯಾಯ – I
### ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು

### ಅಧ್ಯಾಯ – II
### ವಿಶ್ವವಿದ್ಯಾಲಯ

3. ವಿಶ್ವವಿದ್ಯಾಲಯದ ಸ್ಥಾಪನೆ
4. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು
5. ವಿಶ್ವವಿದ್ಯಾಲಯದ ಅಧಿಕಾರಗಳು
6. ವಿಶ್ವವಿದ್ಯಾಲಯಕ್ಕೆ ಪ್ರವೇಶ
7. ಅಧಿಕಾರಕ್ಷೇತ್ರ ಮತ್ತು ವಿಶೇಷಾಧಿಕಾರಗಳಿಗೆ ಪ್ರವೇಶ
8. ಪರಿಶೀಲನೆ

### ಅಧ್ಯಾಯ – III
### ವಿಶ್ವವಿದ್ಯಾಲಯದ ಅಧಿಕಾರಿಗಳು

9. ವಿಶ್ವವಿದ್ಯಾಲಯದ ಅಧಿಕಾರಿಗಳು
10. ಕುಲಾಧಿಪತಿಯವರು
11. ಸಹಕುಲಾಧಿಪತಿಯವರು
12. ಕುಲಪತಿಯವರು
13. ಕುಲಪತಿಯವರ ಅಧಿಕಾರಗಳು ಮತ್ತು ಕರ್ತವ್ಯಗಳು
14. ಫ್ಯಾಕಲ್ಟಿಗಳ ಡೀನರು
15. ಕುಲಸಚಿವರು
16. ಕುಲಸಚಿವರ ಅಧಿಕಾರಗಳು ಮತ್ತು ಕರ್ತವ್ಯಗಳು
17. ಹಣಕಾಸು ಅಧಿಕಾರಿ
18. ಹಣಕಾಸು ಅಧಿಕಾರಿಯ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು

### ಅಧ್ಯಾಯ – IV
### ವಿಶ್ವವಿದ್ಯಾಲಯದ ಪ್ರಾಧಿಕಾರಗಳು

19. ವಿಶ್ವವಿದ್ಯಾಲಯದ ಪ್ರಾಧಿಕಾರಗಳು
20. ಪ್ರಶಾಸನ ಸಭೆ
21. ಪದಾವಧಿ
22. ಪ್ರಶಾಸನ ಸಭೆಯ ಅಧಿಕಾರಗಳು
23. ಪ್ರಶಾಸನ ಸಭೆಯ ಸಭೆಗಳು
24. ಪ್ರಶಿಕ್ಷಣ ಪರಿಷತ್ತು.
25. ಪ್ರಶಿಕ್ಷಣ ಪರಿಷತ್ತಿನ ಅಧಿಕಾರಗಳು
26. ಪ್ರಶಿಕ್ಷಣ ಪರಿಷತ್ತಿನ ಸಭೆಗಳು

(6) ಹಣಕಾಸು ಅಧಿಕಾರಿ ಮತ್ತು

(7) ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಶಾಸನಗಳಿಂದ ಘೋಷಿತರಾಗಬಹುದಾದಂಥ ಇತರ ವ್ಯಕ್ತಿಗಳು.

**10. ಕುಲಾಧಿಪತಿಯವರು.-** (1) ಕರ್ನಾಟಕದ ರಾಜ್ಯಪಾಲರು ಈ ವಿಶ್ವವಿದ್ಯಾಲಯದ ಕುಲಾಧಿಪತಿಯಾಗಿರತಕ್ಕದ್ದು, ಅವರು ತಮ್ಮ ಪದದ ಆಧಾರದಿಂದ ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿರತಕ್ಕದ್ದು ಮತ್ತು ಅವರು ಹಾಜರಿದ್ದಾಗ, ವಿಶ್ವವಿದ್ಯಾಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷರಾಗಿರತಕ್ಕದ್ದು ಮತ್ತು ಪದವಿಗಳು, ಡಿಪ್ಲೋಮ ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಅವುಗಳನ್ನು ಸ್ವೀಕರಿಸಲು ಹಕ್ಕುಳ್ಳ ವ್ಯಕ್ತಿಗಳಿಗೆ ಪ್ರದಾನ ಮಾಡತಕ್ಕದ್ದು.

(2) ಪ್ರಾಧಿಕಾರಗಳಿಗೆ ವ್ಯಕ್ತಿಗಳನ್ನು ನಾಮನಿರ್ದೇಶನ ಮಾಡಲು ಕುಲಾಧಿಪತಿಯವರಿಗೆ ಅಧಿಕಾರವನ್ನು ಪ್ರದತ್ತಗೊಳಿಸಿರುವಲ್ಲಿ ಕುಲಾಧಿಪತಿಯವರು ಸಾಕಷ್ಟು ಪ್ರಾತಿನಿಧ್ಯ ಪಡೆಯದ ಹಿತಾಸಕ್ತಿಗಳನ್ನು ಪ್ರತಿನಿಧಿಸಲು ಅವಶ್ಯಕವಿರುವಷ್ಟರಮಟ್ಟಿಗೆ ವ್ಯಕ್ತಿಗಳನ್ನು ನಾಮನಿರ್ದೇಶಿಸತಕ್ಕದ್ದು.

(3) ಕುಲಾಧಿಪತಿಯವರು ಸ್ವತಃ ತಾವೇ ಆಗಲಿ ಅಥವಾ ಅರ್ಜಿಯ ಮೇಲೆ ಆಗಲಿ ಯಾವುವೇ ವ್ಯವಹರಣೆಗಳ ಸಂಬಂಧದಲ್ಲಿ ಅಂಥ ವ್ಯವಹರಣೆಗಳ ಸಕ್ರಮತೆ ಅಥವಾ ಯಥಾರ್ಥತೆ, ಕೈಗೊಳ್ಳಲಾದ ಯಾವುದೇ ತೀರ್ಮಾನ ಅಥವಾ ಅದರಲ್ಲಿ ಜಾರಿ ಮಾಡಲಾದ ಆದೇಶದ ಕಾನೂನು ಸಮ್ಮತತೆ ಅಥವಾ ಔಚಿತ್ಯದ ಬಗ್ಗೆ ತಾವೇ ಮನದಟ್ಟು ಮಾಡಿಕೊಳ್ಳಲು ವಿಶ್ವವಿದ್ಯಾನಿಲಯದ ಯಾವೊಬ್ಬ ಅಧಿಕಾರಿ ಅಥವಾ ಯಾವುದೇ ಪ್ರಾಧಿಕಾರದ ದಾಖಲೆಗಳನ್ನು ತರಿಸಿಕೊಂಡು ಪರೀಕ್ಷಿಸಬಹುದು ಮತ್ತು ಯಾವುದೇ ಸಂದರ್ಭದಲ್ಲಿ, ಕುಲಾಧಿಪತಿಯವರಿಗೆ, ಅಂಥ ಯಾವುದೇ ತೀರ್ಮಾನ ಅಥವಾ ಆದೇಶವನ್ನು ಮಾರ್ಪಾಟುಗೊಳಿಸಬೇಕು, ರದ್ದುಗೊಳಿಸಬೇಕು, ವಿಪರ್ಯಯಗೊಳಿಸಬೇಕು ಅಥವಾ ಪುನರ್ ಪರಿಶೀಲನೆಗಾಗಿ ಹಿಂದಕ್ಕೆ ಕಳುಹಿಸಬೇಕೆಂದು ತೋರಿದರೆ, ಅವರು ತದನುಸಾರವಾಗಿ ಆದೇಶಗಳನ್ನು ಜಾರಿ ಮಾಡಬಹುದು:

ಪರಂತು, ಈ ಪ್ರಕರಣದ ಅಡಿಯಲ್ಲಿ ಅಧಿಕಾರಗಳನ್ನು ಚಲಾಯಿಸುವುದಕ್ಕಾಗಿ, ಪ್ರತಿಯೊಂದು ಅರ್ಜಿಯನ್ನು, ಅರ್ಜಿಯ ಸಂಬಂಧದಲ್ಲಿನ ವ್ಯವಹರಣೆ, ತೀರ್ಮಾನ ಅಥವಾ ಆದೇಶವನ್ನು ಅರ್ಜಿದಾರನಿಗೆ ತಿಳಿಸಿದ ದಿನಾಂಕದಿಂದ ಮೂರು ತಿಂಗಳೊಳಗೆ ಕುಲಾಧಿಪತಿಯವರಿಗೆ ಸಲ್ಲಿಸತಕ್ಕದ್ದು:

ಮತ್ತು ಪರಂತು, ಯಾವೊಬ್ಬ ವ್ಯಕ್ತಿಗೆ ಪ್ರತಿಕೂಲವಾದ ಯಾವುದೇ ಆದೇಶವನ್ನು ಅಂಥ ವ್ಯಕ್ತಿಗೆ ತನ್ನ ಮನವಿಯನ್ನು ಸಲ್ಲಿಸಲು ಅವಕಾಶವನ್ನು ನೀಡಿದ್ದ ಹೊರತು, ಜಾರಿ ಮಾಡತಕ್ಕದ್ದಲ್ಲ.

(4) ಕುಲಾಧಿಪತಿಯವರು, ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತಗೊಳಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**11. ಸಹಕುಲಾಧಿಪತಿಯವರು.-** (1) ಕರ್ನಾಟಕ ರಾಜ್ಯದಲ್ಲಿ, ಉನ್ನತ ಶಿಕ್ಷಣ ಖಾತೆಯ ಪ್ರಭಾರ ಹೊಂದಿರುವ ಸಚಿವರು, ವಿಶ್ವವಿದ್ಯಾಲಯದ ಸಹಕುಲಾಧಿಪತಿಗಳಾಗಿರತಕ್ಕದ್ದು.

(2) ಸಹಕುಲಾಧಿಪತಿಯವರು, ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತವಾಗಬಹುದಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಕುಲಪತಿಯವರು.-** (1) (2)ನೇ ಉಪ ಪ್ರಕರಣದ ಅಡಿಯಲ್ಲಿ ಸರ್ಕಾರದ ಶಿಫಾರಸ್ಸಿನ ಮೇಲೆ ಕುಲಾಧಿಪತಿ ಅವರು ಕುಲಪತಿಯವರ ನೇಮಕಾತಿಯನ್ನು, ಮಾಡತಕ್ಕದ್ದು.

(2) (1)ನೇ ಉಪ ಪ್ರಕರಣದ ಉದ್ದೇಶಕ್ಕಾಗಿ, ಸರ್ಕಾರವು ಮೂವರು ವ್ಯಕ್ತಿಗಳನ್ನೊಳಗೊಂಡ ಒಂದು ಶೋಧನಾ ಸಮಿತಿಯನ್ನು ಸ್ಥಾಪಿಸತಕ್ಕದ್ದು; ಅವರುಗಳ ಪೈಕಿ ಒಬ್ಬರು ಕುಲಾಧಿಪತಿಯವರಿಂದ ನಾಮ ನಿರ್ದೇಶಿತರಾಗಿರತಕ್ಕದ್ದು, ಒಬ್ಬರು

ವಿಶ್ವವಿದ್ಯಾಲಯ ಧನ ಸಹಾಯ ಆಯೋಗದಿಂದ ನಾಮನಿರ್ದೇಶಿತರಾಗಿರತಕ್ಕದ್ದು. ಹಾಗೂ ಒಬ್ಬರು ಸರ್ಕಾರದಿಂದ ನಾಮನಿರ್ದೇಶಿತರಾಗಿರತಕ್ಕದ್ದು. ಶೋಧನಾ ಸಮಿತಿಯು ಅಕಾರಾದಿ ಕ್ರಮದಲ್ಲಿ ಮೂವರು ವ್ಯಕ್ತಿಗಳ ಹೆಸರುಗಳನ್ನೊಳಗೊಂಡ ಪಟ್ಟಿಯೊಂದನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಅಂಥ ಪಟ್ಟಿಯು, ಸದರಿ ಸಮಿತಿಯ ಯಾವೊಬ್ಬ ಸದಸ್ಯನ ಹೆಸರನ್ನು ಒಳಗೊಂಡಿರತಕ್ಕದ್ದಲ್ಲ. ಸದರಿ ಪಟ್ಟಿಯಲ್ಲಿರುವ ಮೂವರು ವ್ಯಕ್ತಿಗಳ ಪೈಕಿ ಒಬ್ಬರ ಹೆಸರನ್ನು ಕುಲಪತಿಯಾಗಿ ನೇಮಕ ಮಾಡಲು ಸರ್ಕಾರವು ಕುಲಾಧಿಪತಿಯವರಿಗೆ ಶಿಫಾರಸ್ಸು ಮಾಡತಕ್ಕದ್ದು, ಅವಶ್ಯಕವಾದರೆ ಒಂದು ಹೊಸ ಪಟ್ಟಿಯನ್ನು ಶೋಧನಾ ಸಮಿತಿಯಿಂದ ಸರ್ಕಾರವು ಪಡೆಯಬಹುದು. ಆದರಂತೆ ಸರ್ಕಾರವು ಅಂಥ ಬೇಡಿಕೆಯನ್ನು ಸಲ್ಲಿಸಿದಾಗ ಶೋಧನಾ ಸಮಿತಿಯು ಹೊಸದಾಗಿ ಮೂವರು ವ್ಯಕ್ತಿಗಳ ಹೆಸರುಗಳನ್ನೊಳಗೊಂಡ ಒಂದು ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು:

ಪರಂತು,-

(ಎ) ಹಾಗೆ ನಾಮನಿರ್ದೇಶಿತನಾದ ವ್ಯಕ್ತಿಯು ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಸದಸ್ಯನಾಗಿರತಕ್ಕದ್ದಲ್ಲ;

(ಬಿ) ಕುಲಾಧಿಪತಿಯವರಿಂದ ಹಾಗೆ ನಾಮನಿರ್ದೇಶಿತನಾದ ವ್ಯಕ್ತಿಯು, ಸಮಿತಿಯ ಸಭೆಗಳನ್ನು ಸಮಾವೇಶಗೊಳಿಸತಕ್ಕದ್ದು;

[1][(3) ಕುಲಪತಿಯವರು ನಾಲ್ಕು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು ಮತ್ತು ಮರು ನೇಮಕಗೊಳ್ಳಲು ಅರ್ಹರಾಗಿರತಕ್ಕದ್ದಲ್ಲ:

ಪರಂತು,-

ಎ) ಅರವತ್ತೇಳು ವರ್ಷ ವಯಸ್ಸಾದ ಯಾವೊಬ್ಬ ವ್ಯಕ್ತಿಯು ಕುಲಪತಿಯಾಗಿ ನೇಮಕವಾಗತಕ್ಕದ್ದಲ್ಲ ಅಥವಾ ಪದಧಾರಣ ಮಾಡತಕ್ಕದ್ದಲ್ಲ.

(ಬಿ) ಕುಲಪತಿಯವರು, ಕುಲಾಧಿಪತಿಯವರಿಗೆ, ಸ್ವತ: ಸಹಿ ಮಾಡಿದ ಪತ್ರ ಬರೆದು ಮತ್ತು ಎರಡು ತಿಂಗಳ ನೋಟೀಸನ್ನು ನೀಡಿದ ತರುವಾಯ ತಮ್ಮ ಪದಕ್ಕೆ ರಾಜೀನಾಮೆ ನೀಡಬಹುದು.

ಮತ್ತು ಪರಂತು, ಕುಲಪತಿಯಾಗಿ ನೇಮಕಗೊಂಡ ವ್ಯಕ್ತಿಯು, ತನ್ನ ಸೇವಾವಧಿಯಲ್ಲಿ ಅರವತ್ತೇಳು ವರ್ಷಗಳು ಪೂರ್ಣಗೊಳಿಸಿದರೆ ಪದದಿಂದ ನಿವೃತ್ತರಾಗತಕ್ಕದ್ದು.][1]

(4) ಕುಲಪತಿಯವರ ಹುದ್ದೆಯು ತಾತ್ಕಾಲಿಕವಾಗಿ ಖಾಲಿಯಾದಲ್ಲಿ ಅಥವಾ ಅವರ ರಜೆಯ ಕಾರಣದಿಂದಾಗಿ ಅಥವಾ ಇನ್ನಾವುದೇ ಕಾರಣಗಳಿಗಾಗಿ ಗೈರುಹಾಜರಾದಲ್ಲಿ ಅವರು ತಮ್ಮ ಪದದ ಅಧಿಕಾರಗಳನ್ನು ಚಲಾಯಿಸಲು ಅಥವಾ ಕರ್ತವ್ಯಗಳನ್ನು ನೆರವೇರಿಸಲು ಸಾಧ್ಯವಿಲ್ಲದಿದ್ದರೆ ವಿಶ್ವವಿದ್ಯಾಲಯದ ಅತ್ಯಂತ ಹಿರಿಯ ಪ್ರಾಧ್ಯಾಪಕರು, ಕುಲಾಧಿಪತಿಯವರ ಅನುಮೋದನೆ ಪಡೆದು ಕುಲಪತಿಯವರ ಕರ್ತವ್ಯಗಳನ್ನು ನಿರ್ವಹಿಸಬಹುದು.

(5) ಕುಲಪತಿಯವರನ್ನು, ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವುದನ್ನು ಉದ್ದೇಶಪೂರ್ವಕವಾಗಿ ಬಿಟ್ಟುಬಿಟ್ಟಿದ್ದಾರೆ ಅಥವಾ ಕಾರ್ಯಗತಗೊಳಿಸಲು ನಿರಾಕರಿಸಿದ್ದಾರೆ ಅಥವಾ ಅವರಲ್ಲಿ ನಿಹಿತವಾದ ಅಧಿಕಾರಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂಬ ಕಾರಣದ ಮೇಲೆ ಮತ್ತು ರಾಜ್ಯ ಸರ್ಕಾರವು (6)ನೇ ಉಪ ಪ್ರಕರಣದ ಅಡಿಯಲ್ಲಿ ತಾನು ಆದೇಶಿಸಿದ್ದ ಒಂದು ವಿಚಾರಣೆಯ ವರದಿಯನ್ನು ಪರಿಗಣಿಸಿದ ನಂತರ ನೀಡಿದ ಸಲಹೆಯ ಮೇಲೆ ಕುಲಾಧಿಪತಿಯವರು ಹೊರಡಿಸಿದ ಆದೇಶದ ಮೂಲಕವಾಗಿ ಅಲ್ಲದೆ, ಅವರ ಹುದ್ದೆಯಿಂದ ತೆಗೆದುಹಾಕತಕ್ಕದ್ದಲ್ಲ.

(6) ಈ ಪ್ರಕರಣದ ಅಡಿಯಲ್ಲಿ ಒಂದು ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ, ರಾಜ್ಯ ಸರ್ಕಾರವು, ಉಚ್ಚ ನ್ಯಾಯಾಲಯದ ಅಥವಾ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿರುವ ಅಥವಾ ಆಗಿದ್ದ ವ್ಯಕ್ತಿಯನ್ನು ನೇಮಕ ಮಾಡತಕ್ಕದ್ದು. ವಿಚಾರಣಾ ಪ್ರಾಧಿಕಾರವು, ಕುಲಪತಿಯವರಿಗೆ ತಮ್ಮ ಮನವಿಯನ್ನು ಸಲ್ಲಿಸಲು ಅವಕಾಶ ನೀಡಿದ ನಂತರ

ವಿಚಾರಣೆ ನಡೆಸತಕ್ಕದ್ದು ಮತ್ತು ವಿಧಿಸಬೇಕಾದ ಯಾವುದೇ ದಂಡನೆ ಇದ್ದರೆ, ಅದೂ ಒಳಗೊಂಡಂತೆ ತೆಗೆದುಕೊಳ್ಳಬೇಕಾದ ಕ್ರಮದ ಬಗ್ಗೆ ಒಂದು ವರದಿಯನ್ನು ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು. ರಾಜ್ಯಸರ್ಕಾರವು, ವರದಿಯನ್ನು ಪರಿಶೀಲಿಸಿದ ನಂತರ, ಕುಲಾಧಿಪತಿಯವರಿಗೆ ಸಲಹೆ ನೀಡತಕ್ಕದ್ದು. ಕುಲಾಧಿಪತಿಯವರು ಸಾಧ್ಯವಾದಷ್ಟುಮಟ್ಟಿಗೆ ಆರು ತಿಂಗಳೊಳಗಾಗಿ ಅಂಥ ಸಲಹೆಗೆ ಅನುಸಾರವಾಗಿ ಕ್ರಮ ಕೈಗೊಳ್ಳತಕ್ಕದ್ದು.

(7) ಕುಲಪತಿಯವರ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳು ಕುಲಾಧಿಪತಿಯವರು ನಿರ್ಧರಿಸಬಹುದಾದಂತೆ ಇರತಕ್ಕದ್ದು ಮತ್ತು ಅವುಗಳನ್ನು ಅವರು ಕುಲಪತಿಯಾಗಿ ನೇಮಕವಾದ ತರುವಾಯ ಅವರಿಗೆ ಅನಾನುಕೂಲವಾಗುವಂತೆ ಬದಲಾಯಿಸತಕ್ಕದ್ದಲ್ಲ. ಕುಲಪತಿಯಾಗಿ ತಮ್ಮ ಅಧಿಕಾರಾವಧಿಯಲ್ಲಿರುವಾಗ ಕುಲಪತಿಯವರು ವಯೋನಿವೃತ್ತಿಯ ಮೇಲೆ ನಿವೃತ್ತರಾಗುವ ಸಂದರ್ಭದಲ್ಲಿ, ಈಗಾಗಲೇ ನಿರ್ಧರಿಸಲಾದ ಅವರ ಸೇವಾ ಷರತ್ತುಗಳು ಮುಂದುವರಿಯತಕ್ಕದ್ದು. ಅವರ ಎಲ್ಲ ನಿವೃತ್ತಿ ಸೌಲಭ್ಯಗಳನ್ನು ತಡೆಹಿಡಿಯತಕ್ಕದ್ದು, ಅವುಗಳನ್ನು ಅವರು ಕುಲಪತಿಯಾಗಿ ತಮ್ಮ ಅಧಿಕಾರ ಸ್ಥಾನವನ್ನು ತ್ಯಜಿಸಿದ ನಂತರ ಬಿಡುಗಡೆ ಮಾಡತಕ್ಕದ್ದು.

(8) ನಿವೃತ್ತರಾದ ಒಬ್ಬ ವ್ಯಕ್ತಿಯು, ಕುಲಪತಿಯಾಗಿ ನೇಮಕಗೊಂಡರೆ, ಅವರು ಕುಲಪತಿಯಾಗಿ ನೇಮಕಗೊಂಡ ಮೇಲೆ, ಅವರ ಉಪಲಬ್ಧಿಗಳೂ ಸೇರಿದಂತೆ ಅವರ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಕುಲಾಧಿಪತಿಯವರು ನಿರ್ಣಯಿಸತಕ್ಕದ್ದು. ಅವರು ಪಡೆಯುವ ನಿವೃತ್ತಿ ವೇತನದ ಮೊತ್ತವನ್ನು ಮತ್ತು ಭತ್ಯಗಳನ್ನು ಅವರ ಉಪಲಬ್ಧಿಗಳಿಂದ ಕಳೆಯತಕ್ಕದ್ದು.

(9) ರಾಜ್ಯದಲ್ಲಿನ ಒಂದು ವಿಶ್ವವಿದ್ಯಾಲಯದ ಸೇವೆಯಲ್ಲಿರುವ ಒಬ್ಬ ಪ್ರಾಧ್ಯಾಪಕರನ್ನು, ಕುಲಪತಿಯಾಗಿ ನೇಮಕ ಮಾಡಿದರೆ, ಅವರು ಕುಲಪತಿಯಾಗಿರುವಾಗಿನ ಪದಾವಧಿಯಲ್ಲಿ ಪ್ರಾಧ್ಯಾಪಕರಾಗಿ ಅವರ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಅವರಿಗೆ ಅನಾನುಕೂಲವಾಗುವಂತೆ ಪರಿಷ್ಕರಿಸತಕ್ಕದ್ದಲ್ಲ ಮತ್ತು ಅವರು ತಮ್ಮ ಹುದ್ದೆಯ ಧಾರಣಾಧಿಕಾರವನ್ನು ಉಳಿಸಿಕೊಳ್ಳತಕ್ಕದ್ದು.

1. 2017ರ ಅಧಿನಿಯಮ 24ರ ಮೂಲಕ 18.04.2017 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.

**13. ಕುಲಪತಿಯವರ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಕುಲಪತಿಯವರು ಶೈಕ್ಷಣಿಕ ಮುಖ್ಯಸ್ಥರು ಮತ್ತು ವಿಶ್ವವಿದ್ಯಾಲಯದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿರತಕ್ಕದ್ದು ಮತ್ತು ಕುಲಾಧಿಪತಿಯವರು ಮತ್ತು ಸಹಕುಲಾಧಿಪತಿಯವರ ಗೈರುಹಾಜರಿಯಲ್ಲಿ, ವಿಶ್ವವಿದ್ಯಾಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪದವಿಗಳು, ಡಿಪ್ಲೊಮಾ ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು, ಅವುಗಳನ್ನು ಸ್ವೀಕರಿಸಲು ಹಕ್ಕುಳ್ಳವರಾಗಿರುವ ವ್ಯಕ್ತಿಗಳಿಗೆ ಪ್ರದಾನ ಮಾಡತಕ್ಕದ್ದು. ಅವರು ಪ್ರಶಾಸನ ಸಭೆಯ, ಪ್ರಶಿಕ್ಷಣ ಪರಿಷತ್ತಿನ ಹಾಗೂ ಹಣಕಾಸು ಸಮಿತಿಯ ಪದನಿಮಿತ್ತ ಸದಸ್ಯರಾಗಿದ್ದು ಅವುಗಳ ಅಧ್ಯಕ್ಷರಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ಸಭೆಯಲ್ಲಿ ಹಾಜರಿದ್ದು ಅಲ್ಲಿ ಭಾಷಣ ಮಾಡಲು ಹಕ್ಕುಳ್ಳವರಾಗಿರತಕ್ಕದ್ದು. ಆದರೆ ಅವರು, ಸಂಬಂಧಪಟ್ಟ ಪ್ರಾಧಿಕಾರದ ಒಬ್ಬ ಸದಸ್ಯರಾಗಿದ್ದ ಹೊರತು ಅಲ್ಲಿ ಮತ ನೀಡಲು ಹಕ್ಕುಳ್ಳವರಾಗಿರತಕ್ಕದ್ದಲ್ಲ.

(2) ಈ ಅಧಿನಿಯಮದ ಮತ್ತು ಶಾಸನಗಳ ಉಪಬಂಧಗಳನ್ನು ಪಾಲಿಸಲಾಗಿದೆ ಮತ್ತು ಅವುಗಳನ್ನು ನೆರವೇರಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಕುಲಪತಿಯವರ ಕರ್ತವ್ಯವಾಗಿರತಕ್ಕದ್ದು ಮತ್ತು ಈ ಉದ್ದೇಶಕ್ಕಾಗಿ ಅವರು ಅವಶ್ಯಕವಾದ ಎಲ್ಲ ಅಧಿಕಾರಗಳನ್ನು ಚಲಾಯಿಸಬಹುದು.

(3) ಕುಲಪತಿಯವರು ಪ್ರಶಾಸನ ಸಭೆ, ಪ್ರಶಿಕ್ಷಣ ಪರಿಷತ್ತು ಮತ್ತು ಹಣಕಾಸು ಸಮಿತಿಯ ಸಭೆಗಳನ್ನು ಸಮಾವೇಶಗೊಳಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**15. ಕುಲಸಚಿವರು.-** (1) ಕುಲಸಚಿವರು ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಸರ್ಕಾರವು, ಕರ್ನಾಟಕ ಆಡಳಿತ ಸೇವೆಗಳಿಗೆ ಸೇರಿದ, ಹಿರಿಯ ವೇತನ ಶ್ರೇಣಿಯ ಅಥವಾ ಅದಕ್ಕಿಂತ ಹೆಚ್ಚಿನ ಶ್ರೇಣಿಯ ಒಬ್ಬ ಅಧಿಕಾರಿಯನ್ನು ವಿಶ್ವವಿದ್ಯಾಲಯದ ಕುಲಸಚಿವರಾಗಿ ನೇಮಕ ಮಾಡಬಹುದು.

(2) ಕುಲಸಚಿವರು, ಪ್ರಶಾಸನ ಸಭೆ ಮತ್ತು ಪ್ರಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯ ಕಾರ್ಯದರ್ಶಿ ಮತ್ತು ಹಣಕಾಸು ಸಮಿತಿಯ ಸದಸ್ಯ ಆಗಿರತಕ್ಕದ್ದು.

(3) ಕುಲಸಚಿವರಿಗೆ ಒಬ್ಬರು ಅಥವಾ ಹೆಚ್ಚು ಉಪ-ಕುಲಸಚಿವರು ಹಾಗೂ ಸಹಾಯಕ ಕುಲಸಚಿವರುಗಳು ಸಹಾಯಕರಾಗಿರಬಹುದು.

**16. ಕುಲಸಚಿವರ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಕುಲಸಚಿವರ ಸ್ಥಾನವು ಖಾಲಿಯಾದಾಗ ಅಥವಾ ಕುಲಸಚಿವರು, ಖಾಯಿಲೆ, ಗೈರು ಹಾಜರಿ ಅಥವಾ ಇನ್ನಾವುದೇ ಕಾರಣದಿಂದ ತನ್ನ ಸ್ಥಾನದ ಕರ್ತವ್ಯಗಳನ್ನು ನೆರವೇರಿಸುವುದು ಸಾಧ್ಯವಾಗದಿದ್ದಾಗ ಕುಲಸಚಿವರ ಕರ್ತವ್ಯಗಳನ್ನು ಈ ಉದ್ದೇಶಕ್ಕಾಗಿ ಕುಲಪತಿಯವರು ನೇಮಿಸಬಹುದಾದ ವ್ಯಕ್ತಿಯು ನೆರವೇರಿಸತಕ್ಕದ್ದು.

(2) (ಎ) ಕುಲಸಚಿವರು, ಪ್ರಶಾಸನ ಸಭೆಯ ಆದೇಶಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಬೋಧಕರು ಮತ್ತು ಶೈಕ್ಷಣಿಕ ಸಿಬ್ಬಂದಿಯ ಹೊರತಾಗಿ ಅಂಥ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮತ್ತು ವಿಚಾರಣೆ ಇತ್ಯರ್ಥದಲ್ಲಿರುವಾಗ ಅಮಾನತುಗೊಳಿಸಲು, ಅವರಿಗೆ ಎಚ್ಚರಿಕೆ ನೀಡಲು ಅಥವಾ ಅವರಿಗೆ ವಾಗ್ದಂಡನೆ ಅಥವಾ ವೇತನ ಬಡ್ತಿಗಳನ್ನು ತಡೆಹಿಡಿಯಲು ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಸಂಬಂಧದಲ್ಲಿ ಕೈಗೊಳ್ಳಲು ಉದ್ದೇಶಿಸಿದ ಕ್ರಮದ ವಿರುದ್ಧ ಕಾರಣ ತೋರಿಸುವ ಸೂಕ್ತ ಅವಕಾಶವನ್ನು ಸಂಬಂಧಪಟ್ಟ ವ್ಯಕ್ತಿಗೆ ನೀಡಿದ ಹೊರತು, ಅಂಥ ಯಾವುದೇ ದಂಡವನ್ನು ವಿಧಿಸತಕ್ಕದ್ದಲ್ಲ.

(ಬಿ) (ಎ) ಖಂಡದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ದಂಡವನ್ನು ವಿಧಿಸುವ ಕುಲಸಚಿವರ ಆದೇಶದ ವಿರುದ್ಧ ಕುಲಪತಿಯವರಿಗೆ ಅಪೀಲನ್ನು ಸಲ್ಲಿಸಬಹುದು.

(ಸಿ) ಕುಲಸಚಿವರ ಅಧಿಕಾರಗಳಿಗೆ ಮೀರಿ ದಂಡ ವಿಧಿಸುವ ಅಗತ್ಯವಿದೆ ಎಂದು ವಿಚಾರಣೆಯಿಂದ ತಿಳಿದು ಬಂದ ಸಂದರ್ಭದಲ್ಲಿ, ಕುಲಸಚಿವರು, ವಿಚಾರಣೆಯಲ್ಲಿಯ ತೀರ್ಮಾನದ ಮೇಲೆ ತನ್ನ ಶಿಫಾರಸ್ಸುಗಳೊಡನೆ ಕುಲಪತಿಯವರಿಗೆ ಒಂದು ವರದಿಯನ್ನು ಸಲ್ಲಿಸತಕ್ಕದ್ದು;

ಪರಂತು, ದಂಡ ವಿಧಿಸುವಂತೆ ಕುಲಪತಿಯವರು ಮಾಡಿದ ಆದೇಶದ ವಿರುದ್ಧ ಪ್ರಶಾಸನ ಸಭೆಗೆ ಅಪೀಲನ್ನು ಸಲ್ಲಿಸತಕ್ಕದ್ದು.

(ಡಿ) (ಬಿ) ಖಂಡದ ಅಥವಾ (ಸಿ) ಖಂಡದ ಅಡಿಯಲ್ಲಿ ಯಾವುದೇ ಅಪೀಲನ್ನು, ಅಪೀಲುದಾರನು ಯಾವ ಆದೇಶದ ವಿರುದ್ಧ ಅಪೀಲು ಸಲ್ಲಿಸಿರುವರೋ ಆ ಆದೇಶದ ದಿನಾಂಕದಿಂದ ಅರವತ್ತು ದಿನಗಳು ಮುಕ್ತಾಯವಾದ ತರುವಾಯ ಸಲ್ಲಿಸತಕ್ಕದಲ್ಲ.

(3) ಕುಲಸಚಿವರು, ಪ್ರಶಾಸನ ಸಭೆಯ, ಪ್ರಶಿಕ್ಷಣ ಪರಿಷತ್ತಿನ, ಫ್ಯಾಕಲ್ಟಿಗಳ ಮತ್ತು ಅಧ್ಯಯನ ಮಂಡಲಿಗಳ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(4) ಈ ಮುಂದಿನವುಗಳು ಕುಲಸಚಿವರ ಕರ್ತವ್ಯಗಳಾಗಿರತಕ್ಕದ್ದು:-

(ಎ) ಕುಲಪತಿಯವರು ಅಥವಾ ಪ್ರಶಾಸನ ಸಭೆಯು ತಮ್ಮ ಪ್ರಭಾರಕ್ಕೆ ಒಪ್ಪಿಸಿದ ವಿಶ್ವವಿದ್ಯಾಲಯದ ದಾಖಲೆಗಳ, ಸಾಮಾನ್ಯ ಮೊಹರಿನ ಮತ್ತು ಇತರ ಸ್ವತ್ತಿನ ಅಭಿರಕ್ಷಕರಾಗಿರತಕ್ಕದ್ದು;

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992.

### ಪ್ರಕರಣಗಳ ಕ್ರಮಪಟ್ಟಿ


ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:

ಅಧ್ಯಾಯ I

ಪ್ರಾರಂಭಿಕ

1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.
2. ಪರಿಭಾಷೆಗಳು.

ಅಧ್ಯಾಯ II

ವಿಶ್ವವಿದ್ಯಾನಿಲಯ

3. ವಿಶ್ವವಿದ್ಯಾನಿಲಯದ ಸ್ಥಾಪನೆ ಮತ್ತು ನಿಗಮನ.
4. ವಿಶ್ವವಿದ್ಯಾನಿಲಯದ ಉದ್ದೇಶಗಳು.
5. ವಿಶ್ವವಿದ್ಯಾನಿಲಯದ ಅಧಿಕಾರಗಳು.
6. ವಿಶ್ವವಿದ್ಯಾನಿಲಯವು ಎಲ್ಲ ವರ್ಗಗಳು, ಜಾತಿಗಳು ಮತ್ತು ಪಂಥಗಳಿಗೆ ಸೇರಿದವರಿಗೆ ಮುಕ್ತವಾಗಿರತಕ್ಕದ್ದು.

ಅಧ್ಯಾಯ III

ವಿಶ್ವವಿದ್ಯಾನಿಲಯದ ಅಧಿಕಾರಿಗಳು.

7. ವಿಶ್ವವಿದ್ಯಾನಿಲಯದ ಅಧಿಕಾರಿಗಳು.
8. ಕುಲಪತಿ.
9. ಪ್ರೊ. ಚಾನ್ಸಲರು.
10. ಉಪ ಕುಲಪತಿ.
11. ಕುಲಸಚಿವರು.
12. ಡೀನರು.
13. ಪರೀಕ್ಷಾ ಕುಲಸಚಿವರು.
14. ಹಣಕಾಸು ಅಧಿಕಾರಿ.
15. ನಿರ್ದೇಶಕರು.
16. ಇತರ ಅಧಿಕಾರಿಗಳು.

ಅಧ್ಯಾಯ IV

ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು.

17. ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳು.
18. ವ್ಯವಸ್ಥಾಪನಾ ಮಂಡಲಿ.
19. ವಿದ್ಯಾವಿಷಯಕ ಪರಿಷತ್ತು.
20. ಹಣಕಾಸು ಸಮಿತಿ.
21. ಇತರ ಪ್ರಾಧಿಕಾರಗಳು.

ಅಧ್ಯಾಯ V

ಪರಿನಿಯಮಗಳು, ಅಧ್ಯಾದೇಶಗಳು ಮತ್ತು ವಿನಿಯಮಗಳು.

22. ಪರಿನಿಯಮಗಳು.
23. ಪರಿನಿಯಮಗಳನ್ನು ರಚಿಸುವ ಬಗ್ಗೆ.
24. ಅಧ್ಯಾದೇಶಗಳು.
25. ವಿನಿಯಮಗಳು.

(6) ಕುಲಪತಿಯವರು ಅಂಥ ತನಿಖೆ ಅಥವಾ ವಿಚಾರಣೆಯ ಫಲಿತಾಂಶಗಳ ಸಂಬಂಧದಲ್ಲಿ ಅವರ ಮೇಲೆ ಕೈಗೊಳ್ಳಬೇಕಾದ ಕ್ರಮಕ್ಕೆ ಸಂಬಂಧಪಟ್ಟಂತೆ ನೀಡಬೇಕೆನಿಸುವ ಅಂಥ ಅಭಿಪ್ರಾಯ ಮತ್ತು ಸಲಹೆಗಳೊಂದಿಗೆ ಉಪ ಕುಲಪತಿಯವರಿಗೆ ಬರೆಯಬಹುದು ಮತ್ತು ಉಪ ಕುಲಪತಿಯವರು ಹಾಗೆ ಬರೆಯಲಾದುದನ್ನು ಸ್ವೀಕರಿಸಿದ ಮೇಲೆ, ಉಪ-ಕುಲಪತಿಯವರು, ತನಿಖೆ ಅಥವಾ ವಿಚಾರಣೆ ಫಲಿತಾಂಶಗಳನ್ನು ಮತ್ತು ಆ ಬಗ್ಗೆ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಕುಲಪತಿಯವರಿಂದ ನೀಡಲಾದ ಅಭಿಪ್ರಾಯ ಮತ್ತು ಸಲಹೆಯನ್ನು ಕೂಡಲೇ ವ್ಯವಸ್ಥಾಪನಾ ಮಂಡಲಿಗೆ ತಿಳಿಸತಕ್ಕದ್ದು.

(7) ವ್ಯವಸ್ಥಾಪನಾ ಮಂಡಲಿಯು, ಅಂಥ ತನಿಖೆ ಅಥವಾ ವಿಚಾರಣೆಯ ಫಲಿತಾಂಶಗಳ ಮೇಲೆ ತಾನು ಕೈಗೊಳ್ಳಲು ಉದ್ದೇಶಿಸಿರುವ ಅಥವಾ ಕೈಗೊಂಡಂಥ ಕ್ರಮ, ಯಾವುದಾದರೂ ಇದ್ದರೆ, ಅದನ್ನು ಉಪ-ಕುಲಪತಿಯವರ ಮುಖಾಂತರ ಕುಲಪತಿಯವರಿಗೆ ತಿಳಿಸತಕ್ಕದ್ದು.

(8) ವ್ಯವಸ್ಥಾಪನಾ ಮಂಡಲಿಯು, ಕುಲಪತಿಯವರಿಗೆ ಸಮಾಧಾನವಾಗುವ ಕ್ರಮವನ್ನು ಯುಕ್ತ ಕಾಲದೊಳಗೆ ಕೈಗೊಳ್ಳದಿದ್ದಲ್ಲಿ, ಕುಲಪತಿಯವರು ವ್ಯವಸ್ಥಾಪನಾ ಮಂಡಲಿಯು ಸಲ್ಲಿಸಿದ ಯಾವುದೇ ವಿವರಣೆ ಅಥವಾ ಅದರಿಂದ ಮಾಡಿಕೊಳ್ಳಲಾದ ಮನವಿಯನ್ನು ಪರಿಗಣಿಸಿದ ತರುವಾಯ, ತಾವು ಉಚಿತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸತಕ್ಕದ್ದು ಮತ್ತು ವ್ಯವಸ್ಥಾಪನಾ ಮಂಡಲಿಯು ಅಂಥ ನಿರ್ದೇಶನಗಳನ್ನು ಪಾಲಿಸಲು ಬದ್ಧವಾಗಿರತಕ್ಕದ್ದು .

(9) ಹಿಂದೆ ಹೇಳಲಾದ ಈ ಪ್ರಕರಣದ ಉಪಬಂಧಗಳಿಗೆ ಪ್ರತಿಕೂಲವಾಗದಂತೆ, ಕುಲಪತಿಯವರು, ಈ ಅಧಿನಿಯಮ, ಪರಿನಿಯಮಗಳು ಅಥವಾ ಅಧ್ಯಾದೇಶಗಳಿಗೆ ಅನುಗುಣವಾಗಿಲ್ಲದ ವಿಶ್ವವಿದ್ಯಾನಿಲಯದ ಯಾವುವೇ ಕಾನೂನು ವ್ಯವಹರಣೆಗಳನ್ನು ಲಿಖಿತ ಆದೇಶದ ಮೂಲಕ ರದ್ದುಗೊಳಿಸಬಹುದು:

ಪರಂತು, ಅಂಥ ಯಾವುದೇ ಆದೇಶವನ್ನು ಹೊರಡಿಸುವ ಮೊದಲು, ಅವರು ಅಂಥ ಆದೇಶವನ್ನು ಏಕೆ ಹೊರಡಿಸಬಾರದೆಂಬುದಕ್ಕೆ ಕಾರಣ ತೋರಿಸಲು ವಿಶ್ವವಿದ್ಯಾನಿಲಯವನ್ನು ಕೋರಬಹುದು ಮತ್ತು ಯುಕ್ತ ಕಾಲದೊಳಗೆ ಯಾವುದೇ ಕಾರಣವನ್ನು ತೋರಿಸಿದರೆ ಅವರು ಅದನ್ನು ಪರಿಗಣಿಸತಕ್ಕದ್ದು .

(10)ಕುಲಪತಿಯವರು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂಥ ಇತರ ಅಧಿಕಾರಗಳನ್ನು ಹೊಂದಿರತಕ್ಕದ್ದು .

**9. ಪ್ರೊ-ಚಾನ್ಸಲರು.-** (1) ಕರ್ನಾಟಕದಲ್ಲಿನ ಪ್ರೌಢ ಶಿಕ್ಷಣ ಖಾತೆಯ ಪ್ರಭಾರ ಹೊಂದಿರುವ ಸಚಿವರು, ತಮ್ಮ ಹುದ್ದೆಯ ಕಾರಣದಿಂದಾಗಿ ವಿಶ್ವವಿದ್ಯಾನಿಲಯದ ಪ್ರೊ-ಚಾನ್ಸಲರಾಗಿರತಕ್ಕದ್ದು .

(2) ಅವರು, ಪರಿನಿಯಮಗಳಿಂದ ನಿಯಮಿಸಬಹುದಾದಂಥ ಅಧಿಕಾರಗಳು ಮತ್ತು ಪ್ರಕಾರ್ಯಗಳನ್ನು ಹೊಂದಿರತಕ್ಕದ್ದು .

**10. ಉಪ ಕುಲಪತಿ.-** (1) ಉಪಕುಲಪತಿಯವರು, ಪರಿನಿಯಮಗಳಿಂದ ನಿಯಮಿಸಬಹುದಾದಂಥ ರೀತಿಯಲ್ಲಿ, ಅಂಥ ಅವಧಿಗೆ ಮತ್ತು ಅಂಥ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳ ಮೇಲೆ ಕುಲಪತಿಯವರಿಂದ ನೇಮಿತರಾಗತಕ್ಕದ್ದು.

(2) ಉಪ ಕುಲಪತಿಯವರು ವಿಶ್ವವಿದ್ಯಾನಿಲಯದ ಪ್ರಧಾನ ವಿದ್ಯಾ ವಿಷಯಕ ಹಾಗೂ ಕಾರ್ಯಕಾರಿ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದ ವ್ಯವಹಾರಗಳ ಮೇಲ್ವಿಚಾರಣೆ ನಡೆಸತಕ್ಕದ್ದು ಮತ್ತು ಅವುಗಳ ಮೇಲೆ ನಿಯಂತ್ರಣ ಹೊಂದಿರತಕ್ಕದ್ದು ಮತ್ತು ವಿಶ್ವವಿದ್ಯಾನಿಲಯದ ಎಲ್ಲ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು.

(3) ಉಪ ಕುಲಪತಿಯವರು, ಯಾವುದೇ ವಿಷಯದ ಮೇಲೆ ತಕ್ಷಣದ ಕ್ರಮವು ಅವಶ್ಯಕವೆಂದು ತಾವು ಅಭಿಪ್ರಾಯಪಟ್ಟರೆ, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರಕ್ಕೆ ಪ್ರದತ್ತವಾದ ಯಾವುದೇ ಅಧಿಕಾರವನ್ನು ಚಲಾಯಿಸಬಹುದು ಮತ್ತು ಅಂಥ ಪ್ರಾಧಿಕಾರಕ್ಕೆ ಅಂಥ ವಿಷಯದ ಮೇಲೆ ತಾವು ಕೈಗೊಂಡ ಕ್ರಮದ ಬಗ್ಗೆ ವರದಿ ಸಲ್ಲಿಸತಕ್ಕದ್ದು:

ಪರಂತು, ಸಂಬಂಧಪಟ್ಟ ಪ್ರಾಧಿಕಾರವು, ಅಂಥ ಕ್ರಮವನ್ನು ಕೈಗೊಳ್ಳಬಾರದಿತ್ತೆಂದು ಅಭಿಪ್ರಾಯಪಟ್ಟರೆ, ಅದು ವಿಷಯವನ್ನು ಕುಲಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅದರ ಮೇಲಣ ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಮತ್ತು ಪರಂತು, ಈ ಉಪ-ಪ್ರಕರಣದ ಅಡಿಯಲ್ಲಿ ಉಪ ಕುಲಪತಿಯವರು ಕೈಗೊಂಡ ಕ್ರಮದಿಂದ ಬಾಧಿತನಾದ, ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವ, ಯಾವೊಬ್ಬ ವ್ಯಕ್ತಿಯು ಅಂಥ ಕ್ರಮದ ಬಗ್ಗೆ ತನಗೆ ತಿಳಿಸಿದ ದಿನಾಂಕದಿಂದ ತೊಂಬತ್ತು ದಿನಗಳೊಳಗಾಗಿ, ಅಂಥ ಕ್ರಮದ ವಿರುದ್ಧ ವ್ಯವಸ್ಥಾಪನಾ ಮಂಡಳಿಗೆ ಅಪೀಲು ಹೂಡಲು

ಹಕ್ಕುಳ್ಳವನಾಗಿರತಕ್ಕದ್ದು ಮತ್ತು ತದನಂತರ, ವ್ಯವಸ್ಥಾಪನಾ ಮಂಡಳಿಯು, ಉಪ ಕುಲಪತಿಯವರು ಕೈಗೊಂಡ ಕ್ರಮವನ್ನು, ದೃಢೀಕರಿಸಬಹುದು, ಮಾರ್ಪಾಟು ಮಾಡಬಹುದು ಅಥವಾ ವಿಪರ್ಯಯಗೊಳಿಸಬಹುದು.

(4) ಉಪ ಕುಲಪತಿಯವರು, ಯಾವುದೇ ಪ್ರಾಧಿಕಾರದ ಯಾವುದೇ ತೀರ್ಮಾನವು ಈ ಅಧಿನಿಯಮದ ಉಪಬಂಧಗಳು, ಪರಿನಿಯಮಗಳು ಅಥವಾ ಅಧ್ಯಾದೇಶಗಳ ಮೂಲಕ ಅದಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಮೀರಿ ಆಗಿದೆಯೆಂದು ಅಥವಾ ಕೈಗೊಳ್ಳಲಾದ ತೀರ್ಮಾನವು ವಿಶ್ವವಿದ್ಯಾನಿಲಯದ ಹಿತಾಸಕ್ತಿಯಲ್ಲಿ ಆಗಿಲ್ಲವೆಂದು ಅಭಿಪ್ರಾಯಪಟ್ಟರೆ, ಸಂಬಂಧಪಟ್ಟ ಪ್ರಾಧಿಕಾರವನ್ನು ಅಂಥ ತೀರ್ಮಾನವನ್ನು ಕೈಗೊಂಡ ಅರವತ್ತು ದಿನಗಳೊಳಗೆ ತೀರ್ಮಾನವನ್ನು ಪುನರವಲೋಕನ ಮಾಡಬೇಕೆಂದು ಕೇಳಿಕೊಳ್ಳಬಹುದು ಮತ್ತು ಪ್ರಾಧಿಕಾರವು ತನ್ನ ತೀರ್ಮಾನವನ್ನು ಪೂರ್ತಿಯಾಗಿಯಾಗಲಿ ಅಥವಾ ಭಾಗಶಃ ಅಗಲಿ ಪುನರವಲೋಕನ ಮಾಡಲು ತಿರಸ್ಕರಿಸಿದರೆ ಅಥವಾ ಅದು ಅರವತ್ತು ದಿನಗಳ ಸದರಿ ಅವಧಿಯೊಳಗೆ ಯಾವುದೇ ತೀರ್ಮಾನವನ್ನು ಕೈಗೊಳ್ಳದಿದ್ದರೆ ವಿಷಯವನ್ನು ಕುಲಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

ಪರಂತು, ಸಂಬಂಧಪಟ್ಟ ಪ್ರಾಧಿಕಾರಿಯ ತೀರ್ಮಾನವು, ಈ ಪ್ರಕರಣದ ಅಡಿಯಲ್ಲಿ ಸಂದರ್ಭಾನುಸಾರ, ಪ್ರಾಧಿಕಾರಿ ಅಥವಾ ಕುಲಪತಿಯವರ ಅಂಥ ತೀರ್ಮಾನದ ಪುನರವಲೋಕನದ ಅವಧಿಯಲ್ಲಿ ನಿಲಂಬನಗೊಂಡಿರತಕ್ಕದ್ದು.

(5) ಉಪ-ಕುಲಪತಿಯವರು, ಪರಿನಿಯಮಗಳು ಮತ್ತು ಅಧ್ಯಾದೇಶಗಳಿಂದ ನಿಯಮಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು .

**11. ಕುಲಸಚಿವರು.-** ಕುಲಸಚಿವರನ್ನು, ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ರೀತಿಯಲ್ಲಿ, ಅಂಥ ಉಪಲಬ್ಧಿಗಳು ಮತ್ತು ಇತರೆ ಸೇವಾ ಷರತ್ತುಗಳ ಮೇಲೆ ನೇಮಿಸತಕ್ಕದ್ದು ಮತ್ತು ಅವರು ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕಾರ್ಯಗಳನ್ನು ನೆರವೇರಿಸತಕ್ಕದ್ದು.

**12. ಡೀನರು.-** ಪ್ರತಿಯೊಬ್ಬ ಡೀನರನ್ನು, ಪರಿನಿಮಯಗಳಿಂದ ನಿಯಮಿಸಬಹುದಾದ ಅಂಥ ರೀತಿಯಲ್ಲಿ ಅಂಥ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳ ಮೇಲೆ ನೇಮಿಸತಕ್ಕದ್ದು ಮತ್ತು ಅವರು ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**13. ಪರೀಕ್ಷಾ ಕುಲಸಚಿವರು.-** (1) ಪರೀಕ್ಷಾ ಕುಲಸಚಿವರನ್ನು, ಪರಿನಿಯಮಗಳಿಂದ ನಿಯಮಿಸಬಹುದಾದಂಥ ರೀತಿಯಲ್ಲಿ, ಅಂಥ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳ ಮೇಲೆ ನೇಮಿಸತಕ್ಕದ್ದು .

(2) ಪರೀಕ್ಷಾ ಕುಲಸಚಿವರು ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು .

**14. ಹಣಕಾಸು ಅಧಿಕಾರಿ.-** ಹಣಕಾಸು ಅಧಿಕಾರಿಯನ್ನು, ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ, ಅಂಥ ಉಪಲಬ್ಧಿಗಳ ಮೇಲೆ ಮತ್ತು ಇತರ ಸೇವಾ ಷರತ್ತುಗಳ ಮೇಲೆ ನೇಮಿಸತಕ್ಕದ್ದು ಮತ್ತು ಅವರು ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**15. ನಿರ್ದೇಶಕರು.-** ಪ್ರತಿಯೊಬ್ಬ ನಿರ್ದೇಶಕರನ್ನು, ಪರಿನಿಯಮಗಳಿಂದ ನಿರ್ದೇಶಿಸಬಹುದಾದ ಅಂಥ ವಿಧಾನದಲ್ಲಿ, ಅಂಥ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳ ಮೇಲೆ ನೇಮಿಸತಕ್ಕದ್ದು ಮತ್ತು ಅವರು ಪರಿನಿಯಮಗಳಿಂದ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು .

**16. ಇತರ ಅಧಿಕಾರಿಗಳು.-** ವಿಶ್ವವಿದ್ಯಾನಿಲಯದ ಇತರ ಅಧಿಕಾರಿಗಳ ನೇಮಕಾತಿಯ ರೀತಿ, ಉಪಲಬ್ಧಿಗಳು, ಇತರ ಸೇವಾ ಷರತ್ತುಗಳು ಮತ್ತು ಅವರ ಅಧಿಕಾರಗಳು ಮತ್ತು ಕರ್ತವ್ಯಗಳನ್ನು ಪರಿನಿಯಮಗಳಿಂದ ನಿಯಮಿಸತಕ್ಕದ್ದು .

**2012 ರ ಕರ್ನಾಟಕ ಅಧಿನಿಯಮ ಸಂಖ್ಯೆ: 11**

# ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಅಧಿನಿಯಮ, 2011

## ಪ್ರಕರಣಗಳ ಪಟ್ಟಿ


ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:

ಅಧ್ಯಾಯ – I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು

ಅಧ್ಯಾಯ – II

ವಿಶ್ವವಿದ್ಯಾಲಯ

3. ವಿಶ್ವವಿದ್ಯಾಲಯದ ಸ್ಥಾಪನೆ
4. ಜಾನಪದ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು
5. ವಿಶ್ವವಿದ್ಯಾಲಯದ ಅಧಿಕಾರಗಳು
6. ವಿಶ್ವವಿದ್ಯಾಲಯಕ್ಕೆ ಪ್ರವೇಶ
7. ನಿರ್ದೇಶನಗಳನ್ನು ನೀಡಲು ಅಧಿಕಾರ
8. ವಿಶ್ವವಿದ್ಯಾಲಯದ ಆದೇಶಗಳನ್ನು ರದ್ದುಗೊಳಿಸಲು ಅಧಿಕಾರ

ಅಧ್ಯಾಯ – III

ವಿಶ್ವವಿದ್ಯಾಲಯದ ಅಧಿಕಾರಿಗಳು

9. ವಿಶ್ವವಿದ್ಯಾಲಯದ ಅಧಿಕಾರಿಗಳು
10. ಕುಲಾಧಿಪತಿಯವರು
11. ಪರಿಶೀಲನೆ
12. ಸಹ–ಕುಲಾಧಿಪತಿ
13. ಕುಲಪತಿ
14. ಕುಲಪತಿಯವರ ಅಧಿಕಾರಗಳು
15. ಕುಲಪತಿಯವರ ಹುದ್ದೆಯು ಖಾಲಿ ಇರುವ ಕಾಲದಲ್ಲಿ ಕಾರ್ಯ ವ್ಯವಸ್ಥೆ
16. ಕುಲಸಚಿವರು
17. ಕುಲಸಚಿವರು (ಮೌಲ್ಯಮಾಪನ)
18. ಹಣಕಾಸು ಅಧಿಕಾರಿ
19. ಕುಲಸಚಿವರ, ಹಣಕಾಸು ಅಧಿಕಾರಿಯ ಹುದ್ದೆಯು ತಾತ್ಕಾಲಿಕವಾಗಿ ಖಾಲಿ ಇರುವುದು
20. ಡೀನ್
21. ಗ್ರಂಥಪಾಲರು
22. ಅಧ್ಯಯನಾಂಗ, ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಯ ನಿರ್ದೇಶಕರು

ಅಧ್ಯಾಯ – IV

ವಿಶ್ವವಿದ್ಯಾಲಯದ ಪ್ರಾಧಿಕಾರಗಳು

23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು
24. ಸಿಂಡಿಕೇಟ್

(4) (2)ನೇ ಉಪಪ್ರಕರಣದ ಅಡಿಯಲ್ಲಿ ನಿಗದಿಪಡಿಸಬಹುದಾದ ಕಾಲಮಿತಿಯೊಳಗೆ ಸಿಂಡಿಕೇಟ್, ಕುಲಾಧಿಪತಿಯವರಿಗೆ ಸಮಾಧಾನವಾಗುವಂತೆ ಕ್ರಮ ಕೈಗೊಳ್ಳದಿರುವಲ್ಲಿ, ಕುಲಾಧಿಪತಿಯವರು, ಸಿಂಡಿಕೇಟ್‌ನಿಂದ ಸಲ್ಲಿಸಲಾದ ವಿವರಣೆ ಅಥವಾ ಮಾಡಿಕೊಳ್ಳಲಾದ ಮನವಿಯನ್ನು ಪರಿಗಣಿಸಿದ ತರುವಾಯ, ತಾವು ಉಚಿತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಸಿಂಡಿಕೇಟ್ ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು. ಕುಲಾಧಿಪತಿಯವರ ಅಂಥ ನಿರ್ದೇಶನಗಳನ್ನು ಸಿಂಡಿಕೇಟ್ ಪಾಲಿಸದಿದ್ದ ಪಕ್ಷದಲ್ಲಿ, ಕುಲಾಧಿಪತಿಯವರು ಅಂಥ ನಿರ್ದೇಶನಗಳನ್ನು ಪಾಲಿಸುವುದಕ್ಕಾಗಿ ಯಾವೊಬ್ಬ ವ್ಯಕ್ತಿ ಅಥವಾ ನಿಕಾಯವನ್ನು ನೇಮಿಸಲು ಅಧಿಕಾರವನ್ನು ಹೊಂದಿರತಕ್ಕದ್ದು ಮತ್ತು ಆ ಬಗೆಗಿನ ವೆಚ್ಚಗಳಿಗಾಗಿ ಅವಶ್ಯಕವಾಗಬಹುದಾದ ಅಂಥ ಆದೇಶಗಳನ್ನು ಹೊರಡಿಸಬಹುದು.

(5) ಕುಲಾಧಿಪತಿಯವರು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ತಮಗೆ ಪ್ರದತ್ತಗೊಳಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಸಹ-ಕುಲಾಧಿಪತಿ.- (1)** ಕರ್ನಾಟಕ ರಾಜ್ಯದಲ್ಲಿ ಉನ್ನತ ಶಿಕ್ಷಣ ಖಾತೆಯ ಪ್ರಭಾರವನ್ನು ಹೊಂದಿರುವ ಸಚಿವರು, ವಿಶ್ವವಿದ್ಯಾಲಯದ ಸಹ ಕುಲಾಧಿಪತಿಯಾಗಿರತಕ್ಕದ್ದು.

(2) ಅವರು ಕುಲಾಧಿಪತಿಯವರ ಗೈರು ಹಾಜರಿಯಲ್ಲಿ ವಿಶ್ವವಿದ್ಯಾಲಯದ ಯಾವುದೇ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**13. ಕುಲಪತಿ.-** (1) ಕುಲಪತಿಯು ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು.

(2)ಸರ್ಕಾರವು, ಕುಲಾಧಿಪತಿಯಿಂದ, ಸರ್ಕಾರದಿಂದ, ವಿಶ್ವವಿದ್ಯಾಲಯ ಅನುದಾನ ಆಯೋಗದಿಂದ ಮತ್ತು ಸಿಂಡಿಕೇಟ್‌ನಿಂದ ನಾಮನಿರ್ದೇಶಿತರಾದ ಒಬ್ಬೊಬ್ಬ ವ್ಯಕ್ತಿಯಿಂದ ಕೂಡಿದ ನಾಲ್ಕು ಮಂದಿ ಸದಸ್ಯರನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು. ಸರ್ಕಾರವು, ನಾಲ್ಕು ಸದಸ್ಯರ ಪೈಕಿ ಒಬ್ಬರನ್ನು ಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡತಕ್ಕದ್ದು. ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ ಅಥವಾ ಸರ್ಕಾರದ ಉಪಕಾರ್ಯದರ್ಶಿಯ ದರ್ಜೆಗೆ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ಸಮಿತಿಯ ಸಂಚಾಲಕರಾಗಿರತಕ್ಕದ್ದು.

(3) ಸರ್ಕಾರದ, ವಿಶ್ವವಿದ್ಯಾಲಯದ ಅಥವಾ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡ ಯಾವುದೇ ಕಾಲೇಜಿನ ಅಥವಾ ಸಂಸ್ಥೆಯ ವ್ಯವಹಾರಗಳೊಂದಿಗೆ ಸಂಬಂಧವಿರುವ ಯಾವೊಬ್ಬ ವ್ಯಕ್ತಿಯನ್ನೂ ಶೋಧನಾ ಸಮಿತಿಯ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡತಕ್ಕದ್ದಲ್ಲ.

(4) ಶೋಧನಾ ಸಮಿತಿಯು, ಖ್ಯಾತ ಜಾನಪದ ತಜ್ಞರಾದ ಮೂವರು ವ್ಯಕ್ತಿಗಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಸರ್ಕಾರವು ಆ ಪಟ್ಟಿಯನ್ನು ತನ್ನ ಶಿಫಾರಸ್ಸಿನೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು. ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯನ್ನಾಗಿ ನೇಮಕ ಮಾಡತಕ್ಕದ್ದು:

ಪರಂತು, ಕುಲಾಧಿಪತಿಯವರು ಅವಶ್ಯವೆಂದು ಪರಿಗಣಿಸಿದರೆ ಸರ್ಕಾರದ ಸಹಮತಿಯೊಡನೆ ಎರಡನೆಯ ಪಟ್ಟಿಯನ್ನು ತರಿಸಿಕೊಳ್ಳಬಹುದು ಮತ್ತು ಶೋಧನಾ ಸಮಿತಿಯು ಎರಡನೆಯ ಪಟ್ಟಿಯನ್ನು ಸಲ್ಲಿಸತಕ್ಕದ್ದು ಹಾಗೂ ಅದು ಅಂತಿಮವಾಗಿರತಕ್ಕದ್ದು.

(5) ಯಾವೊಬ್ಬ ವ್ಯಕ್ತಿಯ ವಯಸ್ಸು ಅರುವತ್ತೇಳು ವರ್ಷವನ್ನು ಮೀರಿದರೆ ಅಂತಹವರನ್ನು ಕುಲಪತಿಯನ್ನಾಗಿ ನೇಮಕಮಾಡತಕ್ಕದ್ದಲ್ಲ ಅಥವಾ ಅವರು ಆ ಪದವನ್ನು ಧಾರಣ ಮಾಡತಕ್ಕದ್ದಲ್ಲ.

(6) ಕುಲಪತಿಯವರು, ಕುಲಾಧಿಪತಿಯವರ ಇಷ್ಟಪರ್ಯಂತ ಮತ್ತು (5)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು, ನಾಲ್ಕು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು. ಅವರು ಎರಡನೇ ಅವಧಿಗೆ ಪುನರ್‌ನೇಮಕಕ್ಕೆ ಅರ್ಹರಾಗಿರತಕ್ಕದ್ದಲ್ಲ.

(7) ಕುಲಪತಿಯವರನ್ನು, ಈ ಅಧಿನಿಯಮದ ಉಪಬಂಧಗಳನ್ನು ಉದ್ದೇಶಪೂರ್ವಕವಾಗಿ ಬಿಟ್ಟುಬಿಡುವ ಅಥವಾ ನೆರವೇರಿಸಲು ನಿರಾಕರಿಸುವ ಅಥವಾ ಅವರಲ್ಲಿ ನಿಹಿತವಾದ ಅಧಿಕಾರಗಳನ್ನು ದುರುಪಯೋಗಪಡಿಸಿಕೊಂಡ ಕಾರಣದ ಮೇಲೆ ಮತ್ತು ಸರ್ಕಾರವು (8)ನೇ ಉಪಪ್ರಕರಣದ ಅಡಿಯಲ್ಲಿ ಅದರಿಂದ ಆದೇಶಿಸಲಾದ ವಿಚಾರಣೆಯ

ವರದಿಯನ್ನು ಪರಿಗಣಿಸಿದ ನಂತರ ಮತ್ತು ಅದು ನೀಡಿದ ಶಿಫಾರಸ್ಸಿನನ್ವಯ ಕುಲಾಧಿಪತಿಯು ಹೊರಡಿಸಿದ ಆದೇಶದ ಹೊರತು, ಪದದಿಂದ ತೆಗೆದು ಹಾಕತಕ್ಕದ್ದಲ್ಲ.

(8) ಈ ಪ್ರಕರಣದ ಅಡಿಯಲ್ಲಿ ಒಂದು ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ ಸರ್ಕಾರವು, ಉಚ್ಚ ನ್ಯಾಯಾಲಯದ ಅಥವಾ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿರುವ ಅಥವಾ ಆಗಿದ್ದ ಒಬ್ಬ ವ್ಯಕ್ತಿಯನ್ನು ನೇಮಕ ಮಾಡತಕ್ಕದ್ದು. ವಿಚಾರಣಾ ಪ್ರಾಧಿಕಾರವು, ಕುಲಪತಿಯು ಮನವಿಯನ್ನು ಸಲ್ಲಿಸಲು ಅವಕಾಶ ನೀಡಿದ ನಂತರ ವಿಚಾರಣೆ ನಡೆಸತಕ್ಕದ್ದು ಮತ್ತು ವಿಧಿಸಬೇಕಾದ ಯಾವುದೇ ದಂಡನೆ ಇದ್ದರೆ ಅದು ಒಳಗೊಂಡಂತೆ ಒಂದು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ಸರ್ಕಾರವು, ವರದಿಯನ್ನು ಪರಿಶೀಲಿಸಿದ ನಂತರ ಕುಲಾಧಿಪತಿಗೆ ಸಲಹೆಯನ್ನು ನೀಡತಕ್ಕದ್ದು. ಕುಲಾಧಿಪತಿಯವರು ಸಾಧ್ಯವಾದಷ್ಟುಮಟ್ಟಿಗೆ ಆರು ತಿಂಗಳೊಳಗಾಗಿ ಅಂಥ ಸಲಹೆಗೆ ಅನುಸಾರವಾಗಿ ಕ್ರಮ ಕೈಗೊಳ್ಳತಕ್ಕದ್ದು.

(9) ಕುಲಪತಿಯವರ ಉಪಲಬ್ಧಿಗಳು ಮತ್ತು ಇತರ ಸೇವಾ ಷರತ್ತುಗಳು, ಕುಲಾಧಿಪತಿಯು ನಿರ್ಧರಿಸಬಹುದಾದಂತೆ ಇರತಕ್ಕದ್ದು ಮತ್ತು ಅವುಗಳನ್ನು ಅವರು ಕುಲಪತಿಯಾಗಿ ನೇಮಕವಾದ ತರುವಾಯ ಅವರಿಗೆ ಅನಾನುಕೂಲವಾಗುವಂತೆ ವ್ಯತ್ಯಾಸಗೊಳಿಸತಕ್ಕದ್ದಲ್ಲ. ಕುಲಪತಿಯಾಗಿ ತಮ್ಮ ಅಧಿಕಾರಾವಧಿಯಲ್ಲಿ ವಯೋನಿವೃತ್ತಿಯ ಮೇಲೆ ನಿವೃತ್ತರಾಗುವ ಕುಲಪತಿಯ ಸಂದರ್ಭದಲ್ಲಿ, ಈಗಾಗಲೇ ನಿರ್ಧರಿಸಲಾದ ಅವರ ಸೇವಾ ಷರತ್ತುಗಳು ಚಾಲ್ತಿಯಲ್ಲಿರುವುದು ಮುಂದುವರಿಯತಕ್ಕದ್ದು. ಅವರ ಎಲ್ಲ ನಿವೃತ್ತಿ ಸೌಲಭ್ಯಗಳನ್ನು ತಡೆ ಹಿಡಿಯತಕ್ಕದ್ದು, ಅವುಗಳನ್ನು ಅವರು ಕುಲಪತಿಯಾಗಿ ಪದವನ್ನು ತ್ಯಜಿಸಿದ ನಂತರ ಬಿಡುಗಡೆ ಮಾಡತಕ್ಕದ್ದು.

(10) ನಿವೃತ್ತಿಹೊಂದಿದ ಒಬ್ಬ ವ್ಯಕ್ತಿಯು ಕುಲಪತಿಯಾಗಿ ನೇಮಕಗೊಂಡರೆ, ಅವರು ಕುಲಪತಿಯಾಗಿ ನೇಮಕಗೊಂಡ ಮೇಲೆ ಉಪಲಬ್ಧಿಗಳು ಸೇರಿದಂತೆ ಸೇವಾ ನಿಬಂಧನೆ ಮತ್ತು ಷರತ್ತುಗಳನ್ನು ಕುಲಾಧಿಪತಿಯವರು ನಿರ್ಣಯಿಸತಕ್ಕದ್ದು. ಅವರು ಪಡೆಯುವ ನಿವೃತ್ತಿ ವೇತನದ ಮೊತ್ತವನ್ನು ಮತ್ತು ಭತ್ಯೆಗಳನ್ನು ಉಪಲಬ್ಧಿಗಳಿಂದ ಕಳೆಯತಕ್ಕದ್ದು.

**14. ಕುಲಪತಿಯವರ ಅಧಿಕಾರಗಳು.–** (1) ಕುಲಪತಿಯು, ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಮೇಲೆ ಸಾಮಾನ್ಯ ನಿಯಂತ್ರಣವನ್ನು ಚಲಾಯಿಸತಕ್ಕದ್ದು. ಅವರು ವಿಶ್ವವಿದ್ಯಾಲಯದಲ್ಲಿ ಶಿಸ್ತುಪಾಲನೆಗೆ ಅವಶ್ಯವಾದ ಎಲ್ಲ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(2) ಅವರು ಶೈಕ್ಷಣಿಕ ಪರಿಷತ್ತು, ಸಿಂಡಿಕೇಟ್ ಮತ್ತು ಹಣಕಾಸು ಸಮಿತಿಯ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು. ಅವರು ಕುಲಾಧಿಪತಿಯ ಮತ್ತು ಸಹ-ಕುಲಾಧಿಪತಿಯ ಗೈರುಹಾಜರಿಯಲ್ಲಿ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅವರು ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಅಥವಾ ನಿಕಾಯಗಳ ಸಭೆಗಳ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರು ಮತ ಚಲಾಯಿಸಲು ಹಕ್ಕುಳ್ಳವರಾಗಿರತಕ್ಕದ್ದು.

(3) ಅವರು ಈ ಅಧಿನಿಯಮದ, ಪರಿನಿಯಮಗಳ, ಆರ್ಡಿನೆನ್ಸ್‌ಗಳ ಮತ್ತು ವಿನಿಯಮಗಳ ಎಲ್ಲಾ ಉಪಬಂಧಗಳ ಪಾಲನೆಯನ್ನು ಖಚಿತಪಡಿಸಿಕೊಳ್ಳತಕ್ಕದ್ದು ಮತ್ತು ಆ ಉದ್ದೇಶಕ್ಕಾಗಿ ಅವಶ್ಯವಾದ ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು.

(4) ಅವರು ತಾವಾಗಿಯೇ ಆಗಲೀ ಅಥವಾ ತಮ್ಮಿಂದ ಲಿಖಿತದಲ್ಲಿ ಅಧಿಕೃತರಾದ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿಯ ಮೂಲಕವೇ ಆಗಲೀ, ಶೈಕ್ಷಣಿಕ ಪರಿಷತ್ತು, ಸಿಂಡಿಕೇಟ್ ಮತ್ತು ಹಣಕಾಸು ಸಮಿತಿಯ ಸಭೆಗಳನ್ನು ಕರೆಯಬಹುದು ಮತ್ತು ಈ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೆ ತರಲು ಮತ್ತು ಕಾರ್ಯಗತಗೊಳಿಸಲು ಅವಶ್ಯವಾಗಬಹುದಾದಂಥ ಎಲ್ಲ ಕಾರ್ಯಗಳನ್ನು ನೆರವೇರಿಸತಕ್ಕದ್ದು.

(5) ಕುಲಪತಿಯವರು, ತ್ವರಿತ ಕ್ರಮವು ಅಗತ್ಯವೆಂದು ಅವರು ಅಭಿಪ್ರಾಯಪಡುವ ಯಾವುದೇ ತುರ್ತು ಸಂದರ್ಭದಲ್ಲಿ ಅವರು ಅವಶ್ಯವೆಂದು ಭಾವಿಸುವಂಥ ಕ್ರಮವನ್ನು ತೆಗೆದುಕೊಳ್ಳತಕ್ಕದ್ದು ಮತ್ತು ಆ ತರುವಾಯ ಅತಿ ಶೀಘ್ರ ಸಮಯದಲ್ಲಿ, ಸಾಮಾನ್ಯವಾಗಿ ಆ ವಿಷಯವನ್ನು ವ್ಯವಹರಿಸುತ್ತಿದ್ದಂಥ ಪ್ರಾಧಿಕಾರಕ್ಕೆ ಅಥವಾ ನಿಕಾಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ವರದಿ ಮಾಡತಕ್ಕದ್ದು:

ಪರಂತು, ಕುಲಪತಿಯವರು ತೆಗೆದುಕೊಂಡ ಕ್ರಮವನ್ನು ಸಂಬಂಧಪಟ್ಟ ಪ್ರಾಧಿಕಾರ ಅಥವಾ ನಿಕಾಯವು ಅನುಮೋದಿಸದಿದ್ದರೆ, ಅವರು ಆ ವಿಷಯವನ್ನು ಸರ್ಕಾರದ ಮೂಲಕ ಕುಲಾಧಿಪತಿಯವರಿಗೆ ಒಪ್ಪಿಸಬಹುದು, ಆ ಬಗ್ಗೆ ಅವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು:

ಮತ್ತು ಪರಂತು, ಈ ಉಪಪ್ರಕರಣದ ಅಡಿಯಲ್ಲಿ ಕುಲಪತಿಯವರ ವರದಿಯ ಆಧಾರದ ಮೇಲೆ ಪ್ರಾಧಿಕಾರ ಅಥವಾ ನಿಕಾಯವು ತೆಗೆದುಕೊಂಡ ತೀರ್ಮಾನದಿಂದ ವಿಶ್ವವಿದ್ಯಾಲಯದ ಸೇವೆಯಲ್ಲಿರುವ ಯಾವೊಬ್ಬ ವ್ಯಕ್ತಿಯು ಬಾಧಿತನಾದರೆ, ಅವರಿಗೆ ತೀರ್ಮಾನವನ್ನು ತಿಳಿಸಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಆ ವ್ಯಕ್ತಿಯು ಕುಲಾಧಿಪತಿಯ ಮುಂದೆ ಅಪೀಲು ಹೂಡಬಹುದು ಮತ್ತು ಅಂಥ ಅಪೀಲಿನ ಮೇಲೆ ಕುಲಾಧಿಪತಿಯ ತೀರ್ಮಾನವೇ ಅಂತಿಮವಾಗಿರತಕ್ಕದ್ದು:

ಅಲ್ಲದೆ ಪರಂತು, ಈ ಉಪಪ್ರಕರಣದ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ವಿಶ್ವವಿದ್ಯಾಲಯದ ನೌಕರರ ವೇತನ ಶ್ರೇಣಿಯನ್ನು ಪರಿಷ್ಕರಿಸಲು ಅಥವಾ ಒಂದು ಸಂಸ್ಥೆಗೆ ಅಥವಾ ಶಿಕ್ಷಣ ವ್ಯಾಸಂಗ ಕ್ರಮಕ್ಕೆ ಸಂಯೋಜನೆಯನ್ನು ಮಂಜೂರು ಮಾಡಲು ಚಲಾಯಿಸತಕ್ಕದ್ದಲ್ಲ ಮತ್ತು ಈ ಉಪಪ್ರಕರಣದ ಅಡಿಯಲ್ಲಿ ಅಧಿಕಾರಗಳನ್ನು ಚಲಾಯಿಸಿ ಪರಿನಿಯಮಗಳು ಅಥವಾ ವಿನಿಯಮಗಳನ್ನು ರಚಿಸಿದರೆ ಅವು ಈ ಅಧಿನಿಯಮದ ಸೂಕ್ತ ಉಪಬಂಧಗಳ ಅಡಿಯಲ್ಲಿ ಕುಲಾಧಿಪತಿಯವರ ಅನುಮೋದನೆಗೆ ಒಳಪಟ್ಟಿರತಕ್ಕದ್ದು ಮತ್ತು ಆರ್ಡಿನೆನ್ಸ್‌ಗಳನ್ನು ರಚಿಸಿದ್ದರೆ, ಅವುಗಳನ್ನು ಈ ಅಧಿನಿಯಮಕ್ಕೆ ಅನುಸಾರವಾಗಿ ಕುಲಾಧಿಪತಿಯವರಿಗೆ ಸಲ್ಲಿಸತಕ್ಕದ್ದು.

(6) ಕುಲಪತಿಯವರು, ಪರಿನಿಯಮಗಳು, ಆರ್ಡಿನೆನ್ಸ್‌ಗಳು ಮತ್ತು ವಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

**15. ಕುಲಪತಿಯವರ ಹುದ್ದೆಯು ಖಾಲಿ ಇರುವ ಕಾಲದಲ್ಲಿ ಕಾರ್ಯ ವ್ಯವಸ್ಥೆ.–** (1) ರಜೆ, ಅನಾರೋಗ್ಯ ಅಥವಾ ಯಾವುದೇ ಇತರ ಕಾರಣದಿಂದಾಗಿ ಕುಲಪತಿಯವರ ತಾತ್ಕಾಲಿಕ ಗೈರುಹಾಜರಿಯ ಅವಧಿಯಲ್ಲಿ, ಕುಲಾಧಿಪತಿಯವರು, ಕುಲಪತಿಯವರ ಕರ್ತವ್ಯಗಳನ್ನು ನಿರ್ವಹಿಸುವುದಕ್ಕಾಗಿ ತಾವು ಸೂಕ್ತವೆಂದು ಭಾವಿಸುವಂಥ ವ್ಯವಸ್ಥೆಗಳನ್ನು ಮಾಡಬಹುದು:

ಪರಂತು, ಕುಲಾಧಿಪತಿಯವರು ವ್ಯವಸ್ಥೆಗಳನ್ನು ಮಾಡುವವರೆಗೆ, ಕುಲಪತಿಯವರು, ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಜ್ಯೇಷ್ಠತಮ ಡೀನರನ್ನು ಒಂದು ತಿಂಗಳಿಗಿಂತ ಹೆಚ್ಚಿಲ್ಲದ ಅವಧಿಗೆ ಅಥವಾ ಕುಲಾಧಿಪತಿಯವರು ಅಂಥ ವ್ಯವಸ್ಥೆಗಳನ್ನು ಮಾಡುವವರೆಗೆ, ಇವುಗಳಲ್ಲಿ ಯಾವುದು ಮುಂಚಿತವೋ ಆವರೆಗೆ, ಕುಲಪತಿಯವರ ಪ್ರಸಕ್ತ ಕರ್ತವ್ಯಗಳ ಪ್ರಭಾರದಲ್ಲಿರಿಸಲು ನಿಯೋಜಿಸಬಹುದು.

(2) ಕುಲಪತಿಯವರ ಹುದ್ದೆಯು ಭರ್ತಿಯಾಗದೆ ಖಾಲಿ ಉಳಿದಿರುವ ಅವಧಿಯಲ್ಲಿ, ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಜೇಷ್ಠತಮ ಡೀನರನ್ನು ಕುಲಪತಿಯಾಗಿ ಕಾರ್ಯನಿರ್ವಹಿಸುವುದಕ್ಕಾಗಿ ಕುಲಾಧಿಪತಿಯವರು ನೇಮಕ ಮಾಡಬಹುದು ಮತ್ತು ಹಾಗೆ ನೇಮಕಗೊಂಡ ವ್ಯಕ್ತಿಯು ಕುಲಪತಿಯವರ ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಎಲ್ಲ ವಿಶೇಷಾಧಿಕಾರಗಳಿಗೆ ಮತ್ತು ಇದರ ಸಂಬಂಧದಲ್ಲಿ ಪರಿನಿಯಮಗಳೇನಾದರೂ ಇದ್ದರೆ ಅವುಗಳಿಗೆ ಅನುಸಾರವಾಗಿ ಕುಲಾಧಿಪತಿಯು ನಿರ್ಣಯಿಸಬಹುದಾದಂತೆ ಅಂಥ ಉಪಲಬ್ಧಿಗಳಿಗೆ ಮತ್ತು ಭತ್ಯೆಗಳಿಗೆ ಹಕ್ಕುಳ್ಳವರಾಗಿರತಕ್ಕದ್ದು.

**16. ಕುಲಸಚಿವರು.–** (1) ಕುಲಸಚಿವರು, ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಸರ್ಕಾರದ ಉನ್ನತ ಕಾಲ ಶ್ರೇಣಿಯ ಗ್ರೂಪ್ 'ಎ' ಅಧಿಕಾರಿಯ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಒಬ್ಬ ಅಧಿಕಾರಿಯನ್ನು ಅಥವಾ ವಿಶ್ವವಿದ್ಯಾಲಯದ ಯಾವುದೇ ವ್ಯಾಸಂಗ ವಿಭಾಗದಲ್ಲಿ ಕನಿಷ್ಠ ಐದು ವರ್ಷ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ ಒಬ್ಬ ಜೇಷ್ಠತಮ ಪ್ರಾಧ್ಯಾಪಕರನ್ನು ವಿಶ್ವವಿದ್ಯಾಲಯದ ಕುಲಸಚಿವರಾಗಿ ಸರ್ಕಾರವು ನೇಮಕ ಮಾಡಬಹುದು.

(2) ಕುಲಸಚಿವರು, ಶೈಕ್ಷಣಿಕ ಪರಿಷತ್ತಿನ ಮತ್ತು ಸಿಂಡಿಕೇಟಿನ ಪದನಿಮಿತ್ತ ಸದಸ್ಯ- ಕಾರ್ಯದರ್ಶಿಯೂ ಮತ್ತು ಹಣಕಾಸು ಸಮಿತಿಯ ಸದಸ್ಯನೂ ಆಗಿರತಕ್ಕದ್ದು.

(3) ಈ ಮುಂದಿನವು ಕುಲಸಚಿವರ ಕರ್ತವ್ಯವಾಗಿರತಕ್ಕದ್ದು,–

(ಎ) ವಿಶ್ವವಿದ್ಯಾಲಯದ ದಾಖಲೆಗಳ, ಸಾಮಾನ್ಯ ಮೊಹರಿನ ಮತ್ತು ಕುಲಪತಿ ಅಥವಾ ಸಿಂಡಿಕೇಟ್ ಅವರ ವಶಕ್ಕೆ ಒಪ್ಪಿಸುವಂಥ ಇತರ ಸ್ವತ್ತಿನ ಅಭಿರಕ್ಷಕರಾಗಿರುವುದು;

(ಬಿ) ಸಿಂಡಿಕೇಟಿನ, ಶೈಕ್ಷಣಿಕ ಪರಿಷತ್ತಿನ ಅಥವಾ ವ್ಯಾಸಂಗ ವಿಭಾಗಗಳ, ಅಧ್ಯಯನ ಮಂಡಳಿಯ ಮತ್ತು ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಸಭೆಗಳನ್ನು ಕರೆಯುವ ನೋಟೀಸುಗಳನ್ನು ಹೊರಡಿಸುವುದು ಮತ್ತು ಅಂಥ ಎಲ್ಲ ಸಭೆಗಳ ನಡವಳಿಗಳನ್ನು ಇಡುವುದು;

(ಸಿ) ಅವರು ಸದಸ್ಯ – ಕಾರ್ಯದರ್ಶಿಯಾಗಿರುವ ಪ್ರಾಧಿಕಾರಗಳ ಅಧಿಕೃತ ಪತ್ರವ್ಯವಹಾರವನ್ನು ನಡೆಸುವುದು;

(ಡಿ) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಸಭೆಗಳ ಕಾರ್ಯಸೂಚಿಯ ಪ್ರತಿಗಳನ್ನು, ಅವುಗಳನ್ನು ಹೊರಡಿಸಿದ ಕೂಡಲೇ ಮತ್ತು ಸಭೆಗಳನ್ನು ನಡೆಸಿದ ಒಂದು ತಿಂಗಳೊಳಗಾಗಿ ಅವುಗಳ ನಡವಳಿಗಳನ್ನು ಕುಲಾಧಿಪತಿಗೆ ಮತ್ತು ಸರ್ಕಾರಕ್ಕೆ ಒದಗಿಸುವುದು.

(4) ಕುಲಸಚಿವರು ಪರಿನಿಯಮಗಳು, ಆರ್ಡಿನೆನ್ಸ್‌ಗಳು ಅಥವಾ ವಿನಿಯಮಗಳ ಮೂಲಕ ನಿಯಮಿಸಬಹುದಾದ ಮತ್ತು ಕುಲಪತಿಯು ಕಾಲಕಾಲಕ್ಕೆ ಹಂಚಿಕೆ ಮಾಡಬಹುದಾದ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(5) ಕುಲಸಚಿವರಿಗೆ ಒಬ್ಬರು ಅಥವಾ ಅದಕ್ಕೂ ಹೆಚ್ಚಿನ ಉಪಕುಲಸಚಿವರು ಮತ್ತು ಸಹಾಯಕ ಕುಲಸಚಿವರು ನೆರವು ನೀಡಬಹುದು.

(6) ವಿಶ್ವವಿದ್ಯಾಲಯದಿಂದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ, ವಾದಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂತಹ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

**17. ಕುಲಸಚಿವರು (ಮೌಲ್ಯಮಾಪನ).–** (1) ಕುಲಸಚಿವರು (ಮೌಲ್ಯಮಾಪನ) ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಸರ್ಕಾರವು, ಯಾವುದೇ ವಿಶ್ವವಿದ್ಯಾಲಯದ ವ್ಯಾಸಂಗ ವಿಭಾಗದ ಒಬ್ಬ ಹಿರಿಯ ಸದಸ್ಯನನ್ನು ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಆಗಿ ನೇಮಕ ಮಾಡಬಹುದು:

ಪರಂತು, ಕುಲಸಚಿವರು (ಮೌಲ್ಯಮಾಪನ) ಆಗಿ ನೇಮಿಸಲು ಅಂಥ ವ್ಯಕ್ತಿಯು ಲಭ್ಯವಿರದಿದ್ದಲ್ಲಿ, ಕುಲಪತಿಯವರು ಶಿಫಾರಸು ಮಾಡಿದ ಮೂವರಿಗಿಂತ ಕಡಿಮೆಯಾಗಿರದ ವ್ಯಕ್ತಿಗಳ ಪಟ್ಟಿಯಿಂದ, ಸಿಂಡಿಕೇಟಿನ ಅನುಮೋದನೆಯೊಡನೆ, ಕುಲಸಚಿವರು (ಮೌಲ್ಯಮಾಪನ) ಇವರನ್ನು ಕುಲಪತಿಯವರು ನೇಮಕಮಾಡತಕ್ಕದ್ದು. ಪರಿನಿಯಮಗಳ ಮೂಲಕ ನಿಯಮಿಸಲಾದ ಸಮಯದೊಳಗೆ, ಪಟ್ಟಿಯಲ್ಲಿರುವ ಯಾವೊಬ್ಬ ವ್ಯಕ್ತಿಯನ್ನು ಸಿಂಡಿಕೇಟ್ ಅನುಮೋದಿಸದಿದ್ದರೆ, ಸರ್ಕಾರವು, ಕುಲಪತಿಯವರೊಡನೆ ಸಮಾಲೋಚಿಸಿ, ಕುಲಸಚಿವರು (ಮೌಲ್ಯಮಾಪನ) ಆಗಲು ಸೂಕ್ತವೆಂದು ತಾನು ಭಾವಿಸುವ ಅಂಥ ಇತರ ವ್ಯಕ್ತಿಯನ್ನು ನೇಮಕ ಮಾಡಬಹುದು. ಹಾಗೆ ನೇಮಕಗೊಂಡ ಕುಲಸಚಿವರು (ಮೌಲ್ಯಮಾಪನ) ಇವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಉಪಲಬ್ಧಿಗಳು ಸರ್ಕಾರವು ನಿರ್ಧರಿಸಬಹುದಾದಂತೆ ಇರತಕ್ಕದ್ದು.

(2) ಕುಲಸಚಿವರು (ಮೌಲ್ಯಮಾಪನ) ಇವರು ಸಿಂಡಿಕೇಟ್, ಶೈಕ್ಷಣಿಕ ಪರಿಷತ್ತು, ಹಣಕಾಸು ಸಮಿತಿ ಮತ್ತು ಎಲ್ಲ ಇತರ ವ್ಯಾಸಂಗ ವಿಭಾಗಗಳ ಸದಸ್ಯರಾಗಿರತಕ್ಕದ್ದು.

(3) ಕುಲಸಚಿವರು (ಮೌಲ್ಯಮಾಪನ) ಇವರು ಪರೀಕ್ಷೆಗಳನ್ನು ನಡೆಸುವ ಮತ್ತು ಅದಕ್ಕೆ ಪ್ರಾಸಂಗಿಕವಾದ ಮತ್ತು ಅದಕ್ಕೆ ಸಹಾಯಕವಾದ ಎಲ್ಲ ಇತರ ವಿಷಯಗಳ ಪ್ರಭಾರದಲ್ಲಿರತಕ್ಕದ್ದು ಮತ್ತು ಪರಿನಿಯಮಗಳು ಅಥವಾ ಆರ್ಡಿನೆನ್ಸ್‌ಗಳ ಮೂಲಕ ನಿಯಮಿಸಬಹುದಾದಂಥ ಅಥವಾ ಕುಲಪತಿಯಿಂದ ಹಂಚಿಕೆಯಾಗಬಹುದಾದಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(4) ಕುಲಸಚಿವರು (ಮೌಲ್ಯಮಾಪನ) ಇವರಿಗೆ ಒಬ್ಬ ಅಥವಾ ಹೆಚ್ಚು ಉಪ ಕುಲಸಚಿವರು (ಮೌಲ್ಯಮಾಪನ) ಮತ್ತು ಸಹಾಯಕ ಕುಲಸಚಿವರು(ಮೌಲ್ಯಮಾಪನ) ಇವರುಗಳು ನೆರವು ನೀಡಬಹುದು.

**18. ಹಣಕಾಸು ಅಧಿಕಾರಿ.–** (1) ಹಣಕಾಸು ಅಧಿಕಾರಿಯು, ಕುಲಪತಿಯವರು ಸಿಂಡಿಕೇಟಿಗೆ ಶಿಫಾರಸ್ಸು ಮಾಡಿದ, ಲೆಕ್ಕ ಪರಿಶೋಧನೆ, ಲೆಕ್ಕ ಪತ್ರ ಮತ್ತು ಹಣಕಾಸು ಆಡಳಿತದಲ್ಲಿ ಅನುಭವವಿರುವ ರಾಜ್ಯ ಲೆಕ್ಕ ಪತ್ರಗಳ ಇಲಾಖೆಯ ಜಂಟಿ ನಿಯಂತ್ರಕ ಕೇಡರ್‌ನಲ್ಲಿಯ ಅಧಿಕಾರಿಯು ಅಥವಾ ಉಪಮಹಾಲೇಖಪಾಲ ದರ್ಜೆಯ ಒಬ್ಬ ಅಧಿಕಾರಿಯು ಇರುವ ಮೂರು ವ್ಯಕ್ತಿಗಳಿಗಿಂತ ಕಡಿಮೆಯಾಗಿರದ ಹೆಸರುಗಳ ಪಟ್ಟಿಯಿಂದ ಸಿಂಡಿಕೇಟಿನ ಅನುಮೋದನೆಯೊಂದಿಗೆ ಸರ್ಕಾರದಿಂದ ನೇಮಕ ಮಾಡಲಾಗುವ, ವಿಶ್ವವಿದ್ಯಾಲಯದ ಒಬ್ಬ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಪರಿನಿಯಮಗಳ ಮೂಲಕ ನಿಯಮಿಸಲಾದ ಸಮಯದೊಳಗೆ ಪಟ್ಟಿಯಲ್ಲಿರುವ ಯಾವೊಬ್ಬರನ್ನು ಸಿಂಡಿಕೇಟ್ ಅನುಮೋದಿಸದಿದ್ದರೆ, ಸರ್ಕಾರವು, ಹಣಕಾಸು ಅಧಿಕಾರಿಯಾಗಿರಲು ಸೂಕ್ತವೆಂದು ತಾನು ಭಾವಿಸುವ ಅಂಥ ಇತರ ವ್ಯಕ್ತಿಯನ್ನು ನೇಮಕ ಮಾಡಬಹುದು.

1994; ಕರ್ನಾಟಕ ಆ್ಯಕ್ಟ್ 39

# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 1994

## ಪ್ರಕರಣಗಳ ಕ್ರಮಪಟ್ಟಿ

ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:

ಅಧ್ಯಾಯ I

ಪ್ರಾರಂಭಿಕ

1. ಚಿಕ್ಕ ಹೆಸರು ಮತ್ತು ಪ್ರಾರಂಭ.
2. ಪರಿಭಾಷೆಗಳು.

ಅಧ್ಯಾಯ II

ವಿಶ್ವವಿದ್ಯಾಲಯ

3. ವಿಶ್ವವಿದ್ಯಾಲಯದ ಸ್ಥಾಪನೆ ಮತ್ತು ನಿಗಮನ.
4. ಅಧಿಕಾರ ವ್ಯಾಪ್ತಿ ಮತ್ತು ವಿಶೇಷ ಅಧಿಕಾರಗಳಿಗೆ ಅವಕಾಶ.

ಅಧ್ಯಾಯ III

ವಿಶ್ವವಿದ್ಯಾಲಯದ ಉದ್ದೇಶಗಳು

5. ವಿಶ್ವವಿದ್ಯಾಲಯದ ಉದ್ದೇಶಗಳು.
6. ವಿಶ್ವವಿದ್ಯಾಲಯಕ್ಕೆ ಪ್ರವೇಶಾವಕಾಶ.

ಅಧ್ಯಾಯ IV

ವಿಶ್ವವಿದ್ಯಾಲಯದ ಪ್ರಕಾರ್ಯಗಳು ಇತ್ಯಾದಿ

7. ವಿಶ್ವವಿದ್ಯಾಲಯದ ಅಧಿಕಾರಗಳು ಮತ್ತು ಪ್ರಕಾರ್ಯಗಳು.
8. ಹೆಚ್ಚಿನ ಪ್ರಕಾರ್ಯಗಳು.
9. ವಿಶ್ವವಿದ್ಯಾಲಯದ ಹೊಣೆಗಾರಿಕೆ.

9ಎ. ವಿಶ್ವವಿದ್ಯಾಲಯದ ಆದೇಶಗಳನ್ನು ರದ್ದುಗೊಳಿಸಲು ಅಧಿಕಾರ.

ಅಧ್ಯಾಯ V

ವಿಶ್ವವಿದ್ಯಾಲಯದ ಅಧಿಕಾರಿಗಳು

10. ವಿಶ್ವವಿದ್ಯಾಲಯದ ಅಧಿಕಾರಿಗಳು.
11. ಕುಲಪತಿ.
12. ಪ್ರೊ-ಚಾನ್ಸಲರು.
13. ಉಪ-ಕುಲಪತಿ.
14. ಉಪ-ಕುಲಪತಿಯ ಅಧಿಕಾರಗಳು ಮತ್ತು ಕರ್ತವ್ಯಗಳು.

**12. ಪ್ರೊ-ಚಾನ್ಸಲರು.**-(1) ಕರ್ನಾಟಕ ಉನ್ನತ ಶಿಕ್ಷಣ ಖಾತೆಯ ಪ್ರಭಾರ ಹೊಂದಿರುವ ಸಚಿವರು ಅವರ ಹುದ್ದೆಯ ಬಲದಿಂದಾಗಿ ವಿಶ್ವವಿದ್ಯಾಲಯದ ಪ್ರೊ-ಚಾನ್ಸಲರ್ ಆಗಿರತಕ್ಕದ್ದು.

(2) ಪ್ರೊ-ಚಾನ್ಸಲರು ಶಾಸನಗಳ ಅಡಿಯಲ್ಲಿ ತನಗೆ ಪ್ರದತ್ತವಾಗಬಹುದಾದ ಅಂಥ ಕುಲಪತಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳನ್ನು ಚಲಾಯಿಸತಕ್ಕದ್ದು.

**13. ಉಪ-ಕುಲಪತಿ.**- (1) ಉಪ-ಕುಲಪತಿಯು ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವಿದ್ಯಾವಿಷಯಕ ಮುಖ್ಯಸ್ಥ ಮತ್ತು ಆಡಳಿತ ಮುಖ್ಯಸ್ಥನಾಗಿ ಕಾರ್ಯನಿರ್ವಹಿಸತಕ್ಕದ್ದು.

(2) ಕುಲಪತಿಯು, ಉಪ-ಕುಲಪತಿಯನ್ನು ಇಂಜಿನಿಯರಿಂಗ್, ತಂತ್ರಜ್ಞಾನ ಅಥವಾ ಶಿಕ್ಷಣ ಕ್ಷೇತ್ರದಲ್ಲಿ ತಜ್ಞರಾಗಿರುವ ಮತ್ತು ಈ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿ ಉಲ್ಲೇಖಿಸಿರುವ ಸಮಿತಿಯು ಶಿಫಾರಸು ಮಾಡುವ ಮೂರು ಜನರ ಪಟ್ಟಿಯಿಂದ ಆಯ್ಕೆ ಮಾಡಿ ನೇಮಕಮಾಡತಕ್ಕದ್ದು ಮತ್ತು ಅಂಥ ಪಟ್ಟಿಯು ಉಪಸಮಿತಿಯ ಯಾವೊಬ್ಬ ಸದಸ್ಯನ ಹೆಸರನ್ನು ಒಳಗೊಂಡಿರತಕ್ಕದ್ದಲ್ಲ.

(3) (2)ನೇ ಉಪ-ಪ್ರಕರಣದ ಉದ್ದೇಶಕ್ಕಾಗಿ,ಸಮಿತಿಯು ಕುಲಪತಿಯಿಂದ ನಾಮನಿರ್ದೇಶಿತರಾದ ವಿದ್ಯಾವಿಷಯಕ ಸೆನೆಟಿನ ಒಬ್ಬ ಸದಸ್ಯ, ಕಾರ್ಯಕಾರಿ ಪರಿಷತ್ತಿನ ಒಬ್ಬ ಸದಸ್ಯ, ಸರ್ಕಾರದ ಒಬ್ಬ ಪ್ರತಿನಿಧಿ ಮತ್ತು ಇಂಜಿನಿಯರಿಂಗ್, ತಂತ್ರಜ್ಞಾನ ಮತ್ತು ಕೈಗಾರಿಕಾ ರಂಗದಲ್ಲಿ ತಜ್ಞನಾದ ಒಬ್ಬ ವ್ಯಕ್ತಿ ಇವರನ್ನು ಒಳಗೊಂಡಿರತಕ್ಕದ್ದು:

ಪರಂತು, ಸಮಿತಿಯು ಶಿಫಾರಸು ಮಾಡಿದ ಯಾವೊಬ್ಬ ಸದಸ್ಯರೂ ನೇಮಕಾತಿಯನ್ನು ಅಂಗೀಕರಿಸಲು ಇಚ್ಛಿಸದಿದ್ದರೆ, ಅಥವಾ ಶಿಫಾರಸು ಮಾಡಲಾದ ಯಾವೊಬ್ಬ ವ್ಯಕ್ತಿಯನ್ನು ಕುಲಪತಿಯು ಅಂಗೀಕರಿಸದಿದ್ದರೆ, ಕುಲಪತಿಯು, ಸಮಿತಿಯಿಂದ ಹೊಸ ಶಿಫಾರಸನ್ನು ತರಿಸಿಕೊಳ್ಳಬಹುದು:

ಮತ್ತು ಪರಂತು, ಕುಲಪತಿಯು, ಮೊದಲನೇ ಉಪ-ಕುಲಪತಿಯನ್ನು ರಾಜ್ಯ ಸರ್ಕಾರವು ಶಿಫಾರಸು ಮಾಡಿದ ಹೆಸರುಗಳ ಪಟ್ಟಿಯಿಂದ ಆಯ್ಕೆ ಮಾಡಿ ನೇಮಕ ಮಾಡತಕ್ಕದ್ದು.

(4) ಉಪ-ಕುಲಪತಿಯ ಪದಾವಧಿಯು ಮೂರು ವರ್ಷಗಳಾಗಿರತಕ್ಕದ್ದು. ಇದು ಕುಲಪತಿಯ ಇಚ್ಛಾನುಸಾರವಾಗಿ ಅಷ್ಟೇ ಕಾಲಾವಧಿಯ ಮತ್ತೊಂದು ಅವಧಿಗೆ ವಿಸ್ತರಿಸಬಹುದಾಗಿರತಕ್ಕದ್ದು:

ಪರಂತು, ಉಪ-ಕುಲಪತಿಯು ತನ್ನ ಸಹಿಯೊಂದಿಗೆ ಲಿಖಿತದಲ್ಲಿ ಕುಲಪತಿಗೆ ಮನವಿ ಸಲ್ಲಿಸುವ ಮೂಲಕ ಮತ್ತು ಮೂರು ತಿಂಗಳ ನೋಟೀಸನ್ನು ನೀಡಿದ ತರುವಾಯ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು.

[1][(4ಎ) ಕುಲಪತಿಯನ್ನು, ಈ ಅಧಿನಿಯಮದ ಉಪಬಂಧಗಳನ್ನು ಉದ್ದೇಶಪೂರ್ವಕವಾಗಿ ಬಿಟ್ಟುಬಿಡುವ ಅಥವಾ ನೆರವೇರಿಸಲು ನಿರಾಕರಿಸುವ ಅಥವಾ ಅವನಲ್ಲಿ ನಿಹಿತವಾದ ಅಧಿಕಾರಗಳನ್ನು ದುರುಪಯೋಗ ಪಡಿಸಿಕೊಂಡ ಕಾರಣದ ಮೇಲೆ ಮತ್ತು ರಾಜ್ಯ ಸರ್ಕಾರವು, (4ಬಿ) ಉಪಪ್ರಕರಣದ ಅಡಿಯಲ್ಲಿ ಅದರಿಂದ ಆದೇಶಿಸಲಾದ ವಿಚಾರಣೆಯ ವರದಿಯನ್ನು ಪರಿಗಣಿಸಿದ ನಂತರ ಮತ್ತು ರಾಜ್ಯ ಸರ್ಕಾರವು ಸೂಚಿಸಿದ ಸಲಹೆಯ ಮೇಲೆ ಕುಲಾಧಿಪತಿಯು ಹೊರಡಿಸಿದ ಆದೇಶದ ಹೊರತು, ಪದದಿಂದ ತೆಗೆದುಹಾಕತಕ್ಕದ್ದಲ್ಲ.

(4ಬಿ) ಈ ಪ್ರಕರಣದ ಅಡಿಯಲ್ಲಿ ಒಂದು ವಿಚಾರಣೆಯನ್ನು ನಡೆಸುವ ಉದ್ದೇಶಕ್ಕಾಗಿ, ರಾಜ್ಯಸರ್ಕಾರವು, ಉಚ್ಚ ನ್ಯಾಯಾಲಯದ ಅಥವಾ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿರುವ ಅಥವಾ ಆಗಿದ್ದ ವ್ಯಕ್ತಿಯನ್ನು ನೇಮಕ ಮಾಡತಕ್ಕದ್ದು. ವಿಚಾರಣಾ ಪ್ರಾಧಿಕಾರವು, ಕುಲಪತಿಯು ಮನವಿಯನ್ನು ಸಲ್ಲಿಸಲು ಅವಕಾಶ ನೀಡಿದ ನಂತರ ವಿಚಾರಣೆ ನಡೆಸತಕ್ಕದ್ದು ಮತ್ತು ವಿಧಿಸಬೇಕಾದ ಯಾವುದೇ ದಂಡನೆ ಇದ್ದರೆ, ಅದೂ ಒಳಗೊಂಡಂತೆ ಒಂದು ವರದಿಯನ್ನು ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯಸರ್ಕಾರವು, ವರದಿಯನ್ನು ಪರಿಶೀಲಿಸಿದ ನಂತರ, ಕುಲಾಧಿಪತಿಗೆ ಸಲಹೆ ನೀಡತಕ್ಕದ್ದು. ಕುಲಾಧಿಪತಿಯು ಅಂಥ ಸಲಹೆಗೆ ಅನುಸಾರವಾಗಿ ಕ್ರಮ ಕೈಗೊಳ್ಳತಕ್ಕದ್ದು.][1]

1. 2014ರ ಅಧಿನಿಯಮ ಸಂಖ್ಯೆ 22ರ ಮೂಲಕ ದಿನಾಂಕ: 03.07.2014ರಿಂದ ಸೇರಿಸಲಾಗಿದೆ.

(5) ಕುಲಪತಿಯು, ಪದಾವಧಿಯು ಮುಕ್ತಾಯಗೊಂಡ ಉಪಕುಲಪತಿಗೆ ನಿರ್ದೇಶನ ನೀಡಿ, ಆ ನಿರ್ದೇಶನದಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಒಂದು ವರ್ಷಕ್ಕೆ ಮೀರದಂಥ ಅವಧಿಗೆ ಪದದಲ್ಲಿ ಮುಂದುವರಿಯಲು ನಿರ್ದೇಶಿಸಬಹುದು.

(6) ಉಪ-ಕುಲಪತಿಯ ಉಪಲಬ್ಧಿಗಳು ಮತ್ತು ಸೇವಾ ಷರತ್ತುಗಳು ಕುಲಪತಿಯು ನಿರ್ಧರಣೆ ಮಾಡಬಹುದಾದಂಥದ್ದಾಗಿರತಕ್ಕದ್ದು ಮತ್ತು ಅವನ ನೇಮಕಾತಿಯಾದ ತರುವಾಯ ಅದನ್ನು ಅವನಿಗೆ ತೊಂದರೆಯಾಗುವಂತೆ ಬದಲಾಯಿಸತಕ್ಕದ್ದಲ್ಲ.

(7) ಪದಾವಧಿಯು ಮುಕ್ತಾಯವಾದ ಕಾರಣದಿಂದಲ್ಲದೆ, ರಜೆ, ಅನಾರೋಗ್ಯ ಅಥವಾ ಇತರ ಕಾರಣದಿಂದಾಗಿ ಉಪ-ಕುಲಪತಿಯ ಹುದ್ದೆಯಲ್ಲಿ ತಾತ್ಕಾಲಿಕ ರಿಕ್ತತೆಯು ಉಂಟಾದಲ್ಲಿ, ಕಾರ್ಯಕಾರಿ ಪರಿಷತ್ತು ಸಾಧ್ಯವಾದಷ್ಟು ಬೇಗನೆ ಮತ್ತು ಕುಲಪತಿಯ ಅನುಮೋದನೆಗೆ ಒಳಪಟ್ಟು, ಉಪ-ಕುಲಪತಿಯ ಹುದ್ದೆಯ ಕರ್ತವ್ಯಗಳನ್ನು ನಿರ್ವಹಿಸುವುದಕ್ಕಾಗಿ, ಅದು ಸೂಕ್ತವೆಂದು ಭಾವಿಸಬಹುದಾದಂಥ ವ್ಯವಸ್ಥೆಯನ್ನು ಮಾಡತಕ್ಕದ್ದು, ಮತ್ತು ಇತರ ವ್ಯವಸ್ಥೆಯನ್ನು ಮಾಡುವವರೆಗೂ, ಕುಲಪತಿಯು ನಾಮನಿರ್ದೇಸಬಹುದಾಂಥ, ವಿಶ್ವವಿದ್ಯಾಲಯದ ಅಧಿಕಾರಿಯು ಉಪ-ಕುಲಪತಿಯ ಹುದ್ದೆಯ ಪ್ರಸ್ತುತ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**14. ಉಪ-ಕುಲಪತಿಯ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಉಪ-ಕುಲಪತಿಯು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಕಾರ್ಯಕಾರಿ ಪರಿಷತ್ತಿನ ಪದನಿಮಿತ್ತ ಅಧ್ಯಕ್ಷನಾಗಿರತಕ್ಕದ್ದು. ಅವನು ಕುಲಪತಿ ಮತ್ತು ಪ್ರೊ-ಚಾನ್ಸಲರ್ ಅವರ ಗೈರು ಹಾಜರಿಯಲ್ಲಿ ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪದವಿಗಳನ್ನು ಪಡೆಯಲು ಹಕ್ಕುಳ್ಳವರಾದ ವ್ಯಕ್ತಿಗಳಿಗೆ ಅವುಗಳನ್ನು ಪ್ರದಾನ ಮಾಡತಕ್ಕದ್ದು.

(2)ಉಪ-ಕುಲಪತಿಯು, ವಿಶ್ವವಿದ್ಯಾಲಯದ ವ್ಯವಹರಣೆಗಳ ಮೇಲೆ ಸಾಮಾನ್ಯ ನಿಯಂತ್ರಣವನ್ನು ಚಲಾಯಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯದಲ್ಲಿ ಯುಕ್ತವಾಗಿ ಶಿಸ್ತುಪಾಲನೆ ಮಾಡುವ ಜವಾಬ್ದಾರಿಯನ್ನು ಹೊಂದಿರತಕ್ಕದ್ದು.

(3) ಉಪ-ಕುಲಪತಿಯು ಕಾರ್ಯಕಾರಿ ಸಮಿತಿಯ ಸಭೆಗಳನ್ನು ಏರ್ಪಡಿಸತಕ್ಕದ್ದು.

(4) ಉಪ-ಕುಲಪತಿಯು, ಈ ಅಧಿನಿಯಮದ ಉಪಬಂಧಗಳು ಮತ್ತು ಶಾಸನಗಳು ಹಾಗೂ ವಿನಿಯಮಗಳ ನಿಷ್ಠಾಪೂರ್ವಕ ಪಾಲನೆಯನ್ನು ಖಚಿತಪಡಿಸತಕ್ಕದ್ದು ಮತ್ತು ಈ ಸಂಬಂಧವಾಗಿ ಅವಶ್ಯವಾಗುವ ಅಂಥ ಎಲ್ಲ ಅಧಿಕಾರಗಳನ್ನು ಅವನು ಹೊಂದಿರತಕ್ಕದ್ದು.

(5) ಉಪ-ಕುಲಪತಿಯು, ವಾರ್ಷಿಕ ಹಣಕಾಸು ಅಂದಾಜುಗಳು ಮತ್ತು ವಾರ್ಷಿಕ ಲೆಕ್ಕಪತ್ರಗಳು ಹಾಗೂ ಆಯವ್ಯಯ ಪಟ್ಟಿಯನ್ನು ಕಾರ್ಯಕಾರಿ ಪರಿಷತ್ತಿಗೆ ಸಲ್ಲಿಸುವ ಜವಾಬ್ದಾರಿಯನ್ನು ಹೊಂದಿರತಕ್ಕದ್ದು.

(6) ಉಪ-ಕುಲಪತಿಯು, ಅವನ ಅಭಿಪ್ರಾಯದಲ್ಲಿ ಕೂಡಲೇ ಕ್ರಮ ತೆಗೆದುಕೊಳ್ಳುವುದು ಅಗತ್ಯವೆನ್ನಿಸುವ ಯಾವುದೇ ತುರ್ತು ಪರಿಸ್ಥಿತಿಯಲ್ಲಿ ಕ್ರಮ ಕೈಗೊಳ್ಳಬಹುದು. ಅಂಥ ಸಂದರ್ಭದಲ್ಲಿ ಮತ್ತು ಅನಂತರ ಸಾಧ್ಯವಾದಷ್ಟು ಶೀಘ್ರವಾಗಿ, ಸಾಮಾನ್ಯವಾಗಿ ಅಂಥ ವಿಷಯದಲ್ಲಿ ವ್ಯವಹರಿಸುವ ಪ್ರಾಧಿಕಾರಿಗೆ ತಾನು ತೆಗೆದುಕೊಂಡ ಕ್ರಮದ ಬಗ್ಗೆ ವರದಿ ಮಾಡತಕ್ಕದ್ದು.

(7) (6)ನೇಪ್ರಕರಣದ ಮೇರೆಗೆ ಉಪ-ಕುಲಪತಿಯು ತೆಗೆದುಕೊಂಡ ಯಾವುದೇ ಕ್ರಮವು ವಿಶ್ವವಿದ್ಯಾಲಯದ ಸೇವೆಯಲ್ಲಿರುವ ಯಾವೊಬ್ಬ ವ್ಯಕ್ತಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡಿದಲ್ಲಿ, ಅಂಥ ವ್ಯಕ್ತಿಗೆ, ಆಕ್ರಮವನ್ನು ಕೈಗೊಂಡ ವಿಷಯವು ತಿಳಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಕಾರ್ಯಕಾರಿ ಪರಿಷತ್ತಿಗೆ ಅಪೀಲು ಸಲ್ಲಿಸಬಹುದು.

(8) ಕಾರ್ಯಕಾರಿ ಪರಿಷತ್ತಿನ ಅಪೀಲು ವಿಚಾರಣಾ ಆದೇಶದಿಂದ ಬಾಧಿತನಾದ ಯಾವೊಬ್ಬ ವ್ಯಕ್ತಿಯು, ಅವನಿಗೆ ಅಂಥ ಆದೇಶವು ತಲುಪಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಕುಲಪತಿಗೆ ಅಪೀಲು ಸಲ್ಲಿಸಬಹುದು ಮತ್ತು ಅಂಥ ಅಪೀಲಿನ ಬಗ್ಗೆ ಕುಲಪತಿಯ ತೀರ್ಮಾನವು ಅಂತಿಮವಾಗಿರತಕ್ಕದ್ದು.

(9) ಈ ಹಿಂದಿನ ಉಪ-ಪ್ರಕರಣದ ಉಪಬಂಧಗಳಿಗೆ ಒಳಪಟ್ಟು, ಉಪ-ಕುಲಪತಿಯು, ವಿಶ್ವವಿದ್ಯಾಲಯದ ಅಧಿಕಾರಿಗಳು, ಬೋಧಕರು ಮತ್ತು ಇತರ ನೌಕರರ ನೇಮಕಾತಿ, ಅಮಾನತುಗೊಳಿಸುವುದು ಮತ್ತು ವಜಾ ಮಾಡುವುದಕ್ಕೆ ಸಂಬಂಧಪಟ್ಟಂತೆ, ಕಾರ್ಯಕಾರಿ ಪರಿಷತ್ತಿನ ಆದೇಶಗಳನ್ನು ಜಾರಿಗೊಳಿಸತಕ್ಕದ್ದು.

(10) ಉಪ-ಕುಲಪತಿಯು ಶಾಸನಗಳ ಮೂಲಕ ನಿಯಮಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

**15. ರಿಜಿಸ್ಟ್ರಾರ್**.- (1) ಶಾಸನಗಳ ಮೂಲಕ ನಿಯಮಿಸ ಬಹುದಾದ ಅಂಥ ಅವಧಿಗೆ ಮತ್ತು ಅಂಥ ನಿಬಂಧನೆಗಳ ಮೇಲೆ ಉಪ-ಕುಲಪತಿಯು ಕಾರ್ಯಕಾರಿ ಪರಿಷತ್ತಿಗೆ ಶಿಫಾರಸು ಮಾಡಿದ ಮೂರು ಜನರಿಗೆ ಕಡಿಮೆಯಿಲ್ಲದ ವ್ಯಕ್ತಿಗಳ ಪೈಕಿ, ಕಾರ್ಯಕಾರಿ ಪರಿಷತ್ತಿನ ಅನುಮೋದನೆಯೊಂದಿಗೆ ನೇಮಕಾತಿ ಮಾಡಲಾದ ರಿಜಿಸ್ಟ್ರಾರನು ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು.

(2) ರಿಜಿಸ್ಟ್ರಾರನು, ಶಾಸನಗಳ ಮೂಲಕ ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಪರವಾಗಿ ಅಥವಾ ಅದರ ವಿರುದ್ಧವಾಗಿ ಹೂಡಲಾಗುವ ಎಲ್ಲ ದಾವೆಗಳು ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದಪತ್ರಗಳಿಗೆ ರಿಜಿಸ್ಟ್ರಾರನು, ಸಹಿಯನ್ನು ಮತ್ತು ಸತ್ಯಾಪನೆಯನ್ನು ಮಾಡತಕ್ಕದ್ದು ಮತ್ತು ಅಂಥ ದಾವೆಗಳು ಮತ್ತು ವ್ಯವಹರಣೆಗಳಲ್ಲಿ ಎಲ್ಲ ಆದೇಶಿಕೆಗಳನ್ನು ರಿಜಿಸ್ಟ್ರಾರನ ಹೆಸರಿನಲ್ಲಿ ನೀಡತಕ್ಕದ್ದು ಮತ್ತು ಅವನಿಗೆ ಜಾರಿಗೊಳಿಸತಕ್ಕದ್ದು.

**16. ರಿಜಿಸ್ಟ್ರಾರ್ (ಮೌಲ್ಯಮಾಪನ)**.- ರಿಜಿಸ್ಟ್ರಾರನು (ಮೌಲ್ಯಮಾಪನ) ಕಾರ್ಯಕಾರಿ ಪರಿಷತ್ತಿನಿಂದ ನೇಮಕಾತಿ ಹೊಂದಿದ ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಅವನಕರ್ತವ್ಯಗಳು ಮತ್ತು ಜವಾಬ್ದಾರಿಗಳು ಶಾಸನಗಳ ಮೂಲಕ ನಿರ್ದಿಷ್ಟಪಡಿಸಿದಂತಿರತಕ್ಕದ್ದು.

**17. ಹಣಕಾಸು ಅಧಿಕಾರಿ**.- ಹಣಕಾಸು ಅಧಿಕಾರಿಯು ಕಾರ್ಯಕಾರಿ ಪರಿಷತ್ತಿನಿಂದ ನೇಮಕ ಹೊಂದಿದ ವಿಶ್ವವಿದ್ಯಾಲಯದ ಪೂರ್ಣಕಾಲಿಕ ಅಧಿಕಾರಿಯಾಗಿರತಕ್ಕದ್ದು. ಅವನ ಕರ್ತವ್ಯಗಳು ಮತ್ತು ಜವಾಬ್ದಾರಿಗಳು ಶಾಸನಗಳ ಮೂಲಕ ನಿರ್ದಿಷ್ಟಪಡಿಸಿದಂತಿರತಕ್ಕದ್ದು.

**18. ಪ್ರಾದೇಶಿಕ ಕಛೇರಿಗಳ ನಿರ್ದೇಶಕರು**.- ರೆವಿನ್ಯೂ ವಿಭಾಗಗಳ ಪ್ರತಿಯೊಂದು ಕೇಂದ್ರ ಕಾರ್ಯಸ್ಥಾನದಲ್ಲೂ ಪ್ರಾದೇಶಿಕ ಕಛೇರಿಗಳನ್ನು ಸ್ಥಾಪಿಸತಕ್ಕದ್ದು ಮತ್ತು ಶಾಸನಗಳ ಮೂಲಕ ನಿಯಮಿಸ ಬಹುದಾದಂಥ ಕರ್ತವ್ಯಗಳನ್ನು ನಿರ್ವಹಿಸಲು, ಅಂಥಪ್ರಕಾರ್ಯಗಳನ್ನು ನೆರವೇರಿಸಲು ಮತ್ತು ಅಂಥ ಅಧಿಕಾರಗಳನ್ನು ಚಲಾಯಿಸಲು ನಿರ್ದೇಶಕನು ಮುಖ್ಯಸ್ಥನಾಗಿರುತ್ತಾನೆ.

## ಅಧ್ಯಾಯ VI
### ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**19. ವಿಶ್ವವಿದ್ಯಾಲಯದ ಪ್ರಾಧಿಕಾರಗಳು**.- (1) ಈ ಕೆಳಕಂಡವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(i)ಕಾರ್ಯಕಾರಿ ಪರಿಷತ್ತು;

(ii) ವಿದ್ಯಾವಿಷಯಕ ಸೆನೆಟ್.

(2) 10ನೇ ಪ್ರಕರಣದ (4)ನೇ ಉಪ-ಪ್ರಕರಣದ ಅಡಿಯಲ್ಲಿ ಮೊದಲನೇ ಉಪ-ಕುಲಪತಿಯನ್ನು ನೇಮಕ ಮಾಡಿದ ತರುವಾಯ ಸಾಧ್ಯವಾದಷ್ಟು ಶೀಘ್ರವಾಗಿ, ಕುಲಪತಿಯು, ಕಾರ್ಯಕಾರಿ ಪರಿಷತ್ತು ಮತ್ತು ವಿದ್ಯಾವಿಷಯಕ ಸೆನೆಟನ್ನು ರಚಿಸತಕ್ಕದ್ದು.

(3) ಕಾರ್ಯಕಾರಿ ಪರಿಷತ್ತು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು ಎಂದರೆ:-

(ಎ) ಉಪ-ಕುಲಪತಿ, ಪದನಿಮಿತ್ತ ಅಧ್ಯಕ್ಷ;

ಅನುಬಂಧ-4

## ಸ್ವಂತ ಕಟ್ಟಡ ಹಾಗೂ ಭೂಮಿ ಹೊಂದಿರುವ ವಿಶ್ವವಿದ್ಯಾಲಯಗಳ ವಿವರ

| ಕ್ರ.ಸಂ. | ವಿಶ್ವವಿದ್ಯಾಲಯದ ಹೆಸರು | ಸ್ವಂತ ಕಟ್ಟಡ ಮತ್ತು ಭೂಮಿ |
|---|---|---|
| 1 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | ಇದೆ |
| 2 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ, | ಇದೆ |
| 3 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | ಇದೆ |
| 4 | ಗುಲ್ಬರ್ಗಾವಿಶ್ವವಿದ್ಯಾಲಯ, ಕಲಬುರಗಿ | |
| 5 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | ಇದೆ |
| 6 | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ | ಇದೆ |
| 7 | ಕನ್ನಡ ವಿಶ್ವವಿದ್ಯಾಲಯ, ಹಂಪಿ | ಇದೆ |
| 8 | ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಮೈಸೂರು | ಇದೆ |
| 9 | ವಿಶ್ವೇಶ್ವರಯ್ಯತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | ಇದೆ |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | ಇದೆ |
| 11 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | ಇದೆ |
| 12 | ಡಾ. ಗಂಗೂಬಾಯಿಹಾನಗಲ್ ಸಂಗೀತ ಮತ್ತು ಪ್ರದರ್ಶನಕಲೆಗಳ ವಿಶ್ವವಿದ್ಯಾಲಯ, ಮೈಸೂರು | ಸದರಿ ವಿಶ್ವವಿದ್ಯಾಲಯವು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆಗೆ ಸೇರಿದ ಲಕ್ಷ್ಮೀಪುರಂನಲ್ಲಿರುವ 123 ವರ್ಷಗಳ ಹಳೆಯ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ವಿಶ್ವವಿದ್ಯಾಲಯದ ಕ್ಯಾಂಪಸ್ ನಿರ್ಮಾಣಕ್ಕಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಸರ್ದಾರ್ ವಲ್ಲಭಾ ಬಾಯಿ ಪಟೇಲ್ ನಗರದಲ್ಲಿ 5 ಎಕರೆ 3 ಗುಂಟೆ ನಿವೇಶನ ಮಂಜೂರಾಗಿರುತ್ತದೆ. ಅಲ್ಲದೆ ಹುಣಸೂರು ತಾಲೂಕಿನ ಬಿಳಿಕೆರೆ ಹೋಬಳಿ ಧರ್ಮಪುರ ಗ್ರಾಮದ ಸರ್ವೆ ನಂ:155 ರಲ್ಲಿ 65 ಎಕರೆ ಜಮೀನು ಮಂಜೂರಾಗಿರುತ್ತದೆ. |
| 13 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | ಇದೆ |
| 14 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ. | ಇದೆ |

| | | |
|---|---|---|
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಜಾಗವು ಕೇಂದ್ರ ಅರಣ್ಯ ಮೀಸಲು ಪ್ರದೇಶವಾಗಿದ್ದು, ಯಾವುದೇ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿಲ್ಲದ ಕಾರಣ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಾಪನೆಗೆ ಹಿರೇಬಾಗೇವಾಡಿ-ಹಾಲಗಿಮರ್ಡಿ ಗ್ರಾಮದಲ್ಲಿ ಒಟ್ಟು 126 ಎಕರೆ 27 ಗುಂಟೆ ಜಮೀನನ್ನು ಮಂಜೂರು ಮಾಡಲಾಗಿದೆ. |
| 16 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು | ಇದೆ |
| 17 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಶಿಗ್ಗಾವಿ, ಹಾವೇರಿ ಜಿಲ್ಲೆ. | ಇದೆ |
| 18 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | ಇದೆ |
| 19 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ | ಇದೆ |
| 20 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | ಇದೆ |
| 21 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | ಇದೆ |
| 22 | ಬಿ ಆರ್ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು | ಇದೆ |
| 23 | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು. . | ಇದೆ |
| 24 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | ಹಿಂದಿನ ಸರ್ಕಾರಿ ವಿಜ್ಞಾನ ಕಾಲೇಜು, ಬೆಂಗಳೂರು, ಅನ್ನು ಉನ್ನತೀಕರಿಸಿದ ಪ್ರಯುಕ್ತ, ನೃಪತುಂಗ ವಿಶ್ವವಿದ್ಯಾಲಯವು ಸ್ಥಾಪನೆಯಾಗಿದೆ. ಹಿಂದಿನ ಸರ್ಕಾರಿ ಕಾಲೇಜು, ಬೆಂಗಳೂರಿನ ಸರ್ಕಾರಿ ಕಟ್ಟಡದಲ್ಲಿ ಈ ವಿಶ್ವವಿದ್ಯಾಲಯವು ಕಾರ್ಯ ನಿರ್ವಹಿಸುತ್ತಿದೆ. ಕಾಲೇಜು ಶಿಕ್ಷಣ ಇಲಾಕೆಯಿಂದ ಈ ಕಟ್ಟಡವನ್ನು ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲಾಗಿದೆ. |
| 25 | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು, ವಿಶ್ವವಿದ್ಯಾಲಯ. | ಇದೆ |